ಸಂಪುಟ: 04 ಸಂಚಿಕೆ: 249 ಪುಟಗಳು: 08 ಶುಕ್ರವಾರ 22 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

ಮುಂಜಾನೆ ಮಾತು
ಭಾವನೆಗಳಿಗೆ ಒಳಗಾದಾಗ ಅದು ನಮ್ಮನ್ನು ಶಕ್ತಿಹೀನರನ್ನಾಗಿ ಮಾಡುತ್ತದೆ ಮತ್ತು ಕರ್ತವ್ಯದಿಂದ ವಂಚಿತರಾಗುವಂತೆ ಮಾಡುತ್ತದೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಶೀಘ್ರದಲ್ಲೇ ರಾಜ್ಯದ ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರ ಸಭೆ; ಸಚಿವ

• ಉದಯವಾಹಿನಿ, ದಾವಣಗೆರೆ

ರಾಜ್ಯದ ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರ ಸಭೆಯನ್ನು ಶೀಘ್ರವೇ ಬೆಂಗಳೂರಿನಲ್ಲಿ ಕರೆಯಲಾಗಿದ್ದು, ಸಿಬ್ಬಂದಿ ಕೊರತೆ ಸೇರಿದಂತೆ ಯಾವ ಜಿಲ್ಲೆಗಳ ಆಸ್ಪತ್ರೆಗಳಲ್ಲಿ ಏನೇನು ಕೊರತೆ ಇದೆ ಎನ್ನುವ ಬಗ್ಗೆ ಮಾಹಿತಿ ಪಡೆಯಲಾಗುತ್ತದೆ. ನಂತರ ಯಾವ ಜಿಲ್ಲೆಗೆ ಏನೇನು ಕೊರತೆ ಇದೆ ಎಂದು ತಿಳಿದು ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ರಾಜ್ಯದ ಯಾವುದೇ ಜಿಲ್ಲೆಗಳಲ್ಲಿ ಔಷಧಿಯ ಸರಬರಾಜಿನಲ್ಲಿ ಯಾವುದೇ ಕೊರತೆ ಇಲ್ಲ. ಅಲ್ಲದೇ ಜಿಲ್ಲಾಸ್ಪತ್ರೆಗಳಲ್ಲಿ ಔಷಧಿ ಖರೀದಿಗೆ ಅನುದಾನ ಇದೆ ಎಂದರು. ದಾವಣಗೆರೆ ಜಿಲ್ಲಾಸ್ಪತ್ರೆಯಲ್ಲಿ 200 ಹಾಸಿಗೆಗಳನ್ನು ಹೊಂದಿರುವ 30ಕೋಟಿ ರೂ. ವೆಚ್ಚದಲ್ಲಿ ತಾಯಿ ಮತ್ತು ಮುಗುವಿನ ಅಗತ್ಯ ಇರುವ ಎಲ್ಲಾ ಸಲಕರಣೆಗಳು ಲಭ್ಯವಿದ್ದು, ಉತ್ತಮ ಚಿಕಿತ್ಸೆ ಸಿಗಲಿದೆ. ಇಲ್ಲಿ ನವಜಾತ ಶಿಶುಗಳ ತುರ್ತು ನಿಗಾ ಘಟಕ, ಅಗತ್ಯ ಚಿಕಿತ್ಸಾ ವಿಭಾಗ, ರಕ್ತನಿಧಿ ಬಂಧಾರ ಈಗಾಗಲೇ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಹಾಲಿನ ಕೇಂದ್ರ ಮಾಡಲು ಸಿದ್ದತೆ ನಡೆಸಲಾಗಿದೆ ಎಂದರು.

ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಭೇಟಿ ಮಾಡಿದ ಸಿಎಂ

• ಉದಯವಾಹಿನಿ, ಬೆಂಗಳೂರು

ದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಳಿಗ್ಗೆ ಸುಪ್ರೀಂಕೋರ್ಟ್‌ನ ಹಿರಿಯ ವಕೀಲ ಅಭಿಷೇಕ್ ಮನುಸಿಂಘ್ವಿ ಅವರ ಮನೆಗೆ ತೆರಳಿ ಮಹತ್ವದ ಮಾತುಕತೆ ನಡೆಸಿದ್ದಾರೆ. ಅಭಿಷೇಕ್ ಮನುಸಿಂಘ್ವಿ ಕಾಂಗ್ರೇಸ್‌ನ ರಾಜ್ಯಸಭಾ ಸದಸ್ಯರಾಗಿದ್ದು, ಸಿದ್ದರಾಮಯ್ಯ ಅವರ ಕುಟುಂಬದ ವಿರುದ್ಧ ಕೇಳಿಬಂದಿರುವ ಮುಡಾ ಹಗರಣದಲ್ಲಿ ವಾದ ಮಂಡಿಸಿದರು. ಕಾನೂನು ಸಲಹೆಗಾರರಾಗಿಯೂ ಕೆಲಸ ಮಾಡಿದ್ದಾರೆ. ಇತ್ತಿಚೆಗೆ ಅಭಿಷೇಕ್ ಮನುಸಿಂಘ್ವಿ ಅವರ ಸಲಹೆ ಮೇರೆಗೆ ಸಿದ್ದರಾಮಯ್ಯ ಅವರ ಕುಟುಂಬ ನಿವೇಶನಗಳನ್ನು ಮುಡಾಗೆ ವಾಪಸ್ ನೀಡಿತ್ತು. ದೂರುದಾರರ ಮನವಿ ಆಧರಿಸಿ ರಾಜ್ಯಪಾಲರ ಅನುಮತಿ ಪಡೆದು ಪ್ರಕರಣ ದಾಖಲಾಗಿದ್ದು, ಲೋಕಾಯುಕ್ತ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಈ ನಡುವೆ ದೂರುದಾರರಾದ ಸ್ನೇಹಮಯಿ ಕೃಷ್ಣ ಜಾರಿ ನಿರ್ದೇಶನಾಲಯಕ್ಕೆ ನೀಡಿದ್ದ ದೂರು ಆಧರಿಸಿ ತನಿಖೆ ನಡೆಯುತ್ತಿದೆ. ಲೋಕಾಯುಕ್ತದಿಂದ ಜನತೆಗೆ ನ್ಯಾಯ ಸಿಗುವುದಿಲ್ಲ. ಮುಡಾ ಪ್ರಕರಣದಲ್ಲಿ ಸಿಬಿಐ ತನಿಖೆ ನಡೆಯಬೇಕು ಎಂದು ಸ್ನೇಹಮಯಿ ಕೃಷ್ಣ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಈ ಹಂತದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿಷೇಕ್ ಮನುಸಿಂಘ್ವಿ ಅವರ ಮನೆಗೆ ಭೇಟಿ ನೀಡಿ ಮಹತ್ವದ ಮಾತುಕತೆ ನಡೆಸಿದ್ದಾರೆ.

ದಾಖಲೆಗಳನ್ನು ಪರಿಶೀಲಿಸದೆ 22 ಲಕ್ಷ ಬಿಪಿಎಲ್ ಕಾರ್ಡ್ ರದ್ದು

• ಉದಯವಾಹಿನಿ, ಬೆಂಗಳೂರು

ಯಾವುದೇ ರೀತಿಯ ಸೂಕ್ತ ದಾಖಲೆಗಳ ಪರಿಶೀಲನೆ ಮಾಡದೇ ಏಕಾಏಕಿ 22 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಿರುವುದು ಕಾಂಗ್ರೇಸ್ ಸರ್ಕಾರದ ಜನವಿರೋಧಿ ನಡೆ ಎಂದು ಜೆಡಿಎಸ್ ವಾಗ್ದಾಳಿ ನಡೆಸಿದೆ. ಈ ಸಂಬಂಧ ಎಕ್‌ಸನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, 22 ಲಕ್ಷ ಕಾರ್ಡ್ ರದ್ದು ಮಾಡುವ ಮೊದಲು ಅನರ್ಹರ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆಯೇ ಅನರ್ಹರು ಎಂದು ಯಾವೆಲ್ಲಾ ಮಾನದಂಡಗಳ ಮೇಲೆ ಪರಿಗಣಿಸಲಾಯಿತು ಎಂದಿದೆ. ದಿನಕ್ಕೊಂದು ಆದೇಶಗಳು, ಗಂಟೆಗೆ ಒಬ್ಬರಂತೆ ಸಚಿವರಿಂದ ಸಮರ್ಥನೆ ಮಾಡಲಾಗುತ್ತಿದೆ ಎಂದು ಆರೋಪಿಸಿರುವ ಜೆಡಿಎಸ್, ಸರ್ಕಾರಿ ನೌಕರರು ಮತ್ತು ತೆರಿಗೆದಾರರ ಬಿಪಿಎಲ್ ಕಾರ್ಡ್‌ಗಳನ್ನಷ್ಟೇ ರದ್ದು ಮಾಡಿದ್ದೇವೆ ಎನ್ನುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಇನ್ನುಳಿದ ಬಡವರ ಕಾರ್ಡ್‌ಗಳನ್ನು ಏಕಾಏಕಿ ರದ್ದು ಮಾಡುವ ಅನಿವಾರ್ಯತೆ ಏನಿತ್ತು ಎಂದು ಪ್ರಶ್ನಿಸಿದೆ.

ಜನರ ಜೀವನ ನರಕ ಮಾಡಲು ಹೊರಟಿದ್ದಾರೆ ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಕರ್ನಾಟಕದ ಜನರ ಜೀವನ ನರಕ ಮಾಡಲು ಹೊರಟಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಸ್ಲಮ್ ನಲ್ಲಿ ವಾಸಿಸಲು ಆಗದ ಜಾಗದಲ್ಲಿ ಏಳು ವಾಸವಾಗಿದ್ದಾರೆ. ಅಂತವರ ಬಿಪಿಎಲ್ ಕಾರ್ಡ್ ರದ್ದಾಗಿದೆ. ಅವರು ತೆರಿಗೆ ಕಟ್ಟುವವರು ಅಂತ ಹೇಳುತ್ತಾರೆ. ಅವರೆಲ್ಲ ತೆರಿಗೆ ಕಟ್ಟುತ್ತಾರಾ ಎಂದು ಪ್ರಶ್ನಿಸಿದರು. ಬಿಪಿಎಲ್ ಕಾರ್ಡ್ ರದ್ದಾದರೆ ಕೇವಲ ಅಕ್ಕಿ ಮಾತ್ರ ರದ್ದಾಗುವುದಿಲ್ಲ. ಔಷದಿ , ಆಸ್ಪತ್ರೆ ಸೌಲಭ್ಯ ಎಲ್ಲಾವೂ ಸ್ಥಗಿತವಾಗುತ್ತವೆ. ಜನರ ಕಷ್ಟ ಅವರಿಗೆ ಅರ್ಥ ಆಗುತ್ತಿಲ್ಲ. ಮುಡಾ ಅಂತ ಹೇಳಿ ಸೈಟ್ ವಾಪಸ್ ನೀಡಿದ್ದರು. ಈಗ ಬಿಪಿಎಲ್ ಕಾರ್ಡ್ ಪಡೆಯಲು ಮತ್ತೆ ಅರ್ಜಿ ಹಾಕಬೇಕಂತೆ ಇದೇನು ಮುಖ್ಯಮಂತ್ರಿಗಳೆ ಇದು ಅತ್ಯಂತ ಜನ ವಿರೋಧಿ ಸರ್ಕಾರ. ಇದು ಯುಟರ್ನ್ ಸರ್ಕಾರ ಎಂದು ವಾಗ್ದಾಳಿ ನಡೆಸಿದರು. ಕಾರ್ಡ್ ರದ್ದು ಮಾಡಿರುವುದನ್ನು ವಿರೋಧಿಸಿದ ಮೇಲೆ ಈಗ ವಾಪಸ್ ತೆಗೆದುಕೊಳ್ಳುವ ಕೆಲಸ ಮಾಡುತ್ತಾರೆ. ರೇಷನ್ ಕಾರ್ಡ್ ರದ್ದಾದವರು ಅರ್ಜಿ ಹಾಕಿದರೆ ತಕ್ಷಣ ವಾಪಸ್ ಕೊಡಲಾಗುವುದು ಎಂದು ಹೇಳುತ್ತಾರೆ. ಅರ್ಜಿ ಹಾಕಿದ ಮೇಲೆ ಕಾರ್ಡ್ ಬರುವುದು ಯಾವಾಗ ಅಲ್ಲಿಯ. ತನಕ ಕಾರ್ಡ್ ರದ್ದಾಗಿರುವ ಬಡವರು ಏನು ತಿನ್ನಬೇಕು ಎಂದು ಪ್ರಶ್ನಿಸಿದರು.

ಲೋಕಾ ಶಾಕ್..!

ಗುರುವಾರ ಬೆಳ್ಳಂಬೆಳಗ್ಗೆ ರಾಜ್ಯದ ಸುಮಾರು 25 ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿ ಭ್ರಷ್ಟ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ್ದಾರೆ. ಬೆಂಗಳೂರು, ಚಿಕ್ಕಬಳ್ಳಾಪುರ, ಮಂಡ್ಯ, ಮಂಗಳೂರು ಸೇರಿದಂತೆ ಹಲವು ಕಡೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಪ್ರಮುಖ ನಾಲ್ವರು ಅಧಿಕಾರಿಗಳ ಕಚೇರಿ ಹಾಗೂ ನಿವಾಸದಲ್ಲಿ ಶೋಧ ನಡೆಸುತ್ತಿದ್ದಾರೆ.

● ಬೆಂಗಳೂರು, ಮಂಗಳೂರು, ಮಂಡ್ಯ ಸೇರಿ ಕರ್ನಾಟಕದ 7 ಕಡೆ ಲೋಕಾಯುಕ್ತ ದಾಳಿ ● ಟೌನ್ ಪ್ಲಾನಿಂಗ್ ನಿರ್ದೇಶಕ ತಿಪ್ಪೇಸ್ವಾಮಿ ಮನೆಯಲ್ಲಿ ಸಿಕ್ತು ಕೆಜಿಗಟ್ಟಲೆ ಚಿನ್ನ, ಬೆಳ್ಳಿ ● ಅಧಿಕಾರಿಗಳೇ ಶಾಕ್! ● ಭ್ರಷ್ಟಾಚಾರ ಆರೋಪ – 4 ಅಧಿಕಾರಿಗಳಿಗೆ ಸೇರಿದ 25 ಸ್ಥಳಗಳಿಗೆ 'ಲೋಕಾ' ದಾಳಿ



• ಉದಯವಾಹಿನಿ, ಬೆಂಗಳೂರು

ನಾಲ್ವರು ಅಧಿಕಾರಿಗಳಿಗೆ ಸಂಬಂಧಿಸಿದ ಒಟ್ಟು 25 ಕಡೆಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲನೆ ಮಾಡುತ್ತಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಭೂ ಹಾಗೂ ಗಣಿ ವಿಜ್ಞಾನ ಇಲಾಖೆಯ ಕೃಷ್ಣವೇಣಿ ಮನೆ ಮೇಲೆ ದಾಳಿ ಮಾಡಲಾಗಿದೆ. ಮಂಡ್ಯದಲ್ಲಿ ಕಾವೇರಿ ನೀರಾವರಿ ನಿಗಮದ ಎಂಡಿ ಮಹೇಶ್, ಬೆಂಗಳೂರಿನ ಟೌನ್ ಅಂಡ್ ಪ್ಲಾನಿಂಗ್ ನಿರ್ದೇಶಕ ತಿಪ್ಪೇಸ್ವಾಮಿ, ಬೆಂಗಳೂರಿನಲ್ಲಿ ಅಬಕಾರಿ ಇಲಾಖೆಯ ಎಸ್‌ಪಿ ಮಹೇಶ್ ಮನೆ ಮೇಲೆ ದಾಳಿ ಮಾಡಲಾಗಿದೆ. ಈ ನಾಲ್ವರು ಅಧಿಕಾರಿಗಳಿಗೆ ಲೋಕಾಯುಕ್ತ ಪೊಲೀಸರು ಶಾಕ್ ಕೊಟ್ಟಿದ್ದು, ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.

ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿ ಕೃಷ್ಣವೇಣಿ ಅವರ ಮಂಗಳೂರಿನ ವೆಲೆನ್ಸಿಯಾದ ಮನೆ ಹಾಗೂ ಕಚೇರಿಗೆ ದಾಳಿ ನಡೆಸಿರುವ ಅಧಿಕಾರಿಗಳು ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ. ಕೃಷ್ಣವೇಣಿ 2 ತಿಂಗಳ ಹಿಂದಷ್ಟೇ ವರ್ಗಾವಣೆ ಆಗಿ ಮಂಗಳೂರಿಗೆ ಬಂದಿದ್ದಾರೆ. ಇವರು ಈ ಹಿಂದೆ ಚಿಕ್ಕಬಳ್ಳಾಪುರದಲ್ಲಿ ಗಣಿ ಇಲಾಖೆ ಅಧಿಕಾರಿಯಾಗಿದ್ದರು. ಚಿಕ್ಕಬಳ್ಳಾಪುರದಲ್ಲಿ ಕೃಷ್ಣವೇಣಿ ವಿರುದ್ಧ ದೂರು ದಾಖಲಾದ ಹಿನ್ನೆಲೆ ಈ ದಾಳಿ ನಡೆದಿದೆ. ಮಂಗಳೂರು ಲೋಕಾಯುಕ್ತ ಎಸ್‌ಪಿ ನಟರಾಜ್ ನೇತೃತ್ವದಲ್ಲಿ ದಾಳಿ ನಡೆದಿದೆ.

ಕಾವೇರಿ ನೀರಾವರಿ ನಿಗಮ ಎಂಡಿ ಮನೆ ಮೇಲೆ ಲೋಕಾ ದಾಳಿ: ಮಂಡ್ಯದಲ್ಲಿ ಲೋಕಾಯುಕ್ತ ಎಸ್‌ಪಿ ಸುರೇಶ್ ಬಾಬು ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಗಿದ್ದು, ಕಾವೇರಿ ನೀರಾವರಿ ನಿಗಮದ ಎಂಡಿ ಮಹೇಶ್ ಮನೆಗಳ ಮೇಲೆ ದಾಳಿ ಮಾಡಲಾಗಿದೆ.

ಆರೋಪಿಗಳ ಒಟ್ಟು 25 ನಿವೇಶನಗಳ ಮೇಲೆ ದಾಳಿ ನಡೆಸಲಾಗಿದ್ದು, ಅಪಾರ ಪ್ರಮಾಣದ ನಗದು, ಚಿನ್ನಾಭರಣ, ಬೆಳ್ಳಿ, ಚಿನ್ನ ಹಾಗೂ ಇತರೆ ವಸ್ತುಗಳು ಪತ್ತೆಯಾಗಿವೆ ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ. ದಾಳಿ ಪೂರ್ಣಗೊಂಡ ಬಳಿಕ ಆರೋಪಿಗಳ ಬಳಿ ಇರುವ ಒಟ್ಟು ಆಸ್ತಿಮೌಲ್ಯ ಎಷ್ಟು ಎಂದು ಗೊತ್ತಾಗಲಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಬಿ. ಅವರ ವಿಜಯನಗರ ಒಂದನೇ ಹಂತದಲ್ಲಿರುವ 'ನಮ್ಮನೆ' ಮೇಲೆ ಲೋಕಾ ದಾಳಿ ನಡೆದಿದ್ದು, ದಾಖಲಾತಿಗಳ ಪರಿಶೀಲನೆ ನಡೆಯುತ್ತಿದೆ. ಬೆಂಗಳೂರು ಯೋಜನಾ ಘಟಕದ ನಿರ್ದೇಶಕ ತಿಪ್ಪೇಸ್ವಾಮಿ ಅವರ ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಕಿನ ನಲ್ಕುದುರೆ ಗ್ರಾಮದಲ್ಲಿರುವ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ.

1 ಬೆಳ್ಳಂಬೆಳಗ್ಗೆ ಬೆಂಗಳೂರು, ಮಂಡ್ಯ, ಮಂಗಳೂರು ಸೇರಿದಂತೆ ರಾಜ್ಯಾದ್ಯಂತ ಲೋಕಾ ದಾಳಿ

2 ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ;

3 ಅಪಾರ ಪ್ರಮಾಣದ ಚಿನ್ನಾಭರಣ ಪತ್ತೆ ಲೋಕಾಯುಕ್ತ' ಶಾಕ್

4 ಏಕಕಾಲಕ್ಕೆ 25 ಕಡೆ ದಾಳಿ.

ಮೂರು ವಾಹನಗಳಲ್ಲಿ ಬಂದ ಅಧಿಕಾರಿಗಳು, ಪೊಲೀಸ್

ಮಂಗಳೂರಿನ ವೇಲೆನ್ಸಿಯಾ ಬಳಿಯ ಫ್ರೆಡ್ ರೋಸ್ ಎನ್ಕಲೇವ್ ಅಪಾರ್ಟ್‌ಮೆಂಟ್‌ಗೆ ಬೆಳಗ್ಗೆಯೇ ಮೂರು ವಾಹನಗಳಲ್ಲಿ ಆಗಮಿಸಿದ ಲೋಕಾ ಅಧಿಕಾರಿಗಳು ದಾಳಿ ನಡೆಸಿದರು. ಮಂಗಳೂರು ಹಾಗೂ ಚಿಕ್ಕಬಳ್ಳಾಪುರ ಲೋಕಾಯುಕ್ತ ಅಧಿಕಾರಿಗಳ ತಂಡ ಜಂಟಿಯಾಗಿ ಕಾರ್ಯಾಚರಣೆ ನಡೆಸಿದೆ. ಮಲ್ಲಿಕಟ್ಟೆ ಬಳಿಯ ಕಚೇರಿಗೂ ಲೋಕಾಯುಕ್ತ ಎಂಟ್ರಿಕೊಟ್ಟಿದೆ.

ಮಹೇಶ್ ಸಂಬಂಧಿಕರ ನಿವಾಸದ ಮೇಲೆ ದಾಳಿ

ಅಕ್ರಮ ಆಸ್ತಿ ಸಂಪಾದನೆ ದೂರು ಬಂದ ಹಿನ್ನೆಲೆ ಮಂಡ್ಯ ಲೋಕಾಯುಕ್ತ ಎಸ್ ಪಿ ಸುರೇಶ್ ಬಾಬು ನೇತೃತ್ವದಲ್ಲಿ ಕಾವೇರಿ ನೀರಾವರಿ ನಿಗಮದ ಎಂಡಿ ಮಹೇಶ ಮನೆ, ಅವರ ಸಂಬಂಧಿಕರ ಮೇಲೆ ಏಕಕಾಲಕ್ಕೆ ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ. ದಳವಾಯಿ ಕೋಡಿಹಳ್ಳಿಯಲ್ಲಿರುವ ಮಹೇಶ್ ಅತ್ತೆ ಮನೆ ಮೇಲೆಯೂ ದಾಳಿ ನಡೆಸಿ ಮನೆಯಲ್ಲಿರುವ ದಾಖಲೆಗಳು, ಆಸ್ತಿ ಪತ್ರಗಳ ಪರಿಶೀಲನೆ ನಡೆಸಿದ್ದಾರೆ. ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ಕೆ.ಆರ್.ಎಸ್ ಸಮೀಪದ ಪಂಪ್ ಹೌಸ್, ನಮೃತ ಪೆಟ್ರೋಲ್ ಬಂಕ್ ಮೇಲೆಯೂ ಲೋಕಾಯುಕ್ತ ದಾಳಿ ನಡೆಸಿದರು. ಎಂಡಿ ಮಹೇಶ್ ಪತ್ನಿ ಹೆಸರಿನಲ್ಲಿರುವ ಪೆಟ್ರೋಲ್ ಬಂಕ್. ಪೆಟ್ರೋಲ್ ಬಂಕ್ ದಾಖಲೆ ಸಹಿತ ಇತರೆ ದಾಖಲೆಗಳನ್ನು ಜಾಲಾಡುತ್ತಿರುವ ಪೊಲೀಸರು.

ಕಂತೆ ಕಂತೆ ನೋಟು

ಕೇವಲ ಬಂಗಾರ ಮಾತ್ರ ಅಲ್ಲದೆ, 500, 200 ರೂ. ಮುಖ ಬೆಲೆಯ 8 ಲಕ್ಷ ರೂಪಾಯಿ ನಗದು ಪತ್ತೆಯಾಗಿದೆ. 8 ಕ್ಕೂ ಹೆಚ್ಚು ದುಬಾರಿ ಬೆಲೆಯ ಬ್ರಾಂಡೆಡ್ ವಾಚ್‌ಗಳು ಸಿಕ್ಕಿವೆ. ಇನ್ನು ಕೆಜಿಗಟ್ಟಲೆಯ ಬೆಳ್ಳಿ ಸಾಮಾಗ್ರಿಗಳು ಕೂಡ ಪತ್ತೆಯಾಗಿದೆ. ಬೆಂಗಳೂರಿನ ಕನಕಪುರ ರಸ್ತೆಯಲ್ಲಿರುವ ಅಬಕಾರಿ ಇಲಾಖೆ ಎಸ್‌ಪಿ ಮನೆ ಮೇಲೂ ಲೋಕಾಯುಕ್ತ ದಾಳಿ ಮಾಡಿದೆ. ಬೆಳಗ್ಗೆ 6 ಗಂಟೆಯ ವೇಳೆ ಅಬಕಾರಿ ಇಲಾಖೆ ಎಸ್‌ಪಿ ಮೋಹನ್ ಮನೆ ಮೇಲೆ ರೇಡ್ ಮಾಡಲಾಗಿದೆ. ಮಹತ್ವದ ದಾಖಲೆಗಳನ್ನ ಪರಿಶೀಲನೆ ಮಾಡಲಾಯಿತು.

ಬಲೆಗೆ ಬಿದ್ದವರು

- ಮೋಹನ್. ಕೆ ಎಸ್ ಪಿ ಅಬಕಾರಿ ಇಲಾಖೆ
- ಎನ್.ಕೆ.ತಿಪ್ಪೇಸ್ವಾಮಿ ಯೋಜನಾ ಇಲಾಖೆಯ ನಿರ್ದೇಶಕ
- ಮಹೇಶ್ ಎಂಡಿ ಕಾವೇರಿ ನೀರಾವರಿ ನಿಗಮ
- ಎಂ.ಸಿ.ಕೃಷ್ಣವೇಣಿ ಹಿರಿಯ ವಿಜ್ಞಾನಿ ಭೂವಿಜ್ಞಾನ ಇಲಾಖೆ

ಉಪಚುನಾವಣೆ: ಮೈತ್ರಿ ಕೂಟಕ್ಕೆ ಮುನ್ನಡೆ, ಕಾಂಗ್ರೇಸ್‌ಗೆ ಶಾಕ್!

ಮೂರು ಕ್ಷೇತ್ರಗಳಲ್ಲಿ ನಮ್ಮದೇ ಗೆಲುವು ಎನ್ನುತ್ತಿದ್ದಾರೆ ಎನ್‌ಡಿಎ ನಾಯಕರು

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮೂರು ಕ್ಷೇತ್ರಗಳನ್ನು ಗೆಲ್ಲುತ್ತೇವೆ ಎಂಬ ನಿರೀಕ್ಷೆಯಲ್ಲಿದ್ದ ಕಾಂಗ್ರೇಸ್‌ಗೆ ಬಿಗ್ ಶಾಕ್ ಸಿಗುವ ಸಾಧ್ಯತೆಯಿದೆ. ಹೌದು, ವಿಧಾನಸಭಾ ಚುನಾವಣೆಯಲ್ಲಿ 136 ಸ್ಥಾನಗಳನ್ನು ಗೆದ್ದ ಕಾಂಗ್ರೇಸ್ ಚನ್ನಪಟ್ಟಣ, ಶಿಗ್ಗಾವಿ, ಸಂಡೂರು ಕ್ಷೇತ್ರಗಳನ್ನು ಗೆಲ್ಲುತ್ತೇವೆ ಎಂಬ ನಿರೀಕ್ಷೆಯನ್ನು ಇಟ್ಟುಕೊಂಡಿದೆ. ಆದರೆ ಸಮೀಕ್ಷೆಯಲ್ಲಿ ಸಂಡೂರು ಮಾತ್ರ ಈ ಬಾರಿ ಕೈ ಹಿಡಿಯಲಿದೆ ಎಂದು ಭವಿಷ್ಯ ನುಡಿದಿವೆ.

ಪಿ-ಮಾರ್ಕ್ ಸಮೀಕ್ಷೆ ಚನ್ನಪಟ್ಟಣದಲ್ಲಿ ಜೆಡಿಎಸ್, ಶಿಗ್ಗಾವಿಯಲ್ಲಿ ಬಿಜೆಪಿ, ಸಂಡೂರಿನಲ್ಲಿ ಕಾಂಗ್ರೇಸ್ ಗೆಲುವು ಸಾಧಿಸಲಿದೆ ಎಂದು ಹೇಳಿದೆ. ಉಪಚುನಾವಣೆಯ ಚುನಾವಣೋತ್ತರ ಸಮೀಕ್ಷೆಯ ಫಲಿತಾಂಶ ನೋಡಿ ಎನ್‌ಡಿಎ ಮೈತ್ರಿ ಕೂಟದಲ್ಲಿ ಸಂಭ್ರಮ ಮನೆ ಮಾಡಿದೆ. ಆದರೆ ಕಾಂಗ್ರೇಸ್ ಸಮೀಕ್ಷಾ ವರದಿಯನ್ನು ಒಪ್ಪಿಕೊಂಡಿಲ್ಲ. ಹಿಂದೆ ಹಲವಾರು ಸಮೀಕ್ಷೆಗಳು ಸುಳ್ಳಾಗಿವೆ. ಹೀಗಾಗಿ ಈ ಬಾರಿ ಮೂರಕ್ಕೆ ಮೂರು ಸ್ಥಾನ ಗೆಲ್ಲುತ್ತೇವೆ ಎಂದು ಕಾಂಗ್ರೇಸ್ ಹೇಳುತ್ತಿದೆ. ಶಿಗ್ಗಾಂವಿ ಗೆಲುವು ನಿಶ್ಚಿತ ಎನ್ನುವ ವಿಶ್ವಾಸದಲ್ಲಿ ಮೈತ್ರಿ ನಾಯಕರಿದ್ದಾರೆ. ಸಂಸದ ಬೊಮ್ಮಾಯಿ ಸ್ವಕ್ಷೇತ್ರದ ಮೇಲೆ ಹಿಡಿತ ಇಟ್ಟುಕೊಂಡಿದ್ದಾರೆ.

ಸಮೀಕ್ಷೆ ಸುಳ್ಳು ಎಂದ ಕಾಂಗ್ರೇಸ್

ಕಾಂಗ್ರೇಸ್‌ನಲ್ಲಿ ನಾಯಕತ್ವದ ಕೊರತೆ ಬಿಜೆಪಿಗೆ ಪ್ಲಸ್ ಆಗಲಿದೆ ಎನ್ನುವ ಲೆಕ್ಕಾಚಾರವನ್ನು ಹಾಕಿಕೊಂಡಿದ್ದಾರೆ. ಸಂಡೂರಿನಲ್ಲೂ ಈ ಬಾರಿ ಅಲ್ಲಿ ಜನ ಬದಲಾವಣೆ ಬಯಸಿದ್ದಾರೆ. ಕಾಂಗ್ರೇಸ್ ಆಂತರಿಕ ಕಚ್ಚಾಟ ನಮಗೆ ಪೂರಕ ಆಗಲಿದೆ. ಜನಾರ್ದನ ರೆಡ್ಡಿ ಕಮಾಲ್ ಮಾಡಲಿದ್ದಾರೆ ಎಂಬ ನಿರೀಕ್ಷೆ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ನಿಜಗುಣ ಶಿವಯೋಗಿಯ ತತ್ತ್ವದರ್ಶನ

ನ್ನೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪುಸ್ತಕ ಮಳಿಗೆಯಲ್ಲಿ ಈ ಪುಸ್ತಕ ಕಂಡು ಖರೀದಿಸಿದೆ. ಡಾ, ಎಲ್. ಬಸವರಾಜುರವರು ನಿಜಗುಣರ ಎಲ್ಲಾ ಕೃತಿಗಳಿಗೆ ಬರೆದ ಸರಳ ಗದ್ಯಾನುವಾದವಿದು. 1991ರಲ್ಲಿ ಸುತ್ತೂರಿನ ಶಿವರಾತ್ರೀಶ್ವರ ಗ್ರಂಥಮಾಲೆಯಲ್ಲಿ ಪ್ರಥಮ ಮುದ್ರಣಗೊಂಡು ಹನ್ನೊಂದು ವರ್ಷಗಳ ನಂತರ ಮತ್ತೆ ಮುದ್ರಣ ಕಂಡು 2014 ರಲ್ಲಿ ರಾಜ್ಯ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮರುಮುದ್ರಣಗೊಂಡ ಕೃತಿ ಇದು. 1/8 ಡೆಮ್ಮಿ ಗಾತ್ರದ 611 ಪುಟಗಳ ಉತ್ತಮ ಹಾಳೆಯ ಸುಂದರ ಕ್ಯಾಲಿಕೋ ಬೃಹದ್ಗ್ರಂಥ, ಬೆಲೆ 120. ಎಲ್ ಬಸವರಾಜುರವರು ಕನ್ನಡ ಸಾಹಿತ್ಯ ಲೋಕದ ದಿಟ್ಟ ವಿಶಿಷ್ಟ ವಿದ್ವಾಂಸರು ಕವಿ ಸಾಹಿತಿ. ಕನ್ನಡದ ಸಂಶೋಧನಾ ಕ್ಷೇತ್ರದಲ್ಲಿ ಬಹುದೊಡ್ಡ ಹೆಸರು. ಪ್ರಕಾಶಕರ ಮಾತಿನಂತೆ ಕನ್ನಡ ಸಾಹಿತ್ಯ ಚರಿತ್ರೆಯಲ್ಲಿ ಸೃಜನಶೀಲತೆ ಮತ್ತು ಶಾಸ್ತ್ರಪಾಂಡಿತ್ಯಗಳ ಅಪರೂಪದ ಸಂಗಮ ಶ್ರೀ ನಿಜಗುಣ ಶಿವಯೋಗಿಗಳು. ಎಲ್. ಬಸವರಾಜುರವರ ಅಭಿಪ್ರಾಯದಲ್ಲಿ ನಿಜಗುಣರು ಶಂಕರಾದ್ವೈತಿಗಳೆಂದೇನೂ ಅಲ್ಲ, ಅದ್ವೈತ ಶಂಕರರ ಸ್ವತ್ತೆಂದಲ್ಲ, ನಿಜಗುಣರು ವೀರಶೈವಕ್ಕೆ ವಿಶಿಷ್ಟವಾದ ಅದ್ವೈತವನ್ನು ಉಪನಿಷತ್ತು ಪುರಾಣ ಆಗಮ ಮುನಿಮಾರ್ಗದಿಂದ ನಮಗಾಗಿ ಕನ್ನಡದಲ್ಲಿ ಸಿದ್ಧಾಂತ ಮಾಡಿಕೊಟ್ಟಿದ್ದಾರೆ. ಈ ಗ್ರಂಥ ಸಮುದಾಯ ವೀರಶೈವ ಧರ್ಮದ ಸಿದ್ಧಾಂತ ಕೃತಿ. ಇದೊಂದು ಎಲ್ಲರೂ ಸಂಗ್ರಹಿಸಿಟ್ಟು ಓದುವ ಗ್ರಂಥ.

ಹರಿದಾಸ ಮಂಜರಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ತ್ಯಾಗರಾಜನಗರದಲ್ಲಿರುವ 'ವಜ್ರಕ್ಷೇತ್ರ' ಶ್ರೀ ಅಭಯ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದಲ್ಲಿ ನವೆಂಬರ್ 22, ಶುಕ್ರವಾರ ಸಂಜೆ 6-30ಕ್ಕೆ ಶ್ರೀಮತಿ ಕಾವ್ಯ ರಾಮಚಂದ್ರ ಇವರಿಂದ ಹರಿದಾಸ ಮಂಜರಿ. ವಾದ್ಯ ಸಹಕಾರ : ಶ್ರೀ ಅಭಯ್ ಸಂಪಿಗೆತ್ತಾಯ (ಕೀ-ಬೋರ್ಡ್), ಶ್ರೀ ಕಾರ್ತಿಕ್ ಪ್ರಣವ್ (ಮೃದಂಗ). ಸ್ಥಳ : 'ಶ್ರೀ ವಜ್ರಕ್ಷೇತ್ರ' ಅಭಯ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನ, 152/1, 7ನೇ ಮುಖ್ಯರಸ್ತೆ, 7ನೇ ಅಡ್ಡರಸ್ತೆ, 3ನೇ ಬ್ಲಾಕ್, ತ್ಯಾಗರಾಜನಗರ, ಬೆಂಗಳೂರು-560070

ಹೊತ್ತಿ ಉರಿದ ಸ್ಕೂಟರ್

• ಉದಯವಾಹಿನಿ, ಬೆಂಗಳೂರು

ಚಲಿಸುತ್ತಿದ್ದ ಸ್ಕೂಟರ್ ಏಕಾಏಕಿ ಆಫ್ ಆಗಿದ್ದರಿಂದ ಸವಾರ ರಸ್ತೆ ಬದಿ ನಿಲ್ಲಿಸಿ ಆನ್ ಮಾಡುತ್ತಿದ್ದಂತೆ ಬೆಂಕಿ ಕಾಣಿಸಿಕೊಂಡು ಹೊತ್ತಿ ಉರಿದಿದೆ. ಹೆಬ್ಬಾಳದ ಭದ್ರಪ್ಪ ಲೇಔಟ್ ಸಮೀಪ ಬೆಳಗ್ಗೆ 9.40ರ ಸುಮಾರಿನಲ್ಲಿ ಸ್ಕೂಟರ್ ಚಾಲನೆ ಮಾಡಿಕೊಂಡು ಸವಾರ ಬರುತ್ತಿದ್ದಾಗ ಏಕಾಏಕಿ ನಿಂತಿದೆ.ಸವಾರ ರಸ್ತೆ ಬದಿ ನಿಲ್ಲಿಸಿ ಆನ್ ಮಾಡುತ್ತಿದ್ದಂತೆ ಏಕಾಏಕಿ ಬೆಂಕಿ ಕಾಣಿಸಿಕೊಂಡು ಹೊತ್ತಿ ಉರಿದಿದೆ. ನೋಡನೋಡುತ್ತಿದ್ದಂತೆ ಬೆಂಕಿ ಸಂಪೂರ್ಣ ಸ್ಕೂಟರ್ ಅನ್ನು ಆವರಿಸಿಕೊಂಡಿದ್ದರಿಂದ ಸವಾರ ಏನು ಮಾಡಬೇಕೆಂದು ತೋಚದೆ ತಕ್ಷಣ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ.ಅಗ್ನಿಶಾಮಕ ದಳ ಹಾಗೂ ಪೊಲೀಸರು ಸ್ಥಳಕ್ಕೆ ಆಗಮಿಸಿ ಈ ಮಾರ್ಗದಲ್ಲಿ ಸಂಚರಿಸುತ್ತಿದ್ದ ವಾಹನಗಳನ್ನು ತಡೆದು ನಿಲ್ಲಿಸಿ ನಂತರ ಬೆಂಕಿಯನ್ನು ನಂದಿಸಿದ್ದಾರೆ.

ಶೋಭಾ ಲೋಕಸಭಾ ಸದಸ್ಯತ್ವ ರದ್ದು ಕೋರಿ ಅರ್ಜಿ: ಡಿ.6ಕ್ಕೆ ವಿಚಾರಣೆ

• ಉದಯವಾಹಿನಿ, ಬೆಂಗಳೂರು

ಕಳೆದ ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ಉತ್ತರ ಕ್ಷೇತ್ರ ದಿಂದ ಗೆದ್ದಿರುವ ಶೋಭಾ ಕರಂದ್ಲಾಜೆ ಅವರ ಆಯ್ಕೆಯನ್ನು ರದ್ದು ಪಡಿಸುವಂತೆ ಕೋರಿ ಸಲ್ಲಿಸಲಾಗಿರುವ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಡಿಸೆಂಬರ್ 6ಕ್ಕೆ ಮುಂದೂಡಿದೆ. ಈ ವಿಚಾರವಾಗಿ ನಂದಿನಿಲೇಔಟ್ ನಿವಾಸಿ ಬಿ. ಮೋಹನ್ ಕುಮಾರ್ ಅವರು ಸಲ್ಲಿಸಿರುವ ಚುನಾವಣಾ ತಕರಾರು ಅರ್ಜಿಯು ಏಕಸದಸ್ಯ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಂದಿತ್ತು. ಕೆಲ ಕಾಲ ಅರ್ಜಿ ಆಲಿಸಿದ ನ್ಯಾಯಪೀಠ, ಅರ್ಜಿಗೆ ಸಂಬಂಧಿಸಿದಂತೆ ಲಿಖೀತ ಆಕ್ಷೇಪಣೆಗಳನ್ನು ಮುಂದಿನ ವಿಚಾರಣೆ ವೇಳೆಗೆ ಸಲ್ಲಿಸುವಂತೆ ಶೋಭಾ ಪರ ವಕೀಲ ವೆಂಕಟೇಶ್ ಪಿ. ದಳವಾಯಿ ಅವರಿಗೆ ಸೂಚಿಸಿ ವಿಚಾರಣೆಯನ್ನು ಡಿ. 6ಕ್ಕೆ ಮುಂದೂಡಿತು. ಲೋಕಸಭೆ ಚುನಾವಣೆ ವೇಳೆ ಶೋಭಾ ಚುನಾವಣಾ ಆಯೋಗಕ್ಕೆ ಸಲ್ಲಿಸಿರುವ ಪ್ರಮಾಣಪತ್ರದಲ್ಲಿ ಅಪೂರ್ಣ ಮಾಹಿತಿ ಕೊಟ್ಟಿದ್ದಾರೆ. ತಮ್ಮ ವಿರುದ್ಧದ ಕ್ರಿಮಿನಲ್ ಪ್ರಕರಣ ಬಗ್ಗೆ ಮಾಹಿತಿಯನ್ನು ಮರೆ ಮಾಚಿದ್ದಾರೆ. ಹೀಗಾಗಿ ಅವರ ಸದಸ್ಯತ್ವ ರದ್ದು ಪಡಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.

ನಗರದಲ್ಲಿ ನಿಷೇಧಿತ ಕಲರ್ ಕಾಟನ್ ಕ್ಯಾಂಡಿ ತಯಾರಿಕಾ ಘಟಕ ಬಂದ್

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ನಿಷೇಧಿತ ಕಲರ್ ಕಾಟನ್ ಕ್ಯಾಂಡಿ ಮಾರಾಟ ಮಾಡುತ್ತಿದ್ದವರನ್ನು ಸೋಮ ವಾರ ಆಹಾರ ಸುರಕ್ಷತಾ ಹಾಗೂ ಗುಣಮಟ್ಟದ ಇಲಾಖೆಯ ಅಧಿಕಾರಿಗಳು ವಶಕ್ಕೆ ಪಡೆದುಕೊಂಡು, ಅವರಿಂದ ನಿಷೇಧಿತ ಕಲರ್ ಕ್ಯಾಂಡಿ ತಯಾರಿಕ ಘಟಕದ ವಿವರ ಪಡೆದು ಬಂದ್ ಮಾಡಿಸಲಾಗಿದೆ. ರಾಜ್ಯದಲ್ಲಿ ಕೃತಕ ಬಣ್ಣ ಬಳಸಿ ತಯಾರಿಸಲಾಗುವ ಕಲರ್ ಕಾಟನ್ ಕ್ಯಾಂಡಿ ಮಾರಾಟ ನಿಷೇಧವಾದ 8 ತಿಂಗಳ ಬಳಿಕ ಬೆಂಗಳೂರು ಸೇರಿದಂತೆ ವಿವಿಧೆಡೆಯಲ್ಲಿ ಕಲರ್ ಕಾಟನ್ ಮಾರಾಟ ಮತ್ತೆ ಗರಿಗೆದರಿತ್ತು. ಬಗ್ಗೆ ತಪಾಸಣೆ ನಡೆಸಿದ ಇಲಾಖೆಯು ಕಲರ್ ಕಾಟನ್ ಕ್ಯಾಂಡಿ ಮಾರಾಟ ಮಾಡುತ್ತಿದ್ದವರನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ. ಅವರಿಂದ ಕಲರ್ ಕಾಟನ್ ಕ್ಯಾಂಡಿ ಯಾವ ಪ್ರದೇಶದಿಂದ ನಗರದ ವಿವಿಧ ಭಾಗಕ್ಕೆ ಬರುತ್ತಿದೆ ಎನ್ನುವು ಮಾಹಿತಿ ಪಡೆದು, ಯಲಹಂಕದ ಕಲರ್ ಕಾಟನ್ ಕ್ಯಾಂಡಿ ತಯಾರಕ ಘಟಕಕ್ಕೆ ತೆರಳಿ, ಮಾಲಿಕರನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಗೋಬಿ, ಕಾಟನ್ ಕ್ಯಾಂಡಿಯಲ್ಲಿ ಮತ್ತೆ ಕೃತಕ ಬಣ್ಣ!' ಶೀರ್ಷಿಕೆಯಡಿ ರಾಜ್ಯದಲ್ಲಿ ಮತ್ತೆ ನಿಷೇಧಿತ ಕಲರ್ ಕಾಟನ್ ಕ್ಯಾಂಡಿ ಗರಿಗೆದರಿರುವ ಕುರಿತು ಪ್ರಕಟಿಸಲಾಗಿತ್ತು. ವರದಿಯಲ್ಲಿ ನಿಷೇಧಿತ ಕಲರ್ ಕಾಟನ್ ಕ್ಯಾಂಡಿ ಮಾರಾಟ ಮಾಡುತ್ತಿರುವ ಪ್ರದೇಶ ಹಾಗೂ ವ್ಯಕ್ತಿಯ ಫೋಟೋವನ್ನು ಪ್ರಕಟಿಸಿತ್ತು. ವರದಿಯಿಂದ ಎಚ್ಚೆತ್ತುಕೊಂಡ ಇಲಾಖೆಯು ಕಾಟನ್ ಕ್ಯಾಂಡಿ ಮಾರಾಟ ಮಾಡುತ್ತಿದ್ದ ಸ್ಥಳಕ್ಕೆ ತೆರಳಿ, ವ್ಯಾಪಾರಿಯನ್ನು ವಶಪಡಿಸಿಕೊಂಡಿದ್ದಾರೆ.

ಸಿನಿಮಾರಂಗಕ್ಕೆ ಡ್ರೋನ್ ಪ್ರತಾಪ್ ಎಂಟ್ರಿ; ಮೊದಲ ಚಿತ್ರದಲ್ಲೇ ಹೀರೋ

• ಉದಯವಾಹಿನಿ, ಬೆಂಗಳೂರು

ಬಿಗ್ ಬಾಸ್ ಸೀಸನ್ -10 ಮೂಲಕ ಕರುನಾಡಿನಲ್ಲಿ ಮಿಂಚಿದ ಡ್ರೋನ್ ಪ್ರತಾಪ್ ಸಿನಿಮಾರಂಗಕ್ಕೆ ಕಾಲಿಡುತ್ತಿದ್ದಾರೆ. ಬಿಗ್‌ಬಾಸ್ ಕಾರ್ಯಕ್ರಮದಲ್ಲಿ ಪ್ರತಾಪ್ ತನ್ನ ಬುದ್ಧಿವಂತಿಕೆಯಿಂದ ಜನಮನವನ್ನು ಗೆದ್ದಿದ್ದರು. ಆ ಮೂಲಕ ತನ್ನ ಮೇಲೆ ಈ ಹಿಂದೆ ಕೇಳಿ ಬಂದ ಆರೋಪಗಳಿಗೆ ತನ್ನ ಮಾನವೀಯ ವ್ಯಕ್ತಿತ್ವದಿಂದಲೇ ಉತ್ತರಿಸಿದ್ದರು. ಬಿಗ್ ಬಾಸ್‌ನಲ್ಲಿ ಕಾರ್ಯಕ್ರಮದಲ್ಲಿ ರನ್ನರ್ ಅಪ್ ಆದ ಬಳಿಕ ಅದರಲ್ಲಿ ಸಿಕ್ಕ ಬಹುಮಾನದ ಹಣವನ್ನು ಮಾನವೀಯ ಕಾರ್ಯಕ್ಕೆ ಪ್ರತಾಪ್ ಬಳಸಿದ್ದರು. ತಮಗೆ ಶೋ ಮೂಲಕ ಸಿಕ್ಕ ಎಲೆಕ್ಟ್ರಿಕ್ ಸ್ಕೂಟರ್ ಅನ್ನು ಫುಡ್ ಡೆಲಿವೆರಿ ಮಾಡುವ ಬಡ ಯುವಕನಿಗೆ ನೀಡಿದ್ದರು.

ಬಿಪಿಎಲ್ ಕಾರ್ಡ್ ರದ್ದಾಗುವ ಆತಂಕದಲ್ಲಿದ್ದವರಿಗೆ ಗುಡ್ ನ್ಯೂಸ್

ಕಾರ್ಡ್‌ಗಳು ಯಥಾಸ್ಥಿತಿಯಲ್ಲೇ ಮುಂದುವರೆಯಲಿವೆ ಎಂದು ಆಹಾರ , ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ಸುದ್ದಿಗೋಷ್ಠಿ

• ಉದಯವಾಹಿನಿ, ಬೆಂಗಳೂರು

ವ್ಯಾಪಕ ಟೀಕೆಗಳಿಗೆ ಗುರಿಯಾದ ಬಳಿಕ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದ್ದು ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆಯನ್ನು ತಾತ್ಕಾಲಿಕವಾಗಿ ಕೈಬಿಟ್ಟಿದೆ. ಸರ್ಕಾರಿ ನೌಕರರು, ಆದಾಯ ತೆರಿಗೆ ಪಾವತಿದಾರರ ಕಾರ್ಡ್‌ಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಕಾರ್ಡ್‌ಗಳು ಯಥಾಸ್ಥಿತಿಯಲ್ಲೇ ಮುಂದುವರೆಯಲಿವೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ಸುದ್ದಿಗೋಷ್ಠಿಯಲ್ಲಿಂದು ಸ್ಪಷ್ಟಪಡಿಸಿದ್ದಾರೆ. ಈಗಾಗಲೇ ಪರಿಷ್ಕರಣೆಗೆ ಒಳಪಟ್ಟು, ಅಮಾನತುಗೊಂಡಿರುವ ಕಾರ್ಡ್‌ಗಳನ್ನು ಇನ್ನೊಂದು ವಾರದೊಳಗಾಗಿ ಮರುಸ್ಥಾಪಿಸಿ ಅಕ್ಕಿ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗುವುದು. ಮುಖ್ಯಮಂತ್ರಿಯವರ ಸೂಚನೆ ಮೇರೆಗೆ ಬಡವರಿಗೆ ಅನ್ಯಾಯವಾಗದಂತೆ ಎಚ್ಚರಿಕೆ ವಹಿಸುವುದಾಗಿ ಹೇಳಿದರು.

ಪಾನ್‌ಕಾರ್ಡ್ ಆಧರಿತ ಪರಿಶೀಲನೆಯ ವೇಳೆ ಕೆಲವರು ಆದಾಯ ತೆರಿಗೆ ಪಾವತಿಗೆ ವಿಳಂಬವಾಗಿ ದಂಡ ವಿಧಿಸಿಕೊಂಡಿದ್ದಾರೆ. ಅಲ್ಲಿಗೆ ಅವರು ಆದಾಯ ತೆರಿಗೆ ಪಾವತಿದಾರರು ಎಂಬುದು ಖಚಿತವಾಗಿದೆ. ಇನ್ನು ಕೆಲವರು ಸರ್ಕಾರಿ ನೌಕರರಿದ್ದಾರೆ. ಕೇಂದ್ರ ಸರ್ಕಾರದ ಮಾನದಂಡಗಳ ಅನುಸಾರವೇ 2

ಉದಯವಾಹಿನಿ ಚಿತ್ರ

ತಿಂಗಳಿನಿಂದ ರಾಜ್ಯ ಸರ್ಕಾರ ಬಿಪಿಎಲ್ ಕಾರ್ಡ್‌ಗಳ ಪರಿಶೀಲನೆ ಆರಂಭಿಸಿತ್ತು. ಈವರೆಗೂ 3.81 ಲಕ್ಷ ಕಾರ್ಡ್‌ಗಳನ್ನು ಪರಿಷ್ಕರಿಸಲಾಗಿತ್ತು ಎಂದರು.ಒಟ್ಟು ಪರಿಷ್ಕರಣೆಯಾದ ಕಾರ್ಡ್‌ಗಳಲ್ಲಿ 98,483 ಕಾರ್ಡ್‌ದಾರರು ಆದಾಯ ತೆರಿಗೆ ಪಾವತಿ ಮಾಡುತ್ತಿದ್ದು, 4,036 ಕಾರ್ಡ್‌ದಾರರು ಸರ್ಕಾರಿ ನೌಕರರಾಗಿದ್ದಾರೆ. ಈ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುವ ತೀರ್ಮಾನ ತೆಗೆದುಕೊಂಡಿದ್ದೇವೆ. ಉಳಿದಂತೆ ಯಾವುದೇ ಕಾರ್ಡ್‌ಗಳು ರದ್ದುಗೊಳ್ಳದೆ 2 ತಿಂಗಳ ಮೊದಲಿದ್ದಂತೇ ಯಥಾಸ್ಥಿತಿಯಲ್ಲಿ ಮುಂದುವರೆಯಲಿವೆ.

ತಾತ್ಕಾಲಿಕವಾಗಿ ಅಮಾನತುಗೊಂಡಿರುವ ಕಾರ್ಡ್‌ಗಳನ್ನು ಒಂದು ವಾರದೊಳಗಾಗಿ ಲಾಗಿನ್‌ಗೆ ಒಳಪಡಿಸಿ ಮುಂದಿನ ವಾರದಿಂದ ಅಕ್ಕಿ ವಿತರಣೆ ಮಾಡಲಾಗುತ್ತದೆ ಎಂದು ಹೇಳಿದರು. ಸದ್ಯಕ್ಕೆ ಕಾರ್ಡ್‌ಗಳ ಪರಿಷ್ಕರಣೆಯನ್ನು ಕೈಬಿಡಲಾಗಿದೆ. ಸರ್ಕಾರಿ ನೌಕರರು ಮತ್ತು ಆದಾಯ ತೆರಿಗೆ ಪಾವತಿದಾರರನ್ನು ಹೊರತುಪಡಿಸಿದರೆ ಉಳಿದೆಲ್ಲಾ ಕಾರ್ಡ್‌ಗಳೂ ಯಥಾಸ್ಥಿತಿಯಲ್ಲಿ ಮುಂದುವರೆಯಲಿವೆ.

ಮುಂದಿನ ದಿನಗಳಲ್ಲಿ ಪರಿಷ್ಕರಣೆಗೆ ಒಳಪಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವವರೆಗೂ ಯಾವುದೇ ಬದಲಾವಣೆ ಇರುವುದಿಲ್ಲ ಎಂದರು.

ಮಹಾರಾಷ್ಟ್ರ ಹೊರತು ಪಡಿಸಿದರೆ ಕರ್ನಾಟಕ ಹೆಚ್ಚು ಆದಾಯ ತೆರಿಗೆ ಪಾವತಿ ಮಾಡುವ 2ನೇ ರಾಜ್ಯವಾಗಿದೆ. ಆದರೂ ಇಲ್ಲಿ ಬಿಪಿಎಲ್ ಕಾರ್ಡ್‌ಗಳ ಪ್ರಮಾಣ ಶೇ.66 ರಷ್ಟಿದೆ. ಬೇರೆ ಯಾವ ರಾಜ್ಯಗಳಲ್ಲೂ ಬಿಪಿಎಲ್ ಕಾರ್ಡ್ ಪ್ರಮಾಣ ಶೇ.50 ದಾಟಿಲ್ಲ. ಆದರೆ ಇದು ನಮಲ್ಲಿ ಹೆಚ್ಚಿರುವ ಕಾರಣ ಪರಿಷ್ಕರಣೆ ಮಾಡಲು 2 ತಿಂಗಳ ಹಿಂದೆ ನಿರ್ಧರಿಸಲಾಯಿತು. ಕೇಂದ್ರ ಸರ್ಕಾರ ಕೂಡ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆ ಮಾಡಿದ್ದು, 5.08 ಕೋಟಿ ಕಾರ್ಡ್‌ಗಳನ್ನು ರದ್ದು ಮಾಡಿದೆ. ರಾಜ್ಯದಲ್ಲಿ 8,647 ಕಾರ್ಡ್‌ಗಳನ್ನು ಅಮಾನತುಗೊಳಿಸಲಾಗಿದೆ. 59,379 ಕಾರ್ಡ್‌ಗಳನ್ನು ಬಿಪಿಎಲ್‌ನಿಂದ ಎಪಿಎಲ್ ಆಗಿ ಪರಿವರ್ತಿಸಲಾಗಿದೆ. ಇದರಲ್ಲೂ 16,806 ಕಾರ್ಡ್‌ಗಳನ್ನು ಬಿಪಿಎಲ್ ಆಗಿಯೇ ಮತ್ತೆ

> ಕಳೆದ 2 ವರ್ಷಗಳಿಂದ 2.95 ಲಕ್ಷ ಅರ್ಜಿ ಗಳು ಬಾಕಿ ಉಳಿದಿದ್ದವು. ಅವುಗಳನ್ನು ಪರಿಷ್ಕರಿಸಿ 2,69,536 ಮಂದಿಗೆ ಕಾರ್ಡ್ ನೀಡಿದ್ದು, ಅಕ್ಕಿ ಪಡೆಯುತ್ತಿದ್ದಾರೆ. ರಾಜ್ಯದಲ್ಲಿ ಶೇ.66 ರಷ್ಟು ಬಿಪಿಎಲ್ ಕಾರ್ಡ್‌ಗಳಿದ್ದರೂ ಮತ್ತಷ್ಟು ಮಂದಿ ಅರ್ಜಿ ಸಲ್ಲಿಸಿದ್ದಾರೆ. ಸದ್ಯಕ್ಕೆ ಸ್ಥಗಿತಗೊಂಡಿರುವ ಪರಿಷ್ಕರಣೆ ಕಾರ್ಯವನ್ನು ಮತ್ತೆ ಕೈಗೊಂಡು ಎಲ್ಲವನ್ನೂ ಸರಿಪಡಿಸಿದ ಬಳಿಕ ಹೊಸ ಕಾರ್ಡ್‌ಗಳ ಪರಿಶೀಲನೆಯನ್ನು ಕೈಗೆತ್ತಿಕೊಳ್ಳುವುದಾಗಿ ಸಚಿವರು ತಿಳಿಸಿದರು.

ಮುಂದುವರೆಸಲಾಗಿದೆ ಎಂದರು. ರಾಜ್ಯದಲ್ಲಿ ಅಂತ್ಯೋದಯ ಅನ್ನಯೋಜನೆಯಡಿ 10,68,028 ಕಾರ್ಡ್‌ಗಳಿವೆ. ಬಿಪಿಎಲ್ ಕಾರ್ಡ್‌ಗಳು 1,02,44,435 ಇವೆರಡೂ ಸೇರಿ 1,13,12,463 ಕಾರ್ಡ್‌ಗಳಿವೆ. ರಾಜ್ಯಸರ್ಕಾರ 11,84,425 ಕಾರ್ಡ್‌ಗಳನ್ನು ನೀಡಿದೆ. ಕೇಂದ್ರ, ರಾಜ್ಯ ಸರ್ಕಾರ ನೀಡಿರುವುದು ಹಾಗೂ ಅಂತ್ಯೋದಯ ಅನ್ನ ಯೋಜನೆಯಡಿ 1,24,97,088 ಕಾರ್ಡ್‌ಗಳನ್ನು ನೀಡಲಾಗಿದೆ. ಆದ್ಯತೆ ಇರುವ

> ಅಧಿಕಾರಿಗಳು ಹಗಲೂ-ರಾತ್ರಿ ಕಷ್ಟಪಟ್ಟು ಕೆಲಸ ಮಾಡಿದ್ದಾರೆ. ಪ್ಯಾನ್‌ಕಾರ್ಡ್ ಆಧರಿಸಿ ಪರಿಷ್ಕರಣೆ ನಡೆದಿದೆ. ಶೇ.1 ಅಥವಾ 2 ರಷ್ಟು ಗೊಂದಲಗಳಾಗಿವೆ. ಅರ್ಹರ ಕಾರ್ಡ್‌ಗಳು ಧಕ್ಕೆಗೊಳಗಾಗಿರಬಹುದು. ಏನೇ ಲೋಪಗಳಾಗಿದ್ದರೂ ಅದನ್ನು ಸರಿಪಡಿಸಲಾಗುವುದು ಇದರ ಸಂಪೂರ್ಣ ಹೊಣೆಯನ್ನು ನಾನೇ ಹೊತ್ತುಕೊಳ್ಳುತ್ತೇನೆ ಎಂದು ಹೇಳಿದರು.

ಕುಟುಂಬಗಳಿಗೆ (ಎಪಿಎಲ್) 25,62,343 ಕಾರ್ಡ್‌ಗಳಿವೆ. ರಾಜ್ಯದಲ್ಲಿ ಒಟ್ಟಾರೆ 1,50,59,431 ಕಾರ್ಡ್‌ಗಳಿದ್ದು, ಇದರಲ್ಲಿ 1,02,509 ಕಾರ್ಡ್‌ಗಳನ್ನು ಮಾತ್ರ ಪರಿಷ್ಕರಣೆ ಮಾಡಲಾಗಿದೆ. ಉಳಿದಂತೆ ಎಲ್ಲಾ ಕಾರ್ಡ್‌ಗಳು ಯಥಾಸ್ಥಿತಿಯಲ್ಲಿ ಮುಂದುವರೆಯಲಿವೆ ಎಂದರು.

ಅನ್ನಭಾಗ್ಯ ಯೋಜನೆಯಡಿ ಆಗಸ್ಟ್ ತಿಂಗಳ ವರೆಗೆ ಹಣವನ್ನು ಫಲಾನುಭವಿಗಳ ಖಾತೆಗೆ ಪಾವತಿಸಲಾಗಿದೆ. ಸೆಪ್ಟೆಂಬರ್, ಅಕ್ಟೋಬರ್ ತಿಂಗಳ ನಗದನ್ನು ಒಂದು ವಾರದೊಳಗಾಗಿ ಬಿಡುಗಡೆ ಮಾಡುವುದಾಗಿ ಹೇಳಿದರು.

ಬಿಜೆಪಿ ಪ್ರತಿಭಟನೆ; ಸಂತ್ರಸ್ತರಿಂದ ಅಹವಾಲು ಸ್ವೀಕಾರ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವೆಡೆ ರೈತರು, ಸರಕಾರಿ ಶಾಲೆಗಳು, ದೇವಾಲಯಗಳ ಜಮೀನಿಗೆ ನೀಡುತ್ತಿರುವ ವಕ್ಫ್ ನೋಟಿಸ್ ವಿರುದ್ಧ ಬಿಜೆಪಿ ಆಯೋಜಿಸಿರುವ ನಮ್ಮ ಭೂಮಿ ನಮ್ಮ ಹಕ್ಕು ಹೋರಾಟ ನವೆಂಬರ್ 21 ಹಾಗೂ 22ರಂದು ರಾಜ್ಯಾದ್ಯಂತ ನಡೆಯಲಿದೆ.

ಎಲ್ಲಾ ಜಿಲ್ಲಾಧಿಕಾರಿ ಕಚೇರಿ ಮತ್ತು ತಹಶೀಲ್ದಾರರ ಕಚೇರಿಗಳ ಮುಂದೆ ಶಾಸಕರು, ಸಂಸದರು, ಮುಖಂಡರ ನೇತೃತ್ವದಲ್ಲಿ ದಿನವಿಡಿ ಪ್ರತಿಭಟನೆ ನಡೆಯಲಿದೆ. ಸಹಸ್ರಾರು ಸಂಖ್ಯೆಯಲ್ಲಿ ಪಕ್ಷದ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಭಾಗವಹಿಸಿ ಜನವಿರೋಧಿ ಕಾಂಗ್ರೇಸ್ ಸರಕಾರದ ವಿರುದ್ಧ ಹೋರಾಟ ನಡೆಸೋಣ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕರೆ ನೀಡಿದ್ದಾರೆ.

ಅಹವಾಲು ಸ್ವೀಕಾರ ಪ್ರತಿಭಟನೆಯ ಜತೆಗೆ ಎಲ್ಲಾ ಸಂತ್ರಸ್ತರಿಂದ ಅರ್ಜಿಗಳ ಸ್ವೀಕಾರ, ವಕ್ಫ್ ಅಧಿಕಾರ ದುರ್ಬಳಕೆ ಯಿಂದ ಸಮಸ್ಯೆ-ಶೋಷಣೆಗೆ ಒಳಗಾದವರ ಮಾಹಿತಿ ಸಂಗ್ರಹಿಸಲಾಗುತ್ತದೆ.

ಈ ದಿನ ಪ್ರತಿಭಟನೆ ನಡೆಸುವು ದಕ್ಕಷ್ಟೇ ಸೀಮಿತಗೊಳಿಸದ ರಾಜ್ಯ ಬಿಜೆಪಿ ನಾಯಕರು, ಡಿಸೆಂಬರ್ ವೇಳೆಗೆ ರಾಜ್ಯ ಪ್ರವಾಸ ಮಾಡಲು ತೀರ್ಮಾನಿಸಿದ್ದಾರೆ. ಹಿನ್ನೆಲೆಯಲ್ಲಿ ಬಿಜ

ಚಿಗಟೇರಿ ಆಸ್ಪತ್ರೆ ಮರುಸ್ಥಾಪನೆಗೆ ಮಾಸ್ಟರ್ ಪ್ಲಾನ್

ಕ್ಲಿನಿಕಲ್ ವಿಭಾಗದಲ್ಲಿ ಗ್ರೂಪ್ ಡಿ ಸೇವೆ ಮಾಡುತ್ತಿರುವ ಹೊರಗುತ್ತಿಗೆ ಸಿಬ್ಬಂದಿಗಳನ್ನು ನೇರ ಪಾವತಿಯಡಿ ನೇಮಕ

• ಉದಯವಾಹಿನಿ, ದಾವಣಗೆರೆ

ಸರ್ಕಾರಿ ಆಸ್ಪತ್ರೆಗಳಲ್ಲಿ ನಾನ್ ಕ್ಲಿನಿಕಲ್ ವಿಭಾಗದಲ್ಲಿ ಗ್ರೂಪ್ ಡಿ ಸೇವೆ ಮಾಡುತ್ತಿರುವ ಹೊರಗುತ್ತಿಗೆ ಸಿಬ್ಬಂದಿಗಳನ್ನು ನೇರ ಪಾವತಿಯಡಿ ನೇಮಕ ಮಾಡಿಕೊಳ್ಳಲು ಕಾನೂನು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು ಸಾಧಕ, ಬಾದಕಗಳ ಪರಿಶೀಲನೆ ನಂತರ ಹೊರಗುತ್ತಿಗೆಯ ಎಲ್ಲಾ ಗ್ರೂಪ್ ಡಿ ಸಿಬ್ಬಂದಿಗಳನ್ನು ನೇರಪಾವತಿಯಡಿ ಪಡೆದುಕೊಳ್ಳಲಾಗುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದರು.ಅವರು ಚಿಗಟೇರಿ ಆಸ್ಪತ್ರೆ ಆವರಣದಲ್ಲಿ ನಿರ್ಮಾಣ ಮಾಡಿರುವ 200 ಹಾಸಿಗೆಯ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್ನು ಲೋಕಾರ್ಪಣೆ ಮಾಡಿ ಸಮಾರಂಭದಲ್ಲಿ ಮಾತನಾಡಿದರು.

ದಾವಣಗೆರೆಯಲ್ಲಿನ ಚಿಗಟೇರಿ ಆಸ್ಪತ್ರೆ ವಿಶಾಲವಾದ ಸ್ಥಳದಲ್ಲಿದ್ದು 70 ವರ್ಷದ ಹಳೆಯದಾಗಿದೆ. ಇಲ್ಲಿ ಹೊಸ ಕಟ್ಟಡ, ದುರಸ್ಥಿಯಾಗಬೇಕಾಗಿದ್ದು ಮಧ್ಯ ಕರ್ನಾಟಕದಲ್ಲಿನ ಈ ಆಸ್ಪತ್ರೆಯನ್ನು ಸುಸಜ್ಜಿತವಾಗಿ ನಿರ್ಮಾಣ ಮಾಡುವ ಮೂಲಕ ಈ ಭಾಗದಲ್ಲಿನ ಜನರಿಗೆ ಉತ್ತಮ ಆರೋಗ್ಯ ಸೌಲಭ್ಯ ಒದಗಿಸುವ ಗುರಿ ಹೊಂದಲಾಗಿದೆ. ಇದಕ್ಕಾಗಿಯೇ ಇಲ್ಲಿನ ಮೂಲಭೂತ ಸೌಕರ್ಯಕ್ಕೆ ಮತ್ತು ಹೊಸ ಬ್ಲಾಕ್ ನಿರ್ಮಾಣಕ್ಕೆ ರೂ.17 ಕೋಟಿ ಬಿಡುಗಡೆ ಮಾಡಲಾಗಿದ್ದು ಭವಿಷ್ಯದ ದೃಷ್ಟಿಯಿಂದ ನೂತನ ಯೋಜನೆಯನ್ನು ಸಿದ್ಧಪಡಿಸಿ ಅದರಂತೆ ಹೊಸ ಕಟ್ಟಡಗಳನ್ನು

ಉದಯವಾಹಿನಿ ಚಿತ್ರ

ನಿರ್ಮಾಣ ಮಾಡಲಾಗುತ್ತದೆ ಎಂದರು. ರೂ. 30 ಕೋಟಿಯಲ್ಲಿ ನಿರ್ಮಿಸಲಾದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ 200 ಹಾಸಿಗೆ ಸಾಮರ್ಥ್ಯವಿದ್ದು ಇಲ್ಲಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಮಂಜೂರು ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದ್ದು ಇಲ್ಲಿಗೆ ಬೇಕಾಗಿರುವ ವೈದ್ಯರು ಹಾಗೂ ಸಿಬ್ಬಂದಿಗಳ ಹುದ್ದೆಗಳಿಗೆ ಮಂಜೂರಾತಿಯನ್ನು ನೀಡಲಾಗುತ್ತದೆ. ಟ್ರಾಮಾ ಕೇರ್ ಸೆಂಟರ್ಗೂ ಸಿಬ್ಬಂದಿಗಳ ಅಗತ್ಯವಿದ್ದು ಪರಿಶೀಲಿಸಿ ಮಂಜೂರಾತಿ ನೀಡಲಾಗುತ್ತದೆ. ಆಸ್ಪತ್ರೆ ಕಟ್ಟಿದರೆ ಸಾಲದು, ಇಲ್ಲಿ ಅಗತ್ಯವಿರುವ ಪರಿಕರ, ಸಿಬ್ಬಂದಿಗಳು ಇದ್ದಾಗ ಮಾತ್ರ ಜನರಿಗೆ ಆರೋಗ್ಯ ಸೇವೆ ಸಿಗಲು ಸಾಧ್ಯವಿದೆ ಎಂದರು. ಆರೋಗ್ಯ ಮತ್ತು ಶಿಕ್ಷಣ ಇಲಾಖೆಗಳು ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸಲಿವೆ. ಆದರೆ ಇವುಗಳಿಗೆ

ಮೂಲಭೂತ ಸೌಕರ್ಯ ಕೊಟ್ಟರೆ ಸಾಕಾಗುವುದಿಲ್ಲ, ವೈದ್ಯರು ಜನರ ಸೇವೆ ಮಾಡಬೇಕು. ವೈದ್ಯಕೀಯ ಸೇವಾ ಕ್ಷೇತ್ರವಾಗಿದ್ದು ಸಹಾನುಭೂತಿಯಿಂದ ಎಲ್ಲಾ ವೈದ್ಯರು ಕೆಲಸ ಮಾಡುವುದು ಬಹಳ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ವೈದ್ಯರು, ಸಿಬ್ಬಂದಿಗಳ ಸೇವೆ ಜನರಿಗೆ ಸಿಗುವಂತಾಗಬೇಕೆಂದರು.

ಸಿಗಬೇಕಾದ ಆದ್ಯತೆ ಸಾಕಾಗುತ್ತಿಲ್ಲ, ಜನರ ಆರೋಗ್ಯ ಸಂರಕ್ಷಣೆ ಮಾಡಿದಾಗ ಆರೋಗ್ಯವಂತ ನಾಗರಿಕನಾಗಲು ಸಾಧ್ಯ, ಅನಾರೋಗ್ಯಕ್ಕೆ ತುತ್ತಾಗಿ ಚಿಕಿತ್ಸೆಗಾಗಿ ಆರ್ಥಿಕ ನಷ್ಟವನ್ನು ಅನುಭವಿಸಬೇಕಾಗುತ್ತದೆ.

ಆರೋಗ್ಯವು ಗ್ಯಾರಂಟಿ ಯೋಜನೆಯಾಗಬೇಕು, ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಶಿಕ್ಷಣ, ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ಸಿಗಬೇಕಾಗಿದೆ ಎಂದರು. ಮಾಯಕೊಂಡ ಪ್ರತ್ಯೇಕ ವಿಧಾನಸಭಾ ಕ್ಷೇತ್ರವಾಗಿದ್ದರೂ ಸಮುದಾಯ ಆರೋಗ್ಯ ಕೇಂದ್ರವಿರುವುದಿಲ್ಲ. ಮುಂದಿನ ದಿನಗಳಲ್ಲಿ ಮಾಯಕೊಂಡಕ್ಕೆ ಸಮುದಾಯ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲಾಗುತ್ತದೆ. ಶಾಸಕರಾದ ಡಾ; ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ ಆಸ್ಪತ್ರೆ ಕಟ್ಟಡದ ಜೊತೆಗೆ ಸಲಕರಣೆಗಳು ಇರಬೇಕಾಗುತ್ತದೆ, ಜೊತೆಗೆ ಸಿಬ್ಬಂದಿಗಳು ಇರಬೇಕು, ಇಲ್ಲವಾದಲ್ಲಿ ವ್ಯರ್ಥವಾಗುತ್ತದೆ. ಚಿಗಟೇರಿ

ಇಲ್ಲಿ ಸಾಕಷ್ಟು ಮೂಲಭೂತ ಸೌಕರ್ಯಗಳ ಜೊತೆಗೆ ಸುಧಾರಣೆಯಾಗಬೇಕಿದೆ. ಮಾಸ್ಟರ್ ಪ್ಲಾನ್ ತಯಾರಿಸುವ ಮೂಲಕ ಹಂತ ಹಂತವಾಗಿ ಸುಧಾರಣಾ ಕ್ರಮ ಕೈಗೊಳ್ಳಲಾಗುತ್ತದೆ. ಮುಂದಿನ ದಿನಗಳಲ್ಲಿ ಮಾನವ ಹಾಲು ಬ್ಯಾಂಕ್ ಸ್ಥಾಪನೆ ಮಾಡುವ ಮೂಲಕ ಇನ್ನಷ್ಟು ಅನುಕೂಲ ಕಲ್ಪಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಆಸ್ಪತ್ರೆಯಿಂದ ಸಾಕಷ್ಟು ಬಡ ಜನರಿಗೆ ಅನುಕೂಲವಾಗಿದೆ. ಇಲ್ಲಿ ಇನ್ನೂ ಹೆಚ್ಚಿನ ಸೌಲಭ್ಯಗಳು ಜನರಿಗೆ ಸಿಗುವಂತಾಗಬೇಕು.

ಇಲ್ಲಿ ನರ್ಸ್, ಆಯಾಗಳ ಕೊರತೆ ಇದೆ ಎಂದು ತಿಳಿದುಬಂದಿದ್ದು ವ್ಯವಸ್ಥೆ ಸರಿಪಡಿಸಬೇಕು. ಹೊರಗುತ್ತಿಗೆಯಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಿಸಿ ನೇರಪಾವತಿಯಡಿ ಆಸ್ಪತ್ರೆ ಹೊರಗುತ್ತಿಗೆ ಸಿಬ್ಬಂದಿಗಳನ್ನು ಪಡೆಯುವಂತಾಗಬೇಕು. ಸಾರ್ವಜನಿಕ ಸೇವೆ ಮಾಡುವಾಗ ಬಹಳ ಪಾರದರ್ಶಕವಾಗಿ ಕೆಲಸ ಮಾಡಬೇಕಾಗುತ್ತದೆ. ಕೋವಿಡ್ ಸಂದರ್ಭದಲ್ಲಿ ಜನರ ಆರೋಗ್ಯ ರಕ್ಷಣೆಗಾಗಿ ಖಾಸಗಿಯಾಗಿ 8 ಕೋಟಿವರೆಗೆ ವೆಚ್ಚ ಮಾಡಲಾಗಿದೆ ಎಂದರು. ದಾವಣಗೆರೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ ವಿದ್ಯಾರ್ಥಿಯಾಗಿದ್ದ ಸಮಯದಿಂದಲೂ ಚಿಗಟೇರಿ ಆಸ್ಪತ್ರೆಯ ಸ್ಥಿತಿಗತಿ ಗೊತ್ತಿದೆ.

ದೆಹಲಿ ಉಪವಾಸ ಸತ್ಯಾಗ್ರಹಕ್ಕೆ ಪೂರ್ಣ ಬೆಂಬಲ: ಶಾಂತಕುಮಾರ್

• ಉದಯವಾಹಿನಿ, ಮೈಸೂರು

ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿಗಾಗಿ ರೈತರ ಹೋರಾಟ ನಡೆಸುತ್ತಿದೆ. ದೇಶದ ರೈತರ ಬಗ್ಗೆ ನಿರ್ಲಕ್ಷ್ಯ ಭಾವನೆ ತೋರುತ್ತಿರುವ ಕೇಂದ್ರ ಸರ್ಕಾರದ ವಿರುದ್ಧ ನ.26ರಿಂದ ನಡೆಯುವ ಉಪವಾಸ ಸತ್ಯಾಗ್ರಹಕ್ಕೆ ಪೂರ್ಣ ಬೆಂಬಲ ನೀಡುವುದಾಗಿ ಸಂಯುಕ್ತ ಕಿಸಾನ್ ಮೋರ್ಚಾ ದಕ್ಷಿಣ ಭಾರತ ಸಂಚಾಲಕ ತಿಳಿಸಿದರು. ಮೈಸೂರಿನ ಜಲದರ್ಶಿನಿಯಲ್ಲಿ ಈ ಸಂಬಂಧ ಸಭೆ ನಡೆಸಿ ಮಾತನಾಡಿದ ಅವರು, ದೆಹಲಿ ಸುತ್ತ ಗಡಿಗಳಲ್ಲಿ ಫೆ.13ರಿಂದ ಸಂಯುಕ್ತ ಕಿಸಾನ್ ಮೋರ್ಚಾ ತನ್ನ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟಿಸುತ್ತಿದ್ದಾರೆ.

ಇದನ್ನು ನಿರ್ಲಕ್ಷ್ಯ ಪಡೆದಿರುವ ಆಕ್ರೋಶಗೊಂಡ ರಾಷ್ಟ್ರೀಯ ರೈತ ಮುಖಂಡ ಜಗಜಿತ್ ಸಿಂಗ್ ಧಲೆವಾಲಾ ನ.26 ರಿಂದ ಆಮರಣಾಂತ ಉಪವಾಸ ಸತ್ಯಾಗ್ರಹ ಹಮ್ಮಿಕೊಂಡಿದ್ದಾರೆ. ಇದು ರೈತರ ಮಾಡು ಇಲ್ಲವೇ ಮಡಿ ಹೋರಾಟವಾಗಿದೆ. ರೈತರಿಗಾಗಿ ನನ್ನ ಜೀವ ಕೊಡಲು ಸಿದ್ಧ ಎಂದು

ಉದಯವಾಹಿನಿ ಚಿತ್ರ

ಹೋರಾಟಕ್ಕಿಳಿದಿದ್ದಾರೆ. ದೇಶಾದ್ಯಂತ ಎಲ್ಲಾ ರೈತ ಸಂಘಟನೆಗಳು ಒಕ್ಕೂರಲ್ಲಿಂದ ಬೆಂಬಲ ಸೂಚಿಸಿವೆ. ದೆಹಲಿ ರೈತರ ಉಪವಾಸ ಸತ್ಯಾಗ್ರಹ ಬೆಂಬಲಿಸಿ ರಾಜ್ಯದ ಎಲ್ಲಾ ಜಿಲ್ಲಾ ಅಧಿಕಾರಿಗಳ ಕಚೇರಿಯ ಮುಂದೆ ರೈತ ಸಂಘಟನೆಗಳು 26 ರಂದು ಮೌನ ಧರಣಿ ನಡೆಸಿ ರಾಷ್ಟ್ರಪತಿಗಳಿಗೆ. ಹಾಗೂ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಿಗೆ ಮನವಿ ಸಲ್ಲಿಸಲು ತೀರ್ಮಾನಿಸಿದೆ.

ಕೇಂದ್ರ ಸರ್ಕಾರ ಎಚ್ಚೆತ್ತುಕೊಳ್ಳದಿದ್ದರೆ ರಾಜ್ಯದಲ್ಲಿಯೂ ದೆಹಲಿ ಹೋರಾಟ ಬೆಂಬಲಿಸಿ ಸಹಸ್ರಾರು ಸಂಖ್ಯೆಯ ರೈತರು ಉಪವಾಸ ಸತ್ಯಾಗ್ರಹ ನಡೆಸಬೇಕಾಗುತ್ತದೆ. ದೆಹಲಿ ರೈತ ಮುಖಂಡರ ಪ್ರಾಣಕ್ಕೆ ಅಪಾಯ ಆದರೆ ಕೇಂದ್ರ ಸರ್ಕಾರವೇ ಹೊಣೆ ಹೊರಬೇಕಾಗುತ್ತದೆ ದೇಶದ ರೈತರ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿದರು.

ಬಾಗಲಕೋಟೆ, ಬೆಳಗಾವಿ, ಗುಲ್ಬರ್ಗ ಇನ್ನಿತರ ಜಿಲ್ಲೆಗಳಲ್ಲಿ ಕಬ್ಬಿಗೆ ಎಫ್ ಆರ್ ಪಿ ಮೇಲೆ ಹೆಚ್ಚುವರಿ ದರ ನಿಗದಿ ಮಾಡಬೇಕೆಂದು ರೈತರು ಹೋರಾಟ ನಡೆಸುತ್ತಿದ್ದಾರೆ.

ಬೆಳಗಾವಿ ಅಧಿವೇಶನಕ್ಕೂ ಮೊದಲೇ ಮುಖ್ಯಮಂತ್ರಿಗಳು ರೈತ ಮುಖಂಡರ ಸಭೆ ಕರೆದು ರಾಜ್ಯಾದ್ಯಂತ ಇರುವ ಕಬ್ಬು ಬೆಳೆಗಾರರ ಸಮಸ್ಯೆ ಬಗೆಹರಿಸಬೇಕೆಂದು ಇದೇ ವೇಳೆ ಆಗ್ರಹಿಸಿದರು.ಸಭೆಯಲ್ಲಿ ಹತ್ತಳ್ಳಿ ದೇವರಾಜ್, ಎಂ.ಬಿ.ಚೇತನ್, ವಿಶ್ರಾಂತ ಕುಲಪತಿ ಎಂ.ಬಿ.ದಂಡಿನ್, ನಿವೃತ ಪ್ರಾಂಶುಪಾಲ ಮಹಾದೇವಯ್ಯ, ಡಾ.ವಸಂತ್ ಕುಮಾರ್, ಸಾಹಿತಿ ಬಿಸ್ಲಳ್ಳಿ ವೀರಭದ್ರಪ್ಪ, ಬರಡನಪುರ ನಾಗರಾಜ್, ಕಿರಗಸೂರ ಶಂಕರ, ಮೂಕಹಳ್ಳಿ ಮಹದೇವಸ್ವಾಮಿ, ನೀಲಕಂಠಪ್ಪ, ವಿಜಯೇಂದ್ರ, ಪೈ.ವೆಂಕಟೇಶ್ ಮುಂತಾದವರು ಇದ್ದರು.

ಪ್ರಮುಖ ಆರೋಪಿ ಇಮ್ಮಡಿ ಮಹದೇವಸ್ವಾಮಿ ಜಾಮೀನು ಅರ್ಜಿ ಮತ್ತೆ ವಜಾ

• ಉದಯವಾಹಿನಿ, ಚಾಮರಾಜನಗರ

ಇಡೀ ದೇಶವನ್ನೇ ಬೆಚ್ಚಿ ಬೀಳಿಸಿದ್ದ ಸುಳ್ವಾಡಿ ವಿಷ ಪ್ರಸಾದ ಪ್ರಕರಣದ ಪ್ರಮುಖ ಆರೋಪಿ ಇಮ್ಮಡಿ ಮಹದೇವಸ್ವಾಮಿ ಜಾಮೀನು ಅರ್ಜಿ ಮತ್ತೆ ವಜಾ ಆಗಿದೆ. ಜಾಮೀನು ಅರ್ಜಿ ವಜಾಗೊಳಿಸಿ ಚಾಮರಾಜನಗರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಬಿ.ಎಸ್ ಭಾರತಿ ಆದೇಶ ಹೊರಡಿಸಿದ್ದಾರೆ. ಜಿಲ್ಲಾ ನ್ಯಾಯಾಲಯ, ಹೈಕೋರ್ಟ್, ಸುಪ್ರೀಂ ಕೋರ್ಟ್‌ಗಳಲ್ಲೂ ಜಾಮೀನು ಅರ್ಜಿ ವಜಾ ಆಗಿತ್ತು.

ಅನಾರೋಗ್ಯದ ಕಾರಣ ನೀಡಿ ಆರೋಪಿ ಇಮ್ಮಡಿ ಮಹದೇವಸ್ವಾಮಿ ಮತ್ತೆ ಜಿಲ್ಲಾ ನ್ಯಾಯಾಲಯಕ್ಕೆ ಜಾಮೀನು ಅರ್ಜಿ ಸಲ್ಲಿಸಿದ್ದರು. ಇದೀಗ ಮತ್ತೆ ಜಾಮೀನು ಅರ್ಜಿಯನ್ನು ಚಾಮರಾಜನಗರ ಜಿಲ್ಲಾ ನ್ಯಾಯಾಲಯವು ವಜಾ ಮಾಡಿದೆ. ಕಳೆದ 5 ವರ್ಷ 11 ತಿಂಗಳಿಂದ ಇಮ್ಮಡಿ

ಸುಳ್ವಾಡಿ ವಿಷ ಪ್ರಸಾದ ಪ್ರಕರಣ

ಮಹದೇವಸ್ವಾಮಿ ಜೈಲಿನಲ್ಲಿದ್ದಾರೆ.

ಮಹದೇಶ್ವರ ಬೆಟ್ಟ ಸಾಲೂರು ಮಠದ ಕಿರಿಯ ಸ್ವಾಮೀಜಿ ಆಗಿದ್ದ ಇಮ್ಮಡಿ ಮಹದೇವಸ್ವಾಮಿ, ಸುಳ್ವಾಡಿ ಕಿಚ್‌ಗುತ್ ಮಾರಮ್ಮ ದೇವಸ್ಥಾನದ ಆಡಳಿತದಲ್ಲಿ ಆಧಿಪತ್ಯ ಸ್ಥಾಪಿಸಲು ಪಿತೂರಿ ನಡೆಸಿದ್ದರು. ಮತ್ತೊಂದು ಗುಂಪಿಗೆ ಕೆಟ್ಟ ಹೆಸರು ತರಲು ಪ್ರಸಾದಕ್ಕೆ ವಿಷ ಬೆರೆಸಿದ್ದ ಆರೋಪ ಕೇಳಿಬಂದಿತ್ತು.

2018ರ ಡಿ.14 ರಲ್ಲಿ ನಡೆದ ಘಟನೆಯಲ್ಲಿ 17 ಮಂದಿ ಭಕ್ತರು ಮೃತಪಟ್ಟಿದ್ದರು. 127 ಮಂದಿ ಅಸ್ವಸ್ಥಗೊಂಡಿದ್ದರು.

ಸದ್ಯ ಮೊದಲ ಆರೋಪಿ ಇಮ್ಮಡಿ ಮಹದೇವಸ್ವಾಮಿ, ಎರಡನೇ ಆರೋಪಿ ಅಂಬಿಕಾ, ಮೂರನೇ ಆರೋಪಿ ದೇವಸ್ಥಾನದ ವ್ಯವಸ್ಥಾಪಕ ಮಾದೇಶ್, ನಾಲ್ಕನೇ ಆರೋಪಿ ತಂಬಡಿ ದೊಡ್ಡಯ್ಯ ಮೈಸೂರಿನ ಜೈಲಿನಲ್ಲಿದ್ದಾರೆ.

ಕೋಟ್ಯಧಿಪತಿ ಮಾದಪ್ಪ : 27 ದಿನದಲ್ಲಿ 2.43 ಕೋಟಿ ಕಾಣಿಕೆ ಸಂಗ್ರಹ

• ಉದಯವಾಹಿನಿ, ಹನೂರು

ತಾಲ್ಲೂಕಿನ ಪ್ರಸಿದ್ಧ ಪುಣ್ಯ ಕ್ಷೇತ್ರ ಶ್ರೀ ಮಲೈ ಮಹದೇಶ್ವರಬೆಟ್ಟ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರ ವತಿಯಿಂದ ದೇವಾಲಯದ ಹುಂಡಿಕೆ ಕಾರ್ಯ ನಡೆಯಿತು.

ಭಕ್ತಾಧಿಗಳು ಹರಿಕೆ ರೂಪದಲ್ಲಿ ಸಲ್ಲಿಸಿದ ಕಾಣಿಕೆ 27 ದಿನದಲ್ಲಿ ಸಂಗ್ರಹ ಆಗಿರುವ ಮಾದಪ್ಪನ ಹುಂಡಿಯಲ್ಲಿ 2,43,65,775/-ಕೋಟಿ ರೂ. ನಗದು 62 ಗ್ರಾಂ. ಚಿನ್ನ, 2.512 ಕೆ.ಜಿ ಬೆಳ್ಳಿಯ ಪದಾರ್ಥಗಳು ಸಂಗ್ರಹವಾಗಿದೆ. ಅಲ್ಲದೆ 05 ವಿದೇಶಿ ಕರೆನ್ಸಿ ಹಾಗೂ 2 ಸಾವಿರ ಮುಖಬೆಲೆ 22

ನೋಟುಗಳು ದೊರೆತಿದೆ. ಸಾಲೂರು ಬೃಹನಠಾಧ್ಯಕ್ಷರಾದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮಿಜೀಗಳ ಉಪಸ್ಥಿತಿಯಲ್ಲಿ ಪ್ರಾಧಿಕಾರದ ಕಾರ್ಯದರ್ಶಿ ಎ.ಇ.ರಘು ನೇತೃತ್ವದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆದಿದೆ. ಮ.ಬೆಟ್ಟದ ಖಾಸಗಿ ಬಸ್ ನಿಲ್ದಾಣ ವಾಣಿಜ್ಯ ಸಂಕೀರ್ಣ ಸಿಸಿ ಟಿವಿ ಕ್ಯಾಮೆರಾ ಕಣ್ಗಾವಲಿನಲ್ಲಿ ಮತ್ತು ಮ.ಬೆಟ್ಟ ಪೊಲೀಸರ ಬಂದೋಬಸ್ತ್ ನಲ್ಲಿ ಬೆಳಿಗ್ಗೆ 6:30 ಗಂಟೆಗೆ ಪ್ರಾರಂಭವಾದ ಹುಂಡಿ ಹಣ ಎಣಿಕೆ ಕಾರ್ಯವು ಸಂಜೆ 7:00 ರವರೆಗೂ ನಡೆಯಿತು.

ಹುಂಡಿ ಎಣಿಕೆ ಪ್ರಕ್ರಿಯೆಯಲ್ಲಿ ಪ್ರಾಧಿಕಾರದ ಕಾರ್ಯದರ್ಶಿ ರಘು ಉಪ ಕಾರ್ಯದರ್ಶಿ ಚಂದ್ರಶೇಖರ್ ಸರಗೂರು ಮಹದೇವಸ್ವಾಮಿ ಹಣಕಾಸು ಲೆಕ್ಕ ಪತ್ರ ಸಲಹೆಗಾರ ಜಿಲ್ಲಾಡಳಿತ ಕಛೇರಿ ಸಂಗೀತ ಹಾಗೂ ಪ್ರಾಧಿಕಾರದ ಸಿಬ್ಬಂದಿಗಳು ಪೊಲೀಸ್ ಅಧಿಕಾರಿಗಳು ಮತ್ತು ಕೊಳ್ಳೇಗಾಲ ಬ್ಯಾಂಕ್ ಅಪ್ ಬರೋಡ ವ್ಯವಸ್ಥಾಪಕರು ಮತ್ತು ಸಿಬ್ಬಂದಿಗಳು ಹಾಜರಿದ್ದರು.

ಕ್ರೀಡಾ ಜ್ಯೋತಿ ಮೆರವಣಿಗೆಗೆ ಸಚಿವ ಪರಂ ಚಾಲನೆ

• ಉದಯವಾಹಿನಿ, ತುಮಕೂರು

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ರಾಜ್ಯಮಟ್ಟದ ಕ್ರೀಡಾಕೂಟದ ಅಂಗವಾಗಿ ಇಂದಿನಿಂದ ಜಿಲ್ಲೆಯಾದ್ಯಂತ ಹಮ್ಮಿಕೊಂಡಿರುವ ಕ್ರೀಡಾಜ್ಯೋತಿ ಮೆರವಣಿಗೆಗೆ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ನಗರದಲ್ಲಿಂದು ವಿದ್ಯುಕ್ತ ಚಾಲನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಜಿಲ್ಲೆಯಾದ್ಯಂತ ಕ್ರೀಡಾಜ್ಯೋತಿ ಕೊಂಡೊಯ್ಯುವ ವಾಹನಕ್ಕೆ ಪೂಜೆ ಸಲ್ಲಿಸಿ ಕ್ರೀಡಾಜ್ಯೋತಿಯನ್ನು ಬೆಳಗುವ ಮೂಲಕ ಚಾಲನೆ ನೀಡಿದ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರ ಮೇಶ್ವರ್ ಅವರು ಮಾತನಾಡಿ, ತುಮಕೂರಿನಲ್ಲಿ ಇದೇ ಮೊದಲ ಬಾರಿಗೆ ನ. 24 ರಂದು ರಾಜ್ಯಮಟ್ಟದ ಪತ್ರಕರ್ತರ ಕ್ರೀಡಾಕೂಟ ಆಯೋಜನೆ ಮಾಡಲಾಗಿದೆ.

ರಾಜ್ಯಮಟ್ಟದ ಪತ್ರಕರ್ತರ ಕ್ರೀಡಾಕೂಟ ಆಯೋಜನೆ

ಇದರ ಅಂಗವಾಗಿ ಕ್ರೀಡಾ ಜ್ಯೋತಿಯನ್ನು ಇಡೀ ಜಿಲ್ಲೆಯಲ್ಲಿ ಶಾಂತಿಯ ಸಂದೇಶ ಸಾರುವ ಸಲುವಾಗಿ ಕ್ರೀಡಾಜ್ಯೋತಿ ಮೆರವಣಿಗೆಗೆ ಚಾಲನೆ ನೀಡಲಾಗಿದೆ. ಈ ಕ್ರೀಡಾಜ್ಯೋತಿ ಜಿಲ್ಲೆಯ

ಉದಯವಾಹಿನಿ ಚಿತ್ರ

ಎಲ್ಲಾ ತಾಲ್ಲೂಕು ಗಳಲ್ಲೂ ಸಂಚರಿಸಿ ಸಮಾಜದಲ್ಲಿ ಶಾಂತಿ, ಸಹೋದರತ್ವ ಭಾವನೆಯಿಂದ ಬಾಳಬೇಕು ಎಂಬ ಸಂದೇಶ ಸಾರಲಿದೆ ಎಂದರು.

ಪ್ರತಿಯೊಬ್ಬ ಪತ್ರಕರ್ತರಲ್ಲೂ ಕ್ರೀಡಾ ಮನೋಭಾವನೆ ಮೂಡಬೇಕು. ಈ ನಿಟ್ಟಿನಲ್ಲಿ ಕ್ರೀಡಾಜ್ಯೋತಿ ಮೆರವಣಿಗೆ ನಡೆಯುತ್ತಿದೆ ಎಂದು ಅವರು ಹೇಳಿದರು.

ನಾನು ಒಬ್ಬ ಕ್ರೀಡಾಪಟುವಾಗಿ ಕ್ರೀಡಾಜ್ಯೋತಿ ಮೆರವಣಿಗೆಗೆ ಚಾಲನೆ ನೀಡುರುವುದು ತುಂಬಾ ಸಂತೋಷ ತಂದಿದೆ ಎಂದು ಅವರು ತಿಳಿಸಿದರು.

ನ. 24 ರಂದು ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ನಡೆಯಲಿರುವ ರಾಜ್ಯಮಟ್ಟದ ಪತ್ರಕರ್ತರ ಕ್ರೀಡಾಕೂಟ ಯಶಸ್ವಿಯಾಗಿ ನಡೆಯಲಿ ಎಂದು

ಡಿಸೆಂಬರ್ 2 ರಂದು ಮುಖ್ಯಮಂತ್ರಿಗಳು ಜಿಲ್ಲೆಗೆ ಭೇಟಿ ನೀಡುತ್ತಿದ್ದಾರೆ. ಅಂದು ಈ ಭಾಗದಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ ಮಾಡುವಂತೆ ಮನವಿ ಮಾಡಲಾಗುವುದು. ಮಧುಗಿರಿ-ಕೊರಟಗೆರೆ ಭಾಗದಲ್ಲಿ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಂತೆ 2-3 ಸಾವಿರ ಎಕರೆ ಜಾಗ ಇದೆ. ಅದನ್ನು ವಿಮಾನ ನಿಲ್ದಾಣ ಸ್ಥಾಪನೆಗೆ ಬಳಸಿಕೊಳ್ಳುವಂತೆ ಮುಖ್ಯಮಂತ್ರಿಗಳಿಗೆ ಕೋರಲಾಗುವುದು ಎಂದರು.

ಅವರು ಇದೇ ಸಂದರ

ಅಂತರಾಳದಿಂದ... EDITORIAL

ಬಿಪಿಎಲ್ ಪಡಿತರ ಚೀಟಿ ಪರಿಷ್ಕರಣೆ

ರಾಜ್ಯ ಸರ್ಕಾರ ದೃಢ ನಿಲುವು ತಳೆಯಲಿ

ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಪಡಿತರ ಚೀಟಿಗಳನ್ನು ಅರ್ಹರಲ್ಲದವರೂ ಪಡೆದುಕೊಂಡಿದ್ದಾರೆ. ಅಂತಹವುಗಳನ್ನು ಗುರುತಿಸಿ, ರದ್ದುಗೊಳಿಸುವ ಕೆಲಸ ಆಗಲೇಬೇಕಾಗಿದೆ. ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳ ಪ್ರಯೋಜನವು ಅರ್ಹ ಫಲಾನುಭವಿಗಳಿಗೆ ಮಾತ್ರ ತಲುಪುವುದನ್ನು ಖಾತರಿ ಪಡಿಸಿಕೊಳ್ಳುವ ದೃಷ್ಟಿಯಿಂದ ಇದು ಅಗತ್ಯವಾಗಿ ಮಾಡಲೇಬೇಕಾದ ಕೆಲಸ. ನೀತಿ ಆಯೋಗವು ಈ ವರ್ಷದ ಜನವರಿಯಲ್ಲಿ ಬಿಡುಗಡೆ ಮಾಡಿರುವ ವರದಿ ಪ್ರಕಾರ. ಭಾರತದಲ್ಲಿ ಬಹು ಆಯಾಮದ ಬಡತನದ ಪ್ರಮಾಣವು 2022-23ರ ವೇಳೆಗೆ ಶೇಕಡ 11.28ಕ್ಕೆ ಕುಸಿದಿದೆ. ಆದರೆ, ಕರ್ನಾಟಕದ ಶೇ.85ರಷ್ಟು ಕುಟುಂಬಗಳು ಬಿಪಿಎಲ್ ಪಡಿತರ ಚೀಟಿಗಳನ್ನು ಹೊಂದಿವೆ. ಕರ್ನಾಟಕವು ಈಗ ದಕ್ಷಿಣ ಭಾರತದಲ್ಲಿ ಅತ್ಯಧಿಕ ಬಿಪಿಎಲ್ ಪಡಿತರ ಚೀಟಿಗಳನ್ನು ಹೊಂದಿರುವ ರಾಜ್ಯವಾಗಿದೆ. ದುರ್ಬಲರಿಗಾಗಿ ಜಾರಿಯಲ್ಲಿರುವ ಕಲ್ಯಾಣ ಕಾರ್ಯಕ್ರಮಗಳ ಸೌಲಭ್ಯಗಳನ್ನು ಕೆಲವು ಸರ್ಕಾರಿ ನೌಕರರೂ ಸೇರಿದಂತೆ ಆರ್ಥಿಕವಾಗಿ ಸುಸ್ಥಿತಿಯಲ್ಲಿರುವವರು ಕಬಳಿಸುತ್ತಿದ್ದಾರೆ.

ರಾಜ್ಯ ಸರ್ಕಾರದ ಬೊಕ್ಕಸದ ಮೇಲೆ ಆಗುತ್ತಿರುವ ಹೊರೆಯನ್ನು ತಪ್ಪಿಸಲು ಹಾಗೂ ಅರ್ಹರಲ್ಲದವರು ಸರ್ಕಾರದ ಯೋಜನೆಗಳ ದುರ್ಲಾಭ ಪಡೆಯುವುದನ್ನು ತಡೆಯಲು ಈ ಹೆಜ್ಜೆ ಅತಿ ಅಗತ್ಯ ಎಂಬುದನ್ನು ಸರ್ಕಾರವು ಜನರಿಗೆ ಮನವರಿಕೆ ಮಾಡಿಕೊಡಬೇಕು. ರಾಜಕೀಯ ಲಾಭಕ್ಕಾಗಿ ಮಾಡುವ ವಿರೋಧವನ್ನು ಲೆಕ್ಕಿಸದೇ ದೃಢವಾದ ನಿಲುವು ತಳೆಯಬೇಕಾದ ಹೊಣೆಗಾರಿಕೆ ಆಡಳಿತ ನಡೆಸುತ್ತಿರುವವರ ಮೇಲಿದೆ. ಬಿಪಿಎಲ್ ಕುಟುಂಬಗಳ ಪಟ್ಟಿ ಪರಿಷ್ಕರಣೆಯು ದೀರ್ಘಕಾಲದಿಂದಲೂ ಕಗ್ಗಂಟಾಗಿಯೇ ಉಳಿದಿದೆ.

ಅರ್ಹರಲ್ಲದವರು ಹೊಂದಿರುವ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದು ಮಾಡುವುದು ಸಂಪನ್ಮೂಲದ ಸರಿಯಾದ ಹಂಚಿಕೆಗೆ ಅವಕಾಶ ಕಲ್ಪಿಸುವುದಲ್ಲದೆ ರಾಜ್ಯದ ಬೊಕ್ಕಸದ ಮೇಲಿನ ಹೊರೆಯನ್ನೂ ತಗ್ಗಿಸಲಿದೆ. ಸರಿಯಾದ ನಿಗಾ ವ್ಯವಸ್ಥೆ ಇಲ್ಲದಿರುವುದು ಮತ್ತು ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಅರ್ಹರಲ್ಲದವರು ಈ ಯೋಜನೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇದು, ಬಡವರಿಗೆ ಅಗತ್ಯವಿರುವ ನೆರವಿನ ನಿರಾಕರಣೆಗೆ ಕಾರಣವಾಗುತ್ತಿದೆ. ಸ್ಥಳೀಯ ಅಧಿಕಾರಿಗಳು ಮತ್ತು ಚುನಾಯಿತ ಪ್ರತಿನಿಧಿಗಳು ಬಿಪಿಎಲ್ ಪಡಿತರ ಚೀಟಿಗಳ ದುರ್ಬಳಕೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಶಾಮೀಲಾಗಿದ್ದಾರೆ. ಹಲವು ಪ್ರಕರಣಗಳಲ್ಲಿ ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದು, ಅರ್ಹತಾ ಮಾನದಂಡಗಳನ್ನೇ ಉಲ್ಲಂಘಿಸಿ ಅರ್ಹರಲ್ಲದವರಿಗೆ ಬಿಪಿಎಲ್ ಪಡಿತರ ಚೀಟಿಗಳನ್ನು ಮಂಜೂರು ಮಾಡಿರುವ ಉದಾಹರಣೆಗಳಿವೆ. ಬಿಪಿಎಲ್ ಕುಟುಂಬಗಳ ಪಟ್ಟಿಯನ್ನು ತಂತ್ರಜ್ಞಾನದ ನೆರವಿನಿಂದ ನಿಯಮಿತವಾಗಿ ಪರಿಷ್ಕರಿಸದೇ ಇರುವುದು ಕೂಡ ಈ ಸಮಸ್ಯೆ ಜಟಿಲವಾಗಿ ಬೆಳೆಯಲು ಕಾರಣ. ಇದನ್ನು ತಡೆಯಬೇಕಾದರೆ, ಅರ್ಹತಾ ಮಾನದಂಡಗಳ ಉಲ್ಲಂಘನೆಗೆ ಅವಕಾಶವೇ ಇಲ್ಲದಂತಹ ಅತ್ಯಂತ ಬಲಿಷ್ಠವಾದ ಮೇಲುಸ್ತುವಾರಿ ವ್ಯವಸ್ಥೆಯೊಂದನ್ನು ರಾಜ್ಯ ಸರ್ಕಾರ ರೂಪಿಸಬೇಕು. ಬಿಪಿಎಲ್ ಕುಟುಂಬಗಳ ಪಟ್ಟಿಯನ್ನು ನಿರಂತರವಾಗಿ ಪರಿಷ್ಕರಿಸುವ ವ್ಯವಸ್ಥೆ ಇರಬೇಕು. ಅದು. ಪಾರದರ್ಶಕವಾಗಿರಬೇಕು ಮತ್ತು ನಿಯಮಿತವಾಗಿ ಪರಿಶೀಲನೆಗೂ ಒಳಗಾಗಬೇಕು. ಈ ದಿಸೆಯಲ್ಲಿ ಸ್ವತಂತ್ರ ವ್ಯವಸ್ಥೆ ಯೊಂದನ್ನು ಆಸ್ತಿತ್ವಕ್ಕೆ ತರುವ ಬಗ್ಗೆಯೂ ರಾಜ್ಯ ಸರ್ಕಾರ ಯೋಚಿಸಬೇಕು. ಯಾವ ಅರ್ಹ ಫಲಾನುಭವಿಯೂ ಪಟ್ಟಿಯಿಂದ ಹೊರಗುಳಿಯಬಾರದು ಮತ್ತು ಕಾನೂನಿನ ಅಡಿಯಲ್ಲಿ ಅವರಿಗೆ ಸಿಗಬೇಕಾದ ಸೌಲಭ್ಯಗಳು ಸಿಗಬೇಕು. ಇದನ್ನು ಖಾತರಿಪಡಿಸುವುದೇ ಈ ಪ್ರಕ್ರಿಯೆಯ ಗುರಿಯಾಗಿರಬೇಕು. ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಮುಕ್ತ ಮತ್ತು ನ್ಯಾಯಸಮ್ಮತ ವ್ಯವಸ್ಥೆಯೊಂದನ್ನು ರೂಪಿಸಲು ಈ ಶುದ್ದೀಕರಣ ಪ್ರಕ್ರಿಯೆಯು ಬಳಕೆಯಾಗಬೇಕು. ಅದಕ್ಕೆ ಅಂತ್ಯ ಹಾಡಲು ಇದು ಸಕಾಲ. ಜೊತೆಗೆ ಈಗಲೂ ಅಂತಹ ಸೌಲಭ್ಯಗಳಿಂದ ದೂರವೇ ಉಳಿದಿರುವ ಅರ್ಹ ಬಡ ಕುಟುಂಬಗಳನ್ನು ಬಿಪಿಎಲ್ ಪಟ್ಟಿಗೆ ಸೇರಿಸಿ ನ್ಯಾಯ ಒದಗಿಸಬೇಕಾದ ಜವಾಬ್ದಾರಿಯೂ ಸರ್ಕಾರದ ಮೇಲಿದೆ. ಈ ದಿಸೆಯಲ್ಲಿ ಭ್ರಷ್ಟಾಚಾರ, ರಾಜಕೀಯ ಹಸ್ತಕ್ಷೇಪ, ಪಕ್ಷಪಾತಕ್ಕೆ ಅವಕಾಶವೇ ಇಲ್ಲದಂತಹ ಕಟ್ಟುನಿಟ್ಟಿನ ಪ್ರಕ್ರಿಯೆಯೊಂದನ್ನು ರೂಪಿಸಿ. ಅನುಷ್ಠಾನಕ್ಕೆ ತಂದರಷ್ಟೇ ಈ ಎಲ್ಲವೂ ಸಾಧ್ಯ.

ಮದಾಲಸ ಕಥೆ - ಹೊಸದು

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ತಾಯಿಯು ಮಕ್ಕಳಿಗೆ ಕೊಟ್ಟ ಶಿಕ್ಷಣ

ಮದಾಲಸ ಎಂಬ ರಾಜನ ಹೆಂಡತಿ ಬಹಳ ಧರ್ಮವಂತೆ, ತ್ಯಾಗಶೀಲೆ, ಆದರ್ಶಗೃಹಿಣಿ. ಒಂದು ಮಗು ಹಡೆದಳು, ಆ ಮಗುವಿಗೆ ಎದೆ ಹಾಲು ಕುಡಿಸುವಾಗ, ತೊಟ್ಟಿಲಲ್ಲಿ ಮಲಗಿಸುವಾಗ, ಸದಾ ಕಾಲದಲ್ಲಿಯೂ ನೀನು ದೇಹವಲ್ಲ, ನೀನು ಬ್ರಹ್ಮಸ್ವರೂಪನು, ನೀನು ನಿತ್ಯನು, ಬುದ್ಧನು, ನಿರಂಜನನು, ಈ ದೇಹ ಹಿಂದೆ ಇರಲಿಲ್ಲ, ಈಗ ಬಂದಿದೆ, ಸ್ವಲ್ಪದಿವಸ ಇರುತ್ತದೆ, ಕೊನೆಗೆ ನಾಶವಾಗುತ್ತದೆ. ಎಂಬುದನ್ನು ಹೇಳಿ ಹೇಳಿ, ತನ್ನ ಮೂರು ಜನ ಮಕ್ಕಳನ್ನೆಲ್ಲ ಸನ್ಯಾಸಿಗಳನ್ನಾಗಿ ಮಾಡಿದಳು. ತಂದೆ ರಾಜನಿಗೆ ಮುಂದೆ ರಾಜ್ಯವನ್ನು ಆಳುವ ರಾಜನೇ ಇಲ್ಲದಂತಾಗುತ್ತದೆ ಎಂದು ಯೋಚನೆ ಮಾಡಿ, ನಾಲ್ಕನೇ ಮಗುವು ಹುಟ್ಟಿದ ಕೂಡಲೇ ಬಹು ದೂರ ತಾಯಿಯಿಂದ ದೂರ ಮಾಡಿ ಬೇರೆ ಕಡೆ ಬೆಳೆಸಿದ. ಹಾಗೆ ದೊಡ್ಡವನಾದ ರಾಜಕುಮಾರ ತಂದೆ-ತಾಯಿ ನಂತರ ರಾಜ್ಯಕ್ಕೆ ಮರಳಿ, ರಾಜನು ಆದ.

ಒಂದು ದಿವಸ ಆ ರಾಜ್ಯಕ್ಕೆ ಪರರಾಜರು ಬಂದು ಮುತ್ತಿಗೆ ಹಾಕಿದರು, ಇವನು ಶಸ್ತ್ರ ಅಭ್ಯಾಸ ಕಲಿತಿಲ್ಲ ಅಳುತ್ತಾ ಕುಳಿತ, ಆಗ ಅವನನ್ನು ಸಾಕಿದ ದಾಸಿ ಒಬ್ಬಳು ಬಂದು, ನಿನ್ನ ತಾಯಿ ಹೇಳಿದ್ದರು, ನಿನಗೆ ದುಃಖ ಬಂದಾಗ ನಿನ್ನ ಕುತ್ತಿಗೆಯಲ್ಲಿರುವ ತಾಮ್ರದ ತಾಯಿತವನ್ನು ಬಿಚ್ಚಿ ಓದು ಎಂದು ಹೇಳಿದ್ದರು, ಅದರಂತೆ ಮಾಡಿ ಎಂದು ಹೇಳಿದಳು. ಅವನು ದಾಸಿ ಹೇಳಿದಂತೆ, ಆ ತಾಯಿತವನ್ನು ಬಿಚ್ಚಿ ಓದಿದ ಅದರಲ್ಲಿ ಅವರ ತಾಯಿ ಬರೆದಿದ್ದಳು, ಸಿದ್ಧೋಸಿ ಬುದ್ಧೋಸಿ ನಿರಂಜನೋಸಿ ಸಂಸಾರ ಮಾಯಾ ಪರಿವಜ್ರಿತೋಸಿ ಸಂಸಾರ ಸ್ವಪ್ನಮ್ತ್ಯ ಜಮೋಹ ನಿದ್ರಾ ಮದಾಲಸ ಪುತ್ರ ಉವಾಚ ಅಂದರೆ ನೀನು ಸಿದ್ದನೂ ಬುದ್ದನೂ ನಿರಂಜನನು, ಈ ದೇಹ ಹಾಗೂ ಸಂಸಾರ ಬರೀ ಜಾಗೃತಾವಸ್ಥೆಯಲ್ಲಿ ಇರುತ್ತದೆ, ಸ್ವಪ್ನದಲ್ಲಿ ಬೇರೆಯೇ ಪ್ರಪಂಚ, ಸುಷ್ತಾವಸ್ಥೆಯಲ್ಲಿ ಹೆಂಡತಿ ಮಕ್ಕಳು ಯಾವುದು ಇಲ್ಲ, ಇವೆಲ್ಲವೂ ಅನಿತ್ಯ, ಅಂದರೆ ಒಂದು ಅವಸ್ಥೆಯಲ್ಲಿದ್ದು ಇನ್ನೊಂದು ಅವಸ್ಥೆಯಲ್ಲಿ ಇಲ್ಲದೇ ಇರುವುದು, ಆದ್ದರಿಂದ ಈ ಸಂಸಾರ ದೇಹ ಇವೆಲ್ಲವೂ ಮಿಥ್ಯೆ, ಈ ಮೋಹ ನಿದ್ರೆಯಿಂದ ಹೇಳು ಎಂಬುದಾಗಿತ್ತು. ಕೂಡಲೇ ರಾಜಕುಮಾರ ಮುತ್ತಿಗೆ ಹಾಕಿರುವವರ ಹತ್ತಿರ ಹೋಗಿ, ಅವರಿಗೆ ತನ್ನೆಲ್ಲ ರಾಜ್ಯವನ್ನು ಅರ್ಪಿಸಿದ.

ಅವರು ಯಾರು ಅಂದರೆ, ಅವರು ಬೇರೆ ಯಾರೂ ಅಲ್ಲ, ಅವರ ಅಣ್ಣಂದಿರು. ಅವನನ್ನು ಬ್ರಹ್ಮಜ್ಞಾನಿನನ್ನಾಗಿ ಮಾಡಿದರು. ಇದು ಒಂದು ಮದಾಲಸ ಎಂಬ ತಾಯಿಯು ಮಕ್ಕಳಿಗೆ ಕೊಟ್ಟ ಶಿಕ್ಷಣ.

ಜಾತಸ್ಯ ಧ್ರುವೊ ಮೃತ್ಯು

ಧ್ರುವಂ ಜನ್ಮ ಮೃತಸ್ಯಚ ಎಂಬ ಗೀತಾ ವಾಣಿಯಂತೆ ಹುಟ್ಟಿದವನು ಸಾಯಲೇಬೇಕು, ಸತ್ತ ಮೇಲೆ ಹುಟ್ಟಲೇಬೇಕು, ಆದ್ದರಿಂದ ಈ ಜನನ ಮರಣ ಎಂಬ ಚಕ್ರದಿಂದ ಹೊರಗೆ ಬರಬೇಕಾದರೆ, ನಾನು ಯಾರು? ನಾನು ಏತಕ್ಕೋಸ್ಕರ ಬಂದಿದ್ದೇನೆ, ತನ್ನ ಸ್ವಸ್ವರೂಪವಾದ ಆತ್ಮನನ್ನು ತಿಳಿಯುವುದು ಹೇಗೆ

ನೀತಿ: ತಾಯಿಯೂ ಮಗನನ್ನು ಒಬ್ಬ ಕಳ್ಳನನ್ನಾಗಿಯೊ, ಒಬ್ಬ ರಾಜನನ್ನಾಗಿಯೊ, ಸನ್ಯಾಸಿಯನ್ನಾಗಿಯೂ, ಶೂರನನ್ನಾಗಿಯೂ, ವಿನೋಬಾಭಾವೆ ಅವರಂಗೆ ತ್ಯಾಗಿಯನ್ನಾಗಿಯೂ, ಗಾಂಧೀಜಿಯವರಂತೆ ರಾಷ್ಟ್ರಚಿಂತಕರನ್ನಾಗಿಯೂ ಮಾಡಬಲ್ಲಳು. ಆದ್ದರಿಂದ ತಂದೆ ತಾಯಿಯ ಪಾತ್ರ ಮಕ್ಕಳ ಮೇಲೆ ಒಳ್ಳೆಯ ಪರಿಣಾಮವನ್ನು ಉಂಟು ಮಾಡಬಲ್ಲದು. ಆದ್ದರಿಂದ ಭಕ್ತಮಹಾಶಯರೇ, ಮಕ್ಕಳಿಗೆ ಉತ್ತಮ ಸಂಸ್ಕಾರವನ್ನು ಚಿಕ್ಕಂದಿನಲ್ಲಿಯೇ ಕಲಿಸಿ ಅವರನ್ನು ಉತ್ತಮ ಪ್ರಜೆಯನ್ನಾಗಿ ಮಾಡಬಹುದು.

ಬ್ರಸ್ಸೆಲ್ಸ್‌ನಲ್ಲಿ ಕನ್ನಡ ರಾಜ್ಯೋತ್ಸವದ ಸಂಭ್ರಮ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ನವೆಂಬರ್ 10ರಂದು ಬೆಲ್ಜಿಯಮ ನ ಬ್ರಸ್ಸೆಲ್ಸ್ ನಲ್ಲಿ ಬೆಲ್ಜಿಯಮ್ ಕನ್ನಡ ಸಂಘದ ವತಿಯಂದ ಕನ್ನಡ ರಾಜ್ಯೋತ್ಸವವನ್ನು ವಿಶಿಷ್ಟ ಉತ್ಸಾಹ ಮತ್ತು ಭಾವಪೂರ್ಣವಾಗಿ ಆಚರಿಸಿದರು. ಈ ಸೆಂಭ್ರಮದಲ್ಲಿ ಬೆಲ್ಜಿಯಮನ ಕನ್ನಡ ಸಮುದಾಯದ ಸುಮಾರು 180 ಮೆಂದಿ ಪಾಲ್ಗೊಂಡರು.

ಸಮಾರಂಭದ ಆರಂಭದಲ್ಲಿಯೇ ಕನ್ನಡ ಓದುಗರ ಸಮುದಾಯವನ್ನು ಬೆಳೆಸುವ, ಓದುವ ಆಸಕ್ತಿಯನ್ನು ಉತ್ತೇಜಿಸುವ ಹಾಗೂ ಕನ್ನಡ ಸಾಹಿತ್ಯದದ ಪ್ರೀತಿಯನ್ನು ಹರಡುವ ಸದುದ್ದೇಶದಿಂದ ಕಾರ್ಯಕ್ರಮಕ್ಕೆ ಬಂದವರಿಗೆ ಪೂರ್ಣಚಂದ್ರ ತೇಜಸ್ವಿ ಅವರ ಪುಸ್ತಕ ಮತ್ತು ಮಕ್ಕಳಿಗೆ ಕನ್ನಡದ ಬಾಲಕತ ಪುಸ್ತಕವನ್ನು ಉಡುಗೊರೆಯಾಗಿ ನೀಡಲಾಯಿತು. ಕಾರ್ಯಕ್ರಮವು ಕರ್ನಾಟಕದ ಶ್ರೀಮಂತ ಇತಿಹಾಸ, ಕನ್ನಡ ರಾಜ್ಯೋತ್ಸವದ ಮಹತ್ವದ ಚುಟುಕು ಪರಿಚಯದ ತರುವಾಯ ದೀಪ ಬೆಳಗುವ ಮೂಲಕ ಆರಂಭವಾಯಿತು. ನಂತರ ಬೆಲ್ಜಿಯಮ್ ನ ಮೊದಲ ಕನ್ನಡ ಸಂಗೀತ ಬ್ಯಾಂಡ್ ನೀನಾದ ತಂಡ ಕನ್ನಡ ನಾಡಗೀತೆ ಸೇರಿದಂತೆ ಕನ್ನಡದ ಸುಂದರ ಗೀತೆಗಳನ್ನು ಸಂಗೀತ ವಾದ್ಯಗಳೊಂದಿಗೆ ಪ್ರಸ್ತುತಪಡಿಸಿದರು ಅನೇಕ ಕಲಾವಿದರರಿಂದ ಗಾಯನ ಮಕ್ಕಳ ಮತ್ತು ಮಹಿಳೆಯರ ನೃತ್ಯ ಪ್ರದರ್ಶನಗಳು ಎಲ್ಲರನ್ನು ಆಕರ್ಷಿಸಿ, ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿತು.

ಪ್ರಶ್ನೋತ್ತರ ಸ್ಪರ್ಧೆಗಳು ಮತ್ತು ಮಕ್ಕಳ ಹಾಗೂ ವಯಸ್ಕರಿಗಾಗಿ ವಿಶೇಷವಾಗಿ ಆಯೋಜಿಸಲಾದ ಆಟೋಗಳು ನಾಡ ಹಬ್ಬವನ್ನು ಮತ್ತಷ್ಟು ವೈವಿಧ್ಯಮಯವಾಗಿ ಮಾಡಿತು. ಉತ್ಸಾಹಿ ಕನ್ನಡಿಗರ ತಂಡ ಸಿದ್ಧಪಡಿಸಿದ ಸವಿಯಾದ ಭೋಜನವೂ ಆಚರಣೆಗೆ ಹೆಚ್ಚಿನ ಉತ್ಸಾಹವನ್ನು ತುಂಬಿತ್ತು. ಕಾರ್ಯಕ್ರಮದ ಕೊನೆಗೆ ಸಮೂಹ ಚಿತ್ರ ತೆಗೆಸಿಕೊಳ್ಳುವ ಮೂಲಕ ಈ ಅಮೂಲ್ಯ ಕ್ಷಣಗಳನ್ನು ನೆನಪಾಗಿ ಉಳಿಸಿಕೊಂಡರು. ಈ ಕಾರ್ಯಕ್ರಮದಲ್ಲಿ ಹಾಸನ ಮೂಲದ ಇಂಜಿನಿಯರ್ ತ್ರಿಲೋಕ್ ಅವರು ಉಪಸ್ಥಿತರಿದ್ದರು. ಈ ರಾಜ್ಯೋತ್ಸವದ ಆಚರಣೆಯು ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಗೌರವಿಸುವುದರ ಜೊತೆಗೆ ಕನ್ನಡಿಗರನ್ನು ಹೃದಯಪೂರ್ವಕವಾಗಿ ಒಗ್ಗಟ್ಟನ್ನು ಹೆಚ್ಚಿಸಿ ,ತಮ್ಮ ಕನ್ನಡ ಪರಂಪರೆಯನ್ನು ಹೆಮ್ಮೆಯಿಂದ ಮುಂದುವರಿಸಲು ಪ್ರೇರೇಪಿಸಿತು

ಸಾಮಾಜಿಕ ಕಳಕಳಿ

ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

ಹೆಮ್ಮರಗಳಿರುವಲ್ಲಿ ಮಳೆ ಬಂದು ಹಸಿರಹುದು
ಅಮ್ಮನಾ ಮಡಿಲಂತೆ ತಂಪು ಇಹುದು
ಗಮ್ಮೆನುವ ಊಟವದು ಕಾದಿರಲು ಮನೆಯಲ್ಲಿ
ಸುಮ್ಮನಿರಲಾಗುವುದೆ ಲಕ್ಷ್ಮಿ ದೇವಿ....

ಭಾವಾರ್ಥ: ಒಂದು ಹೆಮ್ಮರ ಇರುವಾಗ ಮಳೆ ಬಂದಾಗ ಅದರ ಅಡಿ ನಾವು ನಿಂತು ರಕ್ಷಣೆಯನ್ನು ಪಡೆಯುತ್ತೇವೆ. ಅದು ಹೇಗೆ ರಕ್ಷಣೆಯನ್ನು ಪಡೆಯುತ್ತದೆಂದರೆ ಅಮ್ಮನ ಮಡಲಿನಲ್ಲಿ ರಕ್ಷಣೆ ಪಡೆದಂತೆ. ಅನಂತರದಲ್ಲಿ ಮನೆಗೆ ಹೋದಾಗ ಬಿಸಿ ಬಿಸಿ ಊಟವು ಮನೆಯಲ್ಲಿ ಕಾದಿರುತ್ತದೆ. ಆಗ ಊಟವನ್ನು ಚೆನ್ನಾಗಿ ಮಾಡುತ್ತೇವೆ. ಅದನ್ನು ಬೇಡ ಎನ್ನುವುದಿಲ್ಲ. ಮಳೆ ಬಂದು ಚಳಿಯಲ್ಲಿ ನಡುಗುತ್ತಿರುವಾಗ ಬಿಸಿ ಬಿಸಿ ಊಟ ಬೇಡವೆಂದು ಯಾರು ಹೇಳುತ್ತಾರೆ. ಅದನ್ನು ಬಹಳ ಆನಂದದಿಂದ ಸಂತೋಷದಿಂದ ಸವಿಯುತ್ತಾರೆ.



ದಿನಕ್ಕೊಂದು ಮುಕ್ತಕ -30

ವೇತನ ವಿಳಂಬ ಇಂದಿರಾ ಕ್ಯಾಂಟೀನ್ ತಾತ್ಕಾಲಿಕ ಬಂದ್

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ಉಪಹಾರ, ಮಧ್ಯಾಹ್ನ, ರಾತ್ರಿ ಊಟ ಪೂರೈಕೆ ಸ್ಥಗಿತ

ಬೆಂಗಳೂರು ವ್ಯಾಪ್ತಿಯ ಹಲವು ಇಂದಿರಾ ಕ್ಯಾಂಟೀನ್‌ಗಳಲ್ಲಿ ಸಿಬ್ಬಂದಿಗೆ ವೇತನ ಪಾವತಿ ಮಾಡದ ಹಿನ್ನೆಲೆ ಯಲ್ಲಿ ತಾತ್ಕಾಲಿಕವಾಗಿ ಊಟ ಪೂರೈಕೆ ಸ್ಥಗಿತವಾಗಿದೆ. ಉಪಹಾರ, ಮಧ್ಯಾಹ್ನ, ರಾತ್ರಿ ಊಟ ಪೂರೈಕೆ ಸ್ಥಗಿತವಾಗಿದ್ದು, ಇದರಿಂದ ಊಟ ಸಿಗದೇ ಜನ ಹಸಿದ ಹೊಟ್ಟೆಯಲ್ಲಿಯೇ ವಾಪಸ್ ಆಗುತ್ತಿದ್ದ ದೃಶ್ಯ ಕ್ಯಾಂಟೀನ್ ಗಳ ಕಂಡುಬಂದಿದೆ.

ಈ ಕುರಿತು ಪ್ರತಿಕ್ರಿಯಿಸಿದ ಸಿಬ್ಬಂದಿ, ಕ್ಯಾಂಟೀನ್ ಸಿಬ್ಬಂದಿಗೆ ಆರು ತಿಂಗಳ ವೇತನ ಪಾವತಿ ಮಾಡದ ಹಿನ್ನೆಲೆಯಲ್ಲಿ ಸಿಬ್ಬಂದಿಗಳು ಕರ್ತವ್ಯಕ್ಕೆ ಗೈರಾಗಿದ್ದು, ಇದರಿಂದ ಊಟ ಕೂಡ ಪೂರೈಕೆಯಾಗುತ್ತಿಲ್ಲ.

ಪಶ್ಚಿಮ ವಲಯದ ಮಲ್ಲೇಶ್ವರಂ ನಂದಿನಿಲೇಔಟ್ ಇಂದಿರಾ ಕಿಚನ್‌ಗಳ ವ್ಯಾಪ್ತಿಯಲ್ಲಿ ಬರುವ ಇಂದಿರಾ ಕ್ಯಾಂಟೀನ್ ಗಳಿಗೆ ಊಟ ಪೂರೈಕೆಯಾಗುತ್ತಿಲ್ಲ. ನೂರಾರು ಇಂದಿರಾ ಕ್ಯಾಂಟೀನ್‌ನಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೆ ಸಂಬಳ ನೀಡಿಲ್ಲ ಎಂದರು. ಈ ಕಿಚನ್‌ಗಳನ್ನು ಚೆಫ್ ಟಾಕ್ ಕಂಪನಿ ನಿರ್ವಹಣೆ ಮಾಡುತ್ತಿದೆ. ಈ ಕಂಪನಿಗೆ ಬಿಬಿಎಂಪಿ ಹಣ ಪಾವತಿ ಮಾಡಲಿಲ್ಲ. ಪಾಲಿಕೆ, ಚೆಫ್ ಟಾಕ್ ಕಂಪನಿಗೆ ಹಣ ನೀಡದ ಕಾರಣ ಸಿಬ್ಬಂದಿಗೂ ಸಂಬಳ ಸಿಗದೇ ಕಂಗಾಲಾಗಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಯಾವ ಇಂದಿರಾ ಕ್ಯಾಂಟೀನ್‌ಗಳಿಗೆ ಬೀಗ ಮಂತ್ರಿ ಮಾಲ್ ರಸ್ತೆ, ಸುಭಾಶ್ ನಗರ, ಮೆಜೆಸ್ಟಿಕ್ ಮೆಟ್ರೋ ನಿಲ್ದಾಣ ಸಮೀಪ, ಗಾಂಧಿನಗರ, ಅರಮನೆ ನಗರ, ಸರ್ಕಲ್ ಮಾರಮ್ಮ ದೇವಸ್ಥಾನ ಯಶವಂತಪುರ ರಸ್ತೆ, ಮಲ್ಲೇಶ್ವರಂ ಇಂದಿರಾ ಕಿಚನ್‌ಗಳಿಗೆ ಬೀಗ ಬಿದ್ದಿದೆ.

ಅಲ್ಪಾವಧಿ ಕೃಷಿ ಸಾಲದ ಮಿತಿ ಹೆಚ್ಚಿಸುವಂತೆ ನಿರ್ಮಲಾ ಸೀತಾರಾಮನ್ ಅವರಿಗೆ ಸಿಎಂ ಮನವಿ

• ಉದಯವಾಹಿನಿ,ಬೆಂಗಳೂರು

ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯಸರ್ಕಾರದ ಅಲ್ಪಾವಧಿ ಕೃಷಿ ಸಾಲದ ಮಿತಿಯನ್ನು ಹೆಚ್ಚಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಮನವಿ ಮಾಡಿದ್ದಾರೆ.

ದೆಹಲಿಯಲ್ಲಿ ಕೇಂದ್ರಸಚಿವರನ್ನು ಭೇಟಿ ಮಾಡಿರುವ ಅವರು, ಕಳೆದ ಆರು ವರ್ಷದ ಕೃಷಿ ಸಾಲದ ವಹಿವಾಟನ್ನು ನಿರ್ವಹಿಸಿದ್ದಾರೆ. 2024-25ನೇ ಸಾಲಿನಲ್ಲಿ 9,162 ಕೋಟಿ ರೂ.ಗಳ ರಿಯಾಯಿತಿ ಸಾಲದ ಮಿತಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ನಬಾರ್ಡ್ 2,340 ಕೋಟಿ ರೂ.ಗಳಿಗೆ ಮಾತ್ರ ಅನುಮೋದನೆ ನೀಡಿದೆ. ಇದು ಕಳೆದ ವರ್ಷಕ್ಕಿಂತಲೂ ಶೇ.58 ರಷ್ಟು ಕಡಿಮೆಯಾಗ

ಜಿಲ್ಲೆಗೆ 10 ಕೋಟಿ ಮುಂಗಾರು ಬೆಳೆ ಪರಿಹಾರ ಬಿಡುಗಡೆ: ಖಂಡ್ರೆ

ಪ್ರಸಕ್ತ 2024-25ನೇ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ 17,460 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿ

• ಉದಯವಾಹಿನಿ ಬೀದರ

ಪ್ರಸಕ್ತ 2024-25ನೇ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ 17,460 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಸರ್ಕಾರವು 13.76 ಕೋಟಿ ರೂ.ಗಳ ಪೈಕಿ 10 ಕೋಟಿ ರೂ. ಪರಿಹಾರ ಬಿಡುಗಡೆ ಮಾಡಿದ್ದು ರೈತರ ಖಾತೆಗಳಿಗೆ ನೇರವಾಗಿ ಡಿಬಿಟಿ ಮೂಲಕ ಜಮೆಯಾಗಲಿದೆ ಎಂದು ಅರಣ್ಯ, ಜೀವಿ ಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಹೇಳಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಬಾರಿ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದ್ದು, ಸಾಕಷ್ಟು ಬೆಳೆ ಹಾನಿಯಾಗಿದೆ. ಸರ್ಕಾರವು 10 ಕೋಟಿ ರೂ. ಪರಿಹಾರ ಬಿಡುಗಡೆ ಮಾಡಿದ್ದು ಇನ್ನೂ 3.76 ಕೋಟಿ ರೂ. ಬರಲಿದೆ ಜಿಲ್ಲೆಯ 15 ಸಾವಿರ ರೈತರ ಖಾತೆಗಳಿಗೆ ಮುಂಗಾರು ಬೆಳೆ ಪರಿಹಾರ ನೇರವಾಗಿ ಜಮೆಯಾಗಲಿದೆಯೆಂದು

> ಯಾವುದೇ ರೈತರಿಗೆ ಸಾಲ ಮರುಪಾವತಿಸುವಂತೆ ಬ್ಯಾಂಕುಗಳು ಒತ್ತಡ ಹೇರಬಾರದು. ರೈತರಿಗೆ ತೊಂದರೆಯಾಗದಂತೆ ಸುತ್ತೋಲೆ ಹೊರಡಿಸಬೇಕು. ಕೃಷಿ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆಯ ರೈತ ಅಭಿವೃದ್ಧಿ ಕಾರ್ಯಕ್ರಮಗಳು ಸಕಾಲದಲ್ಲಿ ಅರ್ಹ ಫಲಾನುಭವಿಗಳಿಗೆ ತಲುಪಿಸಲು ಅಧಿಕಾರಿಗಳು ಶ್ರಮಿಸಬೇಕು -ಈಶ್ವರ ಖಂಡ್ರೆ

ಅವರು ತಿಳಿಸಿದರು.

ಕೆಡಿಪಿ ಸಭೆಯಲ್ಲಿ ಕೃಷಿ, ತೋಟಗಾರಿಕೆ, ಆರೋಗ್ಯ, ಶಿಕ್ಷಣ, ಕುಡಿಯುವ ನೀರು ಸೇರಿದಂತೆ ವಿವಿಧ ಇಲಾಖೆಗಳ ಸಮಗ್ರ ಕಾರ್ಯಕ್ರಮಗಳನ್ನು ಪರಿಶೀಲಿಸಿದರು.

ಮುಂಗಾರು ಬೆಳೆ ವಿಮೆ ಯೋಜನೆಯಡಿ 774 ಬೆಳೆ ಕಟಾವು ಪ್ರಯೋಗಗಳನ್ನು ಹಮ್ಮಿಕೊಳ್ಳಲಾಗಿದೆ. ಹಿಂಗಾರು ಹಂಗಾಮಿನಲ್ಲಿ ಕಡಲೆ, ಜೋಳ, ಕೂಸುಬಿ ಶೇ.87% ಬಿತ್ತನೆಯಾಗಿದ್ದು ಈ ವಾರದಲ್ಲಿ ಶೇ.100% ಬಿತ್ತನೆಯಾಗಲಿದೆ. ಸದ್ಯ ಜಿಲ್ಲೆಯಲ್ಲಿ

ಉದಯವಾಹಿನಿ ಚಿತ್ರ

ಬೀಜ, ಗೊಬ್ಬರಗಳ ಯಾವುದೇ ಸಮಸ್ಯೆ ಇಲ್ಲವೆಂದು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು.

ರೈತರಿಗೆ ಅನುಕೂಲವಾಗುವಂತೆ ಬೆಳಿಗ್ಗೆ ಅವಧಿಯಲ್ಲಿ 7 ತಾಸು ವಿದ್ಯುತ್ ಸರಬರಾಜು ಮಾಡುವಂತೆ ಜೇಸ್ಕಾಂ ಕಾರ್ಯಪಾಲಕ ಅಭಿಯಂತರರಿಗೆ ಸಚಿವರು ಸೂಚಿಸಿದರು. ರೈತರ ಆತ್ಮಹತ್ಯೆ ಪ್ರಕರಣಗಳನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಈಗಾಗಲೇ ಚೆಕ್ ವಿತರಿಸಿದ್ದು ಖಾತೆಗೆ ಹಣ ಜಮೆ ಆಗದೇ ಇರುವುದಕ್ಕೆ ಅಸಾಮಾಧಾನ ವ್ಯಕ್ತಪಡಿಸಿದ ಸಚಿವರು ಕಂದಾಯ ಹಾಗೂ ಕೃಷಿ ಅಧಿಕಾರಿಗಳು ತಕ್ಷಣವೇ ಸಮಸ್ಯೆ ಬಗೆಹರಿಸುವಂತೆ ಸೂಚಿಸಿದರು.

ಕಬ್ಬು ದರ ನಿಗದಿ ಕುರಿತು ಸಭೆ: ಈ ತಿಂಗಳಾಗಿ

ವರದಿ ನೀಡುವಂತೆ ಸೂಚನೆ

ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಸ್ಥರಿಗೆ 2 ಸಾವಿರ ಮಾಸಿಕ ವೇತನ ಸರಿಯಾಗಿ ಜಮೆ ಆಗುತ್ತಿರುವ ಬಗ್ಗೆ ಕಂದಾಯ ಅಧಿಕಾರಿಗಳು ಸೂಕ್ತ ಗಮನ ಇಡಬೇಕು. ಅವರ ಮಕ್ಕಳಿಗೆ ಉಚಿತ ಶಿಕ್ಷಣ ಹಾಗೂ ಶೈಕ್ಷಣಿಕ ಫೀಸ್ ಇಲಾಖೆಯು ಕಟ್ಟಬೇಕು. ಸಾಮಾಜಿಕ ಬದ್ಧತೆ ಹಿನ್ನೆಲೆಯಲ್ಲಿ ಉಪ ವಿಭಾಗಾಧಿಕಾರಿಗಳು ಸೂಕ್ತ ವರದಿ ನೀಡುವಂತೆ ಸಚಿವರು ಸೂಚಿಸಿದರು.

ಡಿಬಿಟಿ ಮೂಲಕ ಜಮೆ

ಕಬ್ಬು ದರ ನಿಗದಿಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಶಾಸಕರ ಹಾಗೂ ಕಾರ್ಖಾನೆಗಳ ಅಧಿಕಾರಿಗಳು ಸಭೆಯನ್ನು ಜರುಗಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಸಚಿವರು ತಿಳಿಸಿದರು.

ಖಾಸಗಿಯವರಿಗೆ ಲೀಸ್ ಔಟ್ ಕೊಡುವುದೇ ಒಂದೇ ಪರಿಹಾರ. ಈ ನಿಟ್ಟಿನಲ್ಲಿ ಪ್ರಸ್ತಾವನೆವೊಂದನ್ನು ಸಿದ್ಧಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ಸಚಿವರು ತಿಳಿಸಿದರು. ಕಾರ್ಖಾನೆ ಸಾಲದ ಅಕ್ರಮ ಹಾಗೂ ಸೋರಿಕೆಗೆ ಅಗತ್ಯ ತನಿಖೆಯನ್ನು ಕೈಗೊಳ್ಳಲಾಗುವುದೆಂದರು. ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ್ ಖಾನ್ ಅವರು ಮಾತನಾಡಿ, ಈಗಾಗಲೇ ಕಾರ್ಖಾನೆಗೆ ಸಾಕಷ್ಟು ಆರ್ಥಿಕ ಹಾನಿಯಾಗಿದೆ. ಬ್ಯಾಂಕ್ ಅಧಿಕಾರಿಗಳು ಸಾಲ ನೀಡುವಲ್ಲಿ ಅಕ್ರಮ ಎಸಗಿದ್ದಾರೆ. ಈ ಬಗ್ಗೆ ತನಿಖೆಯಾಗಬೇಕೆಂದರು.

ತೋಟಗಾರಿಕೆ ಬೆಳೆ ಆಧಾರಿತ ಹಣ್ಣುಗಳ ಶೀತಲ ಘಟಕ ನಿರ್ಮಾನಕ್ಕೆ ಖಾಸಗಿ ಕಂಪನಿಗಳು ಸಿದ್ಧರಿದ್ದು 4 ಎಕರೆ ಭೂಮಿ ಗುರುತಿಸಲು ಹಾಗೂ ಪ್ರಸ್ತಾವನೆ ಸಿದ್ಧಪಡಿಸುವಂತೆ ಸಿಚವರಾದ ಈಶ್ವರ ಖಂಡ್ರೆ ಜಿಲ್ಲಾಧಿಕಾರಿಗಳಿಗೆ ತಿಳಿಸಿದರು. ಜಿಲ್ಲೆಯಲ್ಲಿ ದಾಳಿಂಬೆ ಹಾಗೂ ಮಾವು ಹಣ್ಣುಗಳ ರಫ್ತಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ವೃದ್ಧೆ ಅತ್ಯಾಚಾರಗೈದು ಮನೆಯಲ್ಲಿದ ಬೆಲೆಬಾಳುವ ವಸ್ತುಗಳು ದೋಚಿ ಪರಾರಿ, ಆರೋಪಿಗೆ ಕಠಿಣ ಕ್ರಮಕ್ಕೆ ಆಗ್ರಹ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಪೋಲಿಸ್ ಠಾಣೆಯ ವ್ಯಾಪ್ತಿಯಲ್ಲಿ ಒಬ್ಬ ವೃದ್ಧೆ ಮೇಲೆ ಅತ್ಯಾಚಾರಗೈದು ಮನೆಯಲ್ಲಿನ ಬೆಲೆಬಾಳುವ ವಸ್ತುಗಳನ್ನು ದೋಚಿಕೊಂಡು ಪರಾರಿಯಾದ ಕಾಮುಕ ಆರೋಪಿಗೆ ತಕ್ಷಣವೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ತಾಲ್ಲೂಕಾ ಸರ್ವಧರ್ಮ ಒಕ್ಕೂಟ ಸಮಿತಿಯ ಅಧ್ಯಕ್ಷ ಅಬ್ದುಲ್ ಬಾಷೀದ್ ಆಗ್ರಹಿಸಿದರು.

ಪಟ್ಟಣದ ತಹಶೀಲ್ ಕಛೇರಿ ಮುಂಭಾಗದಲ್ಲಿ ಸರ್ವಧರ್ಮ ಒಕ್ಕೂಟ ಸಮಿತಿ ವತಿಯಿಂದ ತಾಲ್ಲೂಕಿನ ಪೋಲಿಸ್ ಠಾಣೆಯ ವ್ಯಾಪ್ತಿಯಲ್ಲಿ ನಡೆದ 70ವರ್ಷದ ವೃದ್ಧೆಯ ಮೇಲಿನ ಅತ್ಯಾಚಾರ ಮನೆಯಲ್ಲಿನ ಬಂಗಾರ, ಬೆಳ್ಳಿ ಬೆಲೆಬಾಳುವ ವಸ್ತುಗಳು ದೋಚಿ ಪರಾರಿಯಾದ ಆರೋಪಿಗೆ ತಕ್ಷಣ ಪತ್ತೆಹಚ್ಚಿ ಬಂಧಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು, ಇಂತಹ ಕೃತ್ಯಗಳು ಎಸಗುವ ಪಾಪಿಗಳಿಗೆ ಮರಣದಂಡನೆ ಶಿಕ್ಷೆಗೆ ಗುರಿಪಡಿಸಬೇಕು ಮತ್ತೊಮ್ಮೆ ಇಂತಹ ಕೃತ್ಯಕ್ಕೆ ಕೈಹಾಕುವ ಜನರಿಗೆ ಹೆದರಿಕೆಹಾಕಬೇಕು.

ಉದಯವಾಹಿನಿ ಚಿತ್ರ

ಇಂತಹ ಪ್ರಕರಣಗಳು ಮುಂದೆ ನಡೆಯದಂತೆ ತಾಲ್ಲೂಕಾಡಳಿತ ಪೋಲಿಸ್ ಇಲಾಖೆ ಮುಂಜಾಗ್ರತಾ ಕ್ರಮಕೈಗೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೆಎಂಬಾರಿ, ಶಬ್ಬೀರ ಅಹೇಮದ್, ಶರಣುಪಾಟೀಲ ಮೋತಕಪಳ್ಳಿ, ಗಣಪತರಾವ, ಹಮಮಂತ ಪೂಜಾರಿ, ಜಗನ್ನಾಥ ಗುತ್ತೇದಾರ, ರಾಜು ಪವ್ಹಾರ, ನಾಗೇಶ ಗುಣಾಜೀ, ಹಾದಿಸಾಬ, ಮತೀನ್ ಸೌಧಾಗಾರ, ಶೇಖ್ ಫರೀದ್, ಖಲೀಲ್ ಪಟೇಲ, ಮಜಲೇಸಾಬ, ನೀಲಕಂಠ ಸೀಳಿನ, ಇಸ್ಮಾಯಿಲ್ ಚಾವುಸ್, ಶೇಖ್ ಲೀಯಾ ಖಾತ್, ಸುಭಾಷ್ಚಂದ್ರ ಪಾಟೀಲ, ಶ್ರೀನಿವಾಸ್, ಭಾಗ್ಯವಂತ, ಶಕೀಲ್, ಶಹೇಬಾಜ್ ಖಾನ್, ಮಸ್ತಾನ ಪಟೇಲ, ನಂದಿಕುಮಾರ, ಅನೇಕರಿದ್ದರು.

ಗ್ರಂಥಾಲಯದ ಸದ್ಬಳಕೆಯಾಗಬೇಕು: ಮುಲ್ಲಂಗಿ ನಂದೀಶ್

• ಉದಯವಾಹಿನಿ, ಬಳ್ಳಾರಿ

ಗ್ರಂಥಾಲಯದ ಪುಸ್ತಕಗಳು ಮತ್ತು ಅವುಗಳ ಮಾಹಿತಿಯು ಬಹಳ ಉಪಯುಕ್ತವಾಗಿದ್ದು, ಮಕ್ಕಳು, ವಿದ್ಯಾರ್ಥಿಗಳು ಹಾಗೂ ಎಲ್ಲಾ ಸಾರ್ವಜನಿಕರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷರು ಆದ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಹೇಳಿದರು.

ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ-2024ರ ಅಂಗವಾಗಿ ನಗರ ಕೇಂದ್ರ ಗ್ರಂಥಾಲಯ ಕಚೇರಿಯಲ್ಲಿ ಏರ್ಪಡಿಸಿದ್ದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ-2024ರ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಡಾ.ಎಸ್.ಆರ್. ರಂಗನಾಥನ್ ಹಾಗೂ ಸರಸ್ವತಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಗ್ರಂಥಾಲಯಕ್ಕೆ ಬೇಕಾದ ಅಗತ್ಯ ಸೌಲಭ್ಯಗಳನ್ನು ಮಹಾನಗರ ಪಾಲಿಕೆಯಿಂದ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಉದಯವಾಹಿನಿ ಚಿತ್ರ

> ಜಿಲ್ಲಾ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕ ಬಿ.ಕೆ.ಲಕ್ಷ್ಮಿ ಕಿರಣ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ನಗರ ಕೇಂದ್ರ ಗ್ರಂಥಾಲಯದ ಸದುಪಯೋಗ ಪಡೆದುಕೊಂಡು ವಿದ್ಯಾರ್ಥಿಗಳು ತಮ್ಮ ಭವ್ಯ ಭವಿಷ್ಯವನ್ನು ರೂಪಿಸಿಕೊಳ್ಳಬೇಕು -ಮುಲ್ಲಂಗಿ ನಂದೀಶ್

ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ನರಸಣ್ಣ ಮಾತನಾಡಿ, ಗ್ರಂಥಾಲಯದ ಸದುಪಯೋಗ ಪಡೆಯಲು ಎಲ್ಲಾರು ಗ್ರಂಥಾಲಯದ ಸದಸ್ಯತ್ವ ನೋಂದಣಿ ಮಾಡಿಕೊಳ್ಳಬೇಕು ಎಂದು ಹೇಳಿದರು.

ನ 'ಗರ ಗ್ರಂಥಾಲಯ ಪ್ರಾಧಿಕಾರದ ಸದಸ್ಯರು ಹಾಗೂ ನಿವೃತ್ತ ಉಪನ್ಯಾಸಕ ಎನ್. ಬಸವರಾಜ ಅವರು ''ಆಧುನಿಕ ಯುಗದಲ್ಲಿ ಓದುವ ಸಂಸ್ಕೃತಿ'' ಕುರಿತು ವಿಶೇಷ ಉಪನ್ಯಾಸ ನೀಡಿ, ಗ್ರಂಥಾಲಯದ ಕುರಿತಾಗಿ ಉತ್ತಮ ಮಾಹಿತಿ ನೀಡಿ, ಓದಿನ ಪ್ರಾಮುಖ್ಯತೆ ಹಾಗೂ ಓದುವ ಸಂಸ್ಕೃತಿ ಬಗ್ಗೆ ತಿಳಿಸಿ, ಗ್ರಂಥಾಲಯದ ಸದುಪಯೋಗ ಪಡೆದುಕೊಂಡರು.

ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ-2024ರ ನಿಮಿತ್ತ ನಗರದ ವಿವಿಧ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ''ಆಧುನಿಕ ಯುಗದಲ್ಲಿ ಗ್ರಂಥಾಲಯಗಳ ಮಹತ್ವ'' ಎಂಬ ವಿಷಯದ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಿ, ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿಯನ್ನು ವಿತರಿಸಲಾಯಿತು ಮತ್ತು ಗ್ರಂಥಾಲಯದ ಉತ್ತಮ ಓದುಗರಲ್ಲಿ ಇಬ್ಬರಿಗೆ ಉತ್ತಮ ಓದುಗರ ಪ್ರಶಸ್ತಿಯನ್ನು ಹಾಗೂ ಗ್ರಂಥಾಲಯದ ಸದುಪಯೋಗ ಪಡೆದು ಸಾಧನೆ ಮಾಡಿದ ಇಬ್ಬರಿಗೆ ಸಾಧನೆಗೈದ ಉತ್ತಮ ಓದುಗ ಪ್ರಶಸ್ತಿಗಳನ್ನು ವಿತರಣೆ ಮಾಡಲಾಯಿತು.

ಉಪಚುನಾವಣೆಯ ಸೋಲು-ಗೆಲುವು ದೇವರ ಫಲಾಫಲ: ಡಿಕೆಶಿ

• ಉದಯವಾಹಿನಿ, ಕೊಲ್ಲೂರು

ಕರ್ಮಣ್ಯೇವಾಧಿಕಾರಸ್ತೇ ಮಾ ಫಲೇಶು ಕದಾಚನ. ಮೂರು ಕ್ಷೇತ್ರಗಳ ಉಪಚುನಾವಣೆಯಲ್ಲಿ ನಾವು ನಮ್ಮ ಪ್ರಯತ್ನವನ್ನು ಮಾಡಿದ್ದೇವೆ. ಆದರೆ, ಫಲಾಫಲ ಭಗವಂತನದ್ದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ಉಡುಪಿಯ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ನಂತರ ಶಿವಕುಮಾರ್ ಮಾತನಾಡಿದರು.

ರಾಜ್ಯದ ಉಪಚುನಾವಣೆ ಫಲಿತಾಂಶದ ವಿಚಾರವಾಗಿ, ''ಎಲ್ಲಾ ಕಡೆಯೂ ದೇವರು ನಮಗೆ ಒಳ್ಳೆಯದು ಮಾಡುತ್ತಾನೆ ಎನ್ನುವ ಭರವಸೆಯನ್ನು ಇಟ್ಟಿದ್ದೇವೆ'' ಎಂದು ಹೇಳಿದರು.

ರಾಜ್ಯದಲ್ಲಿ ಮೂರು ಪಕ್ಷಗಳು ತಲಾ ಒಂದೊಂದು ಸ್ಥಾನ ಗೆಲ್ಲುತ್ತವೇ ಎನ್ನುವ ಸಮೀಕ್ಷೆಗಳ ಬಗ್ಗೆ ಕೇಳಿದಾಗ, ''ಕರ್ನಾಟಕ ವಿಧಾನಸಭೆ ಹಾಗೂ ಹರಿಯಾಣದ ಚುನಾವಣೆ ಬಗ್ಗೆ ಸಮೀಕ್ಷೆಗಳು ಏನು ಹೇಳಿದ್ದವು, ನನಗೆ

ಉದಯವಾಹಿನಿ ಚಿತ್ರ

ಯಾವುದೇ ಸಮೀಕ್ಷೆಗಳ ಮೇಲೆ ನಂಬಿಕೆಯಿಲ್ಲ. ಸಮೀಕ್ಷೆಗಳನ್ನು ಕಟ್ಟಿಕೊಂಡು ರಾಜಕೀಯ ಮಾಡಲು ಆಗುವುದಿಲ್ಲ. ಯಾರು ಜನರ ಹೃದಯ ಹಾಗೂ ವಿಶ್ವಾಸ ಪಡೆದಿರುತ್ತಾರೋ ಅವರಿಗೆ ಜನ ಗೌಪ್ಯ ಮತದಾನದ ಮೂಲಕ ಬೆಂಬಲ ನೀಡುತ್ತಾರೆ'' ಎಂದರು. ಬಿಪಿಎಲ್ ಕಾರ್ಡ್ ಗೊಂದಲದ ಬಗ್ಗೆ ಮಾತನಾಡಿದ ಅವರು ''ಯಾವುದೇ ಕಾರಣಕ್ಕೂ ಬಿಪಿಎಲ್ ಅರ್ಹರಿಗೆ ಅನ್ಯಾಯವಾಗಲು ಬಿಡುವುದಿಲ್ಲ. ಅರ್ಹರ ಕಾರ್ಡ್ ಗಳು ರದ್ದಾಗಿದ್ದರೆ ಈ ಬಗ್ಗೆ ಪಟ್ಟಿ ಕೊಡಬೇಕು ಎಂದು ಸಂಬಂಧಪಟ್ಟ ಸಚಿವರಿಗೆ ಸೂಚನೆ ನೀಡಲಾಗಿದೆ. ವಂಚಿತರಿಗೆ ಮರು

> ಕೊಲ್ಲೂರು ದೇವಸ್ಥಾನ ಆಡಳಿತ ಮಂಡಳಿಯಲ್ಲಿ ಮೂಲ ಕಾಂಗ್ರೇಸ್ಸಿಗರಿಗೆ ಮಣೆ ಹಾಕದೆ ವಲಸಿಗರಿಗೆ ಮಣೆ ಹಾಕಲಾಗಿದೆ ಎನ್ನುವ ಆರೋಪದ ಬಗ್ಗೆ ಕೇಳಿದಾಗ ''ಚುನಾವಣೆ ವೇಳೆ ಇಲ್ಲಿಗೆ ಬಂದಾಗ ಈ ಬಗ್ಗೆ ಕೆಲವರಿಗೆ ಮಾತು ಕೊಟ್ಟಿದ್ದೆವು. ಸಲ್ಪ ದಿನ ಅವರು ಆಡಳಿತ ಮಾಡಲಿ ಬಿಡಿ -ಡಿಕೆಶಿ

ಅರ್ಜಿ ಹಾಕಲು ಅವಕಾಶ ಕಲ್ಪಿಸಿ ಕೊಡಬೇಕು ಎಂದು ಸೂಚನೆ ನೀಡಿದ್ದೇವೆ. ರಾಜ್ಯ, ತಾಲ್ಲೂಕು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಗಳು ಇದರ ಬಗ್ಗೆ ಪರಿಶೀಲನೆ ಮಾಡಲಿವೆ. ಒಬ್ಬನೇ ಒಬ್ಬ ಬಡವನಿಗೂ ತೊಂದರೆ ಆಗಲು ಬಿಡುವುದಿಲ್ಲ ಎಂದು ಸರ್ಕಾರದ ಪ್ರತಿನಿಧಿಯಾಗಿ, ಪಕ್ಷದ ಅಧ್ಯಕ್ಷನಾಗಿ ನಾನು ಭರವಸೆ ನೀಡುತ್ತೇನೆ. ಯಾರೂ ಭಯ ಪಡುವ ಅಗತ್ಯವಿಲ್ಲ ಎಂದರು.

ಬ್ಯಾಲ್ಯಾಳ ಗ್ರಾಮದೇವತೆ ದ್ಯಾಮವ್ವ ತಾಯಿಯ ಅದ್ಧೂರಿ ಜಾತ್ರೆ

• ಉದಯವಾಹಿನಿ, ವಿಜಯಪುರ

ಜಿಲ್ಲೆಯ ನಿಡಗುಂದಿ ತಾಲ್ಲೂಕಿನ ಬ್ಯಾಲ್ಯಾಳ ಗ್ರಾಮ ದೇವತೆ ದ್ಯಾಮವ್ವ ದೇವಿಯ ಜಾತ್ರೆ ಅದ್ಧೂರಿಯಾಗಿ ನಡೆಯಿತು.

ಗ್ರಾಮದ ಗಣ್ಯರಾದ ಬಸನಗೌಡ ಪಾಟೀಲ ಅವರ ಮನೆಯಿಂದ ಮುತೈದೆಯರು ತುಂಬಿದ 5 ಮಜ್ಜಲ ಬಿಂದಿಗೆ ಮತ್ತು ಕಳಸದೊಂದಿಗೆ, ಮಹೇಶ ದೇಶ ಪಾಂಡೆ ಅವರ ಮನೆಯಿಂದ ಒಂದು ಕುದರಿ ಮತ್ತು ಕಳಸ ಹಾಗೂ ಒಂದು ಕಂಟಲಿ ಎತ್ತು ಡೊಳ್ಳಿನ ವಾದ್ಯಗಳೊಂದಿಗೆ ಗ್ರಾಮ ದೇವತೆಯ ದೇವಸ್ಥಾನಕ್ಕೆ ಬಂದು ನಂತರ ಆಲಕೊಪ್ಪರ ಗುಡ್ಡದ ದ್ಯಾಮವ್ವನ ದೇವಸ್ಥಾನಕ್ಕೆ ಹೋಗಿ ಗಂಗಸ್ಥಳ ಮಾಡಿಕೊಂಡು, ಬ್ಯಾಲ್ಯಾಳ ಗ್ರಾಮದ ಮರಡಿ ದೇವಸ್ಥಾನಕ್ಕೆ ಡೊಳ್ಳಿನ ವಾಲಗದೊಂದಿಗೆ ಪರತೇಶ್ವರ ದೇವಸ್ಥಾನಕ್ಕೆ ಬಂದು ಪೂಜೆ ಮುಗಿಸಿ ಮೂಲ ಗ್ರಾಮ ದೇವತೆ ದೇವಸ್ಥಾನಕ್ಕೆ ಆಗಮಿಸಿ ಬಸನಗೌಡ ಪಾಟೀಲ ಅವರ ಮನೆಗೆ ತಲುಪಲಿದವು.

ಈ ಜಾತ್ರೆಯಲ್ಲಿ ಎತ್ತಿನ ಗಾಡಿ ಸ್ಪರ್ಧೆ, ತೆರಬಂಡಿ ಸ್ಪರ್ಧೆ, ಡೊಳ್ಳಿನ ಹಾಡಿಕೆ, ಗೀಗೀ ಪದ ಸೇರಿದಂತೆ ಹಲವಾರು ಸಾಂಪ್ರದಾಯಿಕ ಕಾರ್ಯಕ್ರಮಗಳನ್ನು ಬ್ಯಾಲ್ಯಾಳ ಹಾಗೂ

ಉದಯವಾಹಿನಿ ಚಿತ್ರ

ಜಾತ್ರೆಯಲ್ಲಿ ಎತ್ತಿನ ಗಾಡಿ ಸ್ಪರ್ಧೆ

ಸುತ್ತಮುತ್ತಲಿನ 10-15 ಹಳ್ಳಿಗಳ ಜನರು ಬಹಳ ವಿಜೃಂಭಣೆಯಿಂದ ಜಾತ್ರೆಯಲ್ಲಿ ಪಾಲ್ಗೊಂಡು ಒಂದು ವಾರದವರೆಗೆ ಕುಟುಂಬ ಸ್ಥರೊಡನೆ ಹಾಗೂ ಸ್ನೇಹಿತರೊಡನೆ ಸಂಭ್ರಮ ಪಟ್ಟರು. ನಂತರ ವಿಜೇತರಿಗೆ ಬಹುಮಾನ ವಿತರಣೆ ಮಾಡಿ ಗ್ರಾಮೀಣ ಕ್ರೀಡೆಗಳನ್ನು ಉಳಿಸಿ ಬೆಳೆಸುವಂತಹ ಮಹತ್ತರ ಕಾರ್ಯ ಕೂಡಾ ನಡೆಯಿತು.

ಈ ಜಾತ್ರೆಯಲ್ಲಿ ವಿಶೇಷವಾಗಿ ಅನ್ನದಾಸೋಹದಲ್ಲಿ ಹೋಳಿಗೆ, ಸೋರ್ಮಾ, ಬುಂದೆ, ಅನ್ನ ಸಾರು, ಸಜ್ಜಿ ಹಾಗೂ ಜೋಳದ ರೊಟ್ಟಿ ನಿರಂತರ ಜಾತ್ರೆ ಮುಗೆಯುವ ವರೆಗೂ ಗ್ರಾಮದ ಎಲ್ಲಾ ಹಿರಿಯ ಹಾಗೂ ಕಿರಿಯರು ಮಾಡುವ ಮೂಲಕ ಜಾತ್ರೆಗೆ ಕಳೆ ಹೆಚ್ಚಿಸಿದರು.

ಕನ್ನಡ ನಾಡು ನುಡಿ ಉಳಿಸುವ ಮಹತ್ವದ ಕಾರ್ಯ ಕಸಾಪ ಮಾಡುತ್ತಿದೆ: ಚಂದ್ರಶೇಖರ ಹಿರೇಮಠ

• ಉದಯವಾಹಿನಿ ಸಿಂಧನೂರು

ಕನ್ನಡ ನಾಡು ನುಡಿ ಉಳಿಸಿ ಬೆಳಸುವಂತಹ ಕಾರ್ಯ ಕನ್ನಡ ಸಾಹಿತ್ಯ ಪರಿಷತ್ತು ಮಾಡುತ್ತಿದೆ. ತ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	10:30 ರಿಂದ 12:00
ಗುಳಿಕ ಕಾಲ	ಬೆಳಿಗ್ಗೆ	07:30 ರಿಂದ 09:00
ಯಮಗಂಡ ಕಾಲ	ಮಧ್ಯಾಹ್ನ	03:00 ರಿಂದ 04:30

ಮೇಷ ಧ್ಯಾನ ಮತ್ತು ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯ ವಿರಬಹುದು.

ವೃಷಭ ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು.

ಮಿಥುನ ಪ್ರತಿಯೊಬ್ಬರೂ ಇಂದು ನಿಮ್ಮ ಸ್ನೇಹಿತರಾಗಯಸುತ್ತಾರೆ ಮತ್ತು ನಿಮಗೆ ಇದರಿಂದ ಸಂತೋಷವೆನಿಸುತ್ತದೆ. ಹೊಸ ಪ್ರಣಯ ನಿಮ್ಮ ಚೈತನ್ಯವನ್ನು ಪ್ರೇರೇಪಿಸಬಹುದು ಹಾಗೂ ನಿಮ್ಮನ್ನು ಹರ್ಷಚಿತ್ತರಾಗಿರಿಸಬಹುದು.

ಕರ್ಕಾಟಕ ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ.

ಸಿಂಹ ಇಂದು ಕೈಗೊಂಡ ಧರ್ಮಾರ್ಥ ಕಾರ್ಯವು ಮಾನಸಿಕ ಶಾಂತಿ ತರುತ್ತದೆ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ.

ಕನ್ಯಾ ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ಕುಟುಂಬದ ಸದಸ್ಯರು ನಿಮ್ಮ ಅಭಿಪ್ರಾಯಗಳನ್ನು ಬೆಂಬಲಿಸುತ್ತಾರೆ.

ತುಲಾ ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ನೀವು ಉಳಿಸಿರುವ ಹಣ ಇಂದು ನಿಮ್ಮ ಕೆಲಸಕ್ಕೆ ಬರಬಹುದು. ಇದರೊಂದಿಗೆ ಇದರ ಹೋಗುವ ದುಃಖವು ನಿಮಗೆ ಆಗುತ್ತದೆ.

ವೃಶ್ಚಿಕ ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು.

ಧನಸ್ಸು ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ.

ಮಕರ ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ.

ಕುಂಭ ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ.

ಮೀನ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು.

ಜಿಲ್ಲಾ ಕೇಂದ್ರದಲ್ಲಿ ಎಲ್ಲಾ ಎಕ್ಸ್‌ಪ್ರೆಸ್ ರೈಲುಗಳು ನಿಲ್ಲುವವರೆಗೂ ಹೋರಾಟ

● ನಿಲುಗಡೆಗಾಗಿ ವಿನೂತನ ಅಭಿಯಾನಕ್ಕೆ ಕರಪತ್ರ ಬಿಡಗಡೆ ಮಾಡುವ ಮೂಲಕ ಚಾಲನೆ ನೀಡಿದ ಉಮೇಶ ಮುದ್ನಾಳ

• ಉದಯವಾಹಿನಿ ಯಾದಗಿರಿ

ಜಿಲ್ಲಾ ಕೇಂದ್ರವಾಗಿ 14ವರ್ಷಗಳು ಗತಿಸಿದರೂ ಸುಮಾರು 13 ಎಕ್ಸ್‌ಪ್ರೆಸ್ ರೈಲುಗಳು ನಿಲ್ಲದಿರುವುದು ಜಿಲ್ಲೆಯ ದುರದುಷ್ಟಕರ ಸಂಗತಿ ಎಂದು ಕರ್ನಾಟಕ ಪ್ರದೇಶ ಕೋಲಿ ಸಮಾಜ ರಾಜ್ಯ ಸಂಘಟನಾಕಾರ್ಯದರ್ಶಿ ಸಾಮಾಜಿಕ ಹೋರಾಟಗಾರ ಉಮೇಶ ಕೆ ಮುದ್ನಾಳ ರವರು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲೆಯ ದುರದುಷ್ಟಕರ ಸಂಗತಿ

ವಡಗೇರಿ ತಾಲ್ಲೂಕಿನ ಜೋಳದಡಗಿ ಗ್ರಾಮದಲ್ಲಿರುವ ಅಕ್ಕದೇವಿ ಕಟ್ಟಿಯಿಂದ ವಿನೂತನ ಅಭಿಯಾನಕ್ಕೆ (ಕರಪತ್ರ ಮೂಲಕ) ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿ ಮಾತನಾಡಿದ ಅವರು, ಟ್ರೇನ್ ನಂ. 57631-57632 ಸೊಲ್ಲಾಪೂರ ಗುಂತಕಲ್ (ಇಂಟರ್‌ಸಿಟಿ), ಟ್ರೇನ್ ನಂ. 22691-22692 ರಾಜಧಾನಿ ಎಕ್ಸ್‌ಪ್ರೆಸ್, ಟ್ರೇನ್ ನಂ. 22689-22690 ಅಹಮದಾಬಾದ್ ಸುಪರ್ ಫಾಸ್ಟ್ ಎಕ್ಸ್‌ಪ್ರೆಸ್, ಟ್ರೇನ್ ನಂ. 16613-16614 ರಾಜಕೋಟ್ ಎಕ್ಸ್‌ಪ್ರೆಸ್, ಟ್ರೇನ್ ನಂ. 22231-22232 ವಂದೇ ಭಾರತ, ಟ್ರೇನ್ ನಂ. 22601-22602 ಸಾಯಿನಗರ ಶಿರಡಿ ಸೂಪರ್ ಫಾಸ್ಟ್, ಟ್ರೇನ್ ನಂ. 12591-12592 ಗೋರಕ್‌ಪುರ ಎಕ್ಸ್‌ಪ್ರೆಸ್, ಟ್ರೇನ್ ನಂ. 19567-19568 ವಿವೇಕ್ ಎಕ್ಸ್‌ಪ್ರೆಸ್ ಸೇರಿ ಇನ್ನುಳಿದ ಎಲ್ಲಾ ರೈಲು ಗಾಡಿಗಳನ್ನು ಕೂಡಲೇ ನಿಲುಗಡೆಗೆ ಕ್ರಮ ವಹಿಸಬೇಕು ಮತ್ತು ಕೊರೋನಾ ಸಮಯದಲ್ಲಿ ಬಂದ್ ಆಗಿರುವ ಇಂಟರಸಿಟಿ ರೈಲು ಮತ್ತೆ ಪುನಾರಾಂಭಿಸಬೇಕು.

ಜೊತೆಗೆ ರೈಲು ನಿಲ್ದಾಣದಲ್ಲಿ ವಿಶೇಷ ಮೂಲಭೂತ ಸೌಕರ್ಯಗಳನ್ನು ಲಿಫ್ಟ್ ವ್ಯವಸ್ಥೆ, ಅಂಗವಿಕರಲು, ವಯೋವೃದ್ಧರಿಗೆ ಅನುಕೂಲವಾಗಲು ವಿಶೇಷ ವಾಹನ ವ್ಯವಸ್ಥೆ, ರೈಲು ನಿಲ್ದಾಣದ ಪ್ಲಾಟ್ ಫಾರಂಗಳಲ್ಲಿ ಸಂಪೂರ್ಣ ಮೇಲಚ್ಚಾವಣಿಯ ವ್ಯವಸ್ಥೆ ಆಸನದ ವ್ಯವಸ್ಥೆಗಳು ಅಭಿವೃದ್ಧಿಪಡಿಸಬೇಕು ಆಗ್ರಹಿಸಿದರು.

ಗುಂತ್ಕಲ್ ಹೊರತುಪಡಿಸಿದರೆ ಅತಿಹೆಚ್ಚು ಆದಾಯ ನೀಡುವ ರೈಲು ನಿಲ್ದಾಣ ಇದಾಗಿದ್ದು, ಅಲ್ಲದೇ ಈ ಭಾಗದಿಂದ ಗುಳೆ ಹೋಗುವ ಜನರ ಸಂಖ್ಯೆಯೇ ಹೆಚ್ಚು ರೈಲಿನಲ್ಲಿ ಪ್ರಯಾಣ ಮಾಡುತ್ತಿದ್ದು ಅವರೆಲ್ಲರಿಗೂ ಅನುಕೂಲ ಮಾಡಿ ಕೊಡಲು ಎಲ್ಲಾ ವ್ಯವಸ್ಥೆ ಮಾಡಬೇಕೆಂದು ಅವರು ಒತ್ತಾಯಿಸಿದರು. ವಂದೇ ಭಾರತ ನಿಲುಗಡೆಗೆ ಹಸಿರು ನಿಶಾನೆ ತೋರಿಸಿರುವುದು ಸ್ವಾಗತ.

ಆದರೆ ಈ ವಂದೇ ಭಾರತ ಟ್ರೇನ್‌ನಿಂದ ನಮ್ಮ ಕಲ್ಯಾಣ ಕರ್ನಾಟಕ ಭಾಗದ ಜನಸಾಮಾನ್ಯರಿಗೆ ಕೂಲಿಕಾರ್ಮಿಕರಿಗ ಬಡ ರೈತರಿಗೆ ಪ್ರಯಾಣಕ್ಕೆ ಸಾಧ್ಯವಾಗುವುದಿಲ್ಲ.

ಇದು ಶ್ರೀಮಂತರ ಗಾಡಿ ಇದು ಬಡವರ ಗಾಡಿಯಲ್ಲ ಹಾಗಾಗಿ ಇನ್ನುಳಿದ ಎಕ್ಸ್‌ಪ್ರೆಸ್ ಎಲ್ಲಾ ರೈಲುಗಳು ನಿಲುಗಡೆಗೆ ತುರ್ತಾಗಿ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜು. ಶರಣು.ಅಯ್ಯಣ್ಣ. ಆಂಜನೇಯ ಪೂಜಾರಿ. ಹಣಮಂತ. ಜಂಬಣ್ಣ. ಸಿದ್ಧಪ್ಪ.ಮರೆಪ್ಪ. ಯಂಕಪ್ಪ. ಮಲ್ಲಪ್ಪ.ಅಯ್ಯಪ್ಪ ಆಂಜನೇಯ. ಅಯ್ಯಪ್ಪ. ರವಿ.ಸಾಬಣ್ಣ. ಶಿವು . ಮಲ್ಲಿಕಾರ್ಜುನ. ಮಹದೇವಪ್ಪ. ಶರಣಪ್ಪ.ರಾಮು. ಕೃಷ್ಣಮಹದೇವಮ್ಮ. ಪರಮ್ಮ. ರೆಡ್ಡಿ. ತಿಮ್ಮಪ್ಪ . ದೇವಪ್ಪ. ಬಸವರಾಜ.ಮೊನಮ್ಮ ಮಹಾದೇವಿ. ಮಲ್ಲಮ್ಮ. ಚಂದ್ರಮ್ಮ ಬಸಲಿಂಗಮ್ಮ.ಸಾಬಮ್ಮ. ರೇಣುಕಾ.ಶಾಹಿನ ಸಾನಿಕ. ಚೈತ್ರಾ. ರೇಣುಕಾ.ಸಿದ್ದಮ್ಮ. ಪವಿತ್ರ. ಮಹೇಶ.ಮಹೀಬೂಬ. ಭರತ ರಘು . ಸಹಸ್ರಾರು ಸಂಖ್ಯೆಯಲ್ಲಿ ಜನರು ಭಾಗಹಿಸಿದ್ದರು.


ಉದಯವಾಹಿನಿ ಚಿತ್ರ

ಹಂತಹಂತವಾಗಿ ಹೋರಾಟ

ಈ ಅಭಿಯಾನ ಎಲ್ಲಾ ಎಕ್ಸ್‌ಪ್ರೆಸ್ ರೈಲುಗಳ ನಿಲುಗಡೆಯಾಗುವವರೆಗೆ ನಡೆಯಲಿದ್ದು, ಹಂತಹಂತವಾಗಿ ಹೋರಾಟ ನಡೆಯಲಿದ್ದು, ಒಂದು ವೇಳೆ ನಿಲ್ಲದಿದ್ದರೇ ಮುಂದಿನ ದಿನಗಳಲ್ಲಿ ಹೆಚಿನ ಜನ ಸಂಖ್ಯೆ ಸೇರಿಸಿ ರೈಲ್ವೆ ನಿಲ್ದಾಣಕ್ಕೆ ಮುತ್ತಿಗೆ ಹಾಕಲು ನಿರ್ಧರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

● ಕೇಂದ್ರ ರೈಲ್ವೆ ಸಚಿವರು ವಿಭಾಗೀಯ ನಿಯಂತ್ರಣಾಧಿಕಾರಿ ಗುಂತಕಲ್ ಮತ್ತು ಸೊಲ್ಲಾಪೂರ ಇವರುಗಳು ಕುಂಭಕರ್ಣ ನಿದ್ದೆಯಲ್ಲಿ ಜಾರಿದ್ದು, ಸಾರ್ವಜನಿಕರು ಮತ್ತು ಪ್ರಯಾಣಿಕ ಹಿತ ಕಾಪಾಡುವುದನ್ನು ಬಿಟ್ಟು ರೈಲ್ವೆ ನಿಲ್ದಾಣದಲ್ಲಿ ವಿಶೇಷ ಸೌಕರ್ಯ ಒದಗಿಸುವುದನ್ನು ಬಿಟ್ಟು ಎ.ಸಿ. ರೂಮ್‌ನಲ್ಲಿ ಕುಳಿತು ಸಾರ್ವಜನಿಕರಿಗೆ ಮತ್ತು ಪ್ರಯಾಣಿಕರಿಗೆ ದಿನನಿತ್ಯ ನರಕಯಾತನೆ ಅನುಭವಿಸವಂತಾಗಲು ಇವರೆಲ್ಲರೂ ಕಾರಣರಾಗಿದ್ದಾರೆ ಅದಕ್ಕಾಗಿ ಇವರನ್ನು ಬಡಿದೆಬ್ಬಿಸಲು ಸಾರ್ವಜನಿಕರ ಮತ್ತು ಪ್ರಯಾಣಿಕರ ಅನುಕೂಲಕೋಸ್ಕರ್ ಈ ವಿನೂತನ ಅಭಿಯಾನ ಹಮ್ಮಿಕೊಂಡಿದ್ದೇವೆ –ಉಮೇಶ ಕೆ ಮುದ್ನಾಳ, ಸಾಮಾಜಿಕ ಹೋರಾಟಗಾರರು

ಜವಾಬ್ದಾರಿ ಮರೆತ ಅಧಿಕಾರಿಗಳ ಮೇಲೆ ಕಠಿಣ ಕ್ರಮಕ್ಕೆ ಆಗ್ರಹ

• ಉದಯವಾಹಿನಿ, ಯಾದಗಿರಿ

ಜಿಲ್ಲೆಯ ಶಹಾಪೂರ ತಾಲ್ಲೂಕಿನ ಹಯ್ಯಾಳ(ಬಿ) ಹೋಬಳಿಯಲ್ಲಿ ಬರುವ ಗೌಡೂರು ಗ್ರಾಮದ ಸ.ನಂ 129ರ ಒಟ್ಟುಕ್ಷೇತ್ರ 4-33 ಗುಂಟೆ ಜಮೀನು ಇದು ಗೈರಾಣ ಜಮೀನಾಗಿದ್ದು, ಈ ಜಮೀನಿನಲ್ಲಿ ಸಾಮಾನ್ಯವಾಗಿ ಹುಲ್ಲು ಬೆಳೆದಿರುತ್ತದೆ, ಆ ಜಮೀನಿನಲ್ಲಿ ಗ್ರಾಮದ ಬಡ ಜನರು, ಜನ ಜಾನುವಾರುಗಳು ಇಲ್ಲಿಯೇ ಬೀಡು ಬಿಟ್ಟು ಮೇಯಿಸುತ್ತಾರೆ. ಆದರೆ ಇದೇ ಗೈರಾಣ ಜಮೀನನ್ನು ಇದೇ ಗ್ರಾಮದ ಕೆಲವರು ಜಮೀನನ್ನು ಒತ್ತುವರಿ ಮಾಡಿದವರ ವಿರುದ್ಧ ಕಾನೂನಿನ ಕಠಿಣ ಕ್ರಮ ಜರುಗಿಸಬೇಕೆಂದು ಕರ್ನಾಟಕ ಪ್ರದೇಶ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮೇಶ. ಕೆ.ಮುದ್ನಾಳ ರವರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳು, ಕಂದಾಯ ಸಚಿವರಿಗೆ ದೂರು ನೀಡಲಾಗಿದೆ ಎಂದರು. ನಂತರ ಮಾತನಾಡಿದ ಅವರು ಸುಮಾರು 1 ವರ್ಷದಿಂದ ಈ ಭಾಗದ ರೈತರು ಸಂಬಂಧಪಟ್ಟವರಿಗೆ ಮನವಿ ಸಲ್ಲಿಸಿ, ಬೇಸತ್ತು ನನ್ನ ಬಳಿ ಬಂದಾಗ ನಾನು ಮಾನ್ಯ ಜಿಲ್ಲಾಧಿಕಾರಿಗಳು, ಕಂದಾಯ ಸಚಿವರಿಗೆ ಮನವಿ ಸಲ್ಲಿಸಲಾಗಿದ್ದು, ಈ ಭಾಗದ ಗ್ರಾಮಲೇಖಪಾಲಕರು ಕಂದಾಯ ನಿರೀಕ್ಷಕರು, ಶಹಾಪೂರ ತಹಸೀಲ್ದಾರವರ ದಿವ್ಯ ನಿರ್ಲಕ್ಷ್ಯದಿಂದ ಸರಕಾರಿ ಜಾಗ ಸರಕಾರಿ ಅಧಿಕಾರಿಗಳು ಒತ್ತುವರಿ ಮಾಡಿದ್ದನ್ನು ತೆರವುಗೊಳಿಸುವುದನ್ನು ಬಿಟ್ಟು ಒತ್ತುವರಿ ಮಾಡಿದವರ ಜೊತೆ ಶಾಮೀಲಾಗಿರುವುದು ನಾಚಿಕೆಗೇಡಿತನ ಸಂಗತಿ. ಇದೇ ಅಧಿಕಾರಿಗಳು ತಮ್ಮ ಸ್ವಂತ ಜಾಗ ಆಗಿದ್ದರೆ ಈ ರೀತಿ 1 ವರ್ಷ ಅಲೆದಾಡಿಸುತ್ತಿದ್ದರೋ,ತಮ್ಮ ಕೆಲಸ ಮೇಲಾಧಿಕಾರಿಗಳಿಂದ ಸುಲಭವಾಗಿ ಮಾಡಿಕೊಳ್ಳುತ್ತಿದ್ದರು.

ಕಂ.ನೀ. ಗ್ರಾ.ಲೇ. ತಹಸೀಲ್ದಾರಿಗೆ ಕರೆ ಮಾಡಿದರೆ ಜವಾಬ್ದಾರಿ ಸ್ಥಾನದಲ್ಲಿದ್ದು, ಸಾರ್ವಜನಿಕರು ಕಟ್ಟಿದ ತೆರಿಗೆಯಲ್ಲಿ ಸಂಬಳ ಪಡೆದು ಉಡಾಫೆ ಉತ್ತರ ನೀಡಿದವರ ವಿರುದ್ಧ ಕಾನೂನಿನ ಕಠಿಣ ಕ್ರಮ ಜರುಗಿಸಬೇಕೆಂದು ಇಂತಹ ಘಟನೆಗಳ ಬಗ್ಗೆ ಸಮಗ್ರ ತನಿಖೆ ಆಗಬೇಕು. 1 ವರ್ಷ ಅಲೆದಾಡಿದ ರೈತರಿಗೆ ಸಾಮಾಜಿಕ ನ್ಯಾಯ ಕೊಡಿಸಬೇಕು. ಮುಂದೆ ಇಂತಹ ಘಟನೆಗಳು ನಡೆಯದಂತೆ ಜಿಲ್ಲಾಡಳಿತ ಸರಕಾರ ಮುಂದಾಗಬೇಕು.


ಉದಯವಾಹಿನಿ ಚಿತ್ರ

ಕಾನೂನಿನ ಕಠಿಣ ಕ್ರಮ ಜರುಗಿಸಬೇಕು

ಜಮೀನು ಪೊಲೀಸ್ ಬಂದೋಬಸ್ತನಲ್ಲಿ ಒತ್ತುವರಿ ಮಾಡಿದ ಜಮೀನನ್ನು ತೆರವುಗೊಳಿಸಿ, ಆ ಜಮೀನನ್ನು ವಶಪಡಿಸಿಕೊಂಡು ಅದರಲ್ಲಿ ಸಸಿ ನೆಡುವುದಲ್ಲದೇ ಆ ಜಮೀನಿನಲ್ಲಿ ಸಾರ್ವಜನಿಕರು ಮೃತಪಟ್ಟಾಗ ಸ್ಮಶಾನಕ್ಕಾಗಿ ಕಾಯ್ದರಿಸಿ, ರೈತರ ದನ ಕರುಗಳು ಮೇಯಿಸಲು ಅನುವು ಮಾಡಿಕೊಡಲು ಮುಂದಾಗಬೇಕು. ಇಲ್ಲದಿದ್ದರೆ ಬೃಹತ್ ಪ್ರತಿಭಟನೆ ಮಾಡುವುದಾಗಿ ಎಚ್ಚರಿಕೆ ನೀಡಿದರು.

ಕರ್ನಾಟಕ ಪ್ರದೇಶ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮೇಶ ಮುದ್ನಾಳರವರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ಇದೇ ಸಂದರ್ಭದಲ್ಲಿ ಶಿವರಾಜ, ಮಲ್ಲಪ್ಪ, ಬಸವರಾಜ, ಮಹೇಶ, ರಂಗನಾಥ, ಮಲ್ಲಪ್ಪ, ನಿಂಗಪ್ಪ, ಬಲವಂತಪ್ಪ, ತಂಗಮ್ಮ, ರೇಣುಕಾ, ಬಾಲಮ್ಮ, ರಾಜು, ಸುರೇಶ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ನಕ್ಸಲರಿಗೆ ಶರಣಾಗತಿಯೊಂದೇ ದಾರಿ

• ಉದಯವಾಹಿನಿ, ಉಡುಪಿ

ಉದಯವಾಹಿನಿ ಚಿತ್ರ

ಕಾಡಿನಲ್ಲಿ ಅಡಗಿ ಕುಳಿತಿರುವ ನಕ್ಸಲರಿಗೆ ಶರಣಾಗತಿ ಒಂದೇ ನಿಮಗಿರುವ ದಾರಿ ಎಂಬ ಸಂದೇಶವನ್ನು ಆಂತರಿಕ ಭದ್ರತಾ ವಿಭಾಗದ ಡಿಜಿಪಿ ಪ್ರಣಾಬ್ ಮೊಹಂತಿ ನೀಡಿದ್ದಾರೆ. ನಕ್ಸಲ್ ನಾಯಕ ವಿಕ್ರಮ್ ಗೌಡ ಎನ್ಕೌಂಟರ್ ಆದ ಸ್ಥಳಕ್ಕೆ ಪ್ರಣಬ್ ಮೊಹಂತಿ ಅವರು ಭೇಟಿ ನೀಡಿ ಘಟನೆ ಬಗ್ಗೆ ಪೂರ್ಣ ಮಾಹಿತಿ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಡಿನಲ್ಲಿ ಅವಿತಿರುವ ನಕ್ಸಲರು ಶರಣಾಗತಿಯಾಗದಿದ್ದರೆ ಕಾರ್ಯಾಚರಣೆ ಹೊರತು ನಮಗೆ ಬೇರೆ ದಾರಿ ಇಲ್ಲ ಎಂದು ಎಚ್ಚರಿಸಿದ್ದಾರೆ.ಪೀತಬೈಲ್, ಕಬ್ಬಿನಾಲೆ ಬಚ್ಚಪ್ಪು ಅರಣ್ಯ ಪ್ರದೇಶಗಳ ಬಳಿ ಡಿಜಿಪಿ ಅವರು ಪರಿಶೀಲಿಸಿದ ನಂತರ ಎಎನ್ ಎಫ್ ಕ್ಯಾಂಪ್‌ಗೆ ಭೇಟಿ ಕೊಟ್ಟು ಕೆಲವು ಸೂಚನೆ ನೀಡಿದ್ದಾರೆ. ಡಿಜಿಪಿ ಅವರು ಭೇಟಿ ನೀಡಿದ್ದ ಬೆನ್ನಲ್ಲಿ ಕೂಂಬಿಂಗ್ ಚುರುಕುಗೊಂಡಿದೆ.

ಮೋಸ್ಟ್ ವಾಂಟೆಡ್ ನಕ್ಸಲ್ ನಾಯಕ ವಿಕ್ರಮ್ ಗೌಡ ಎನ್ಕೌಂಟರ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕಬ್ಬಿನಾಲೆ ಅರಣ್ಯಪ್ರದೇಶ ವ್ಯಾಪ್ತಿಯ ಪೀತಬೈಲು ಸ್ಥಳದಲ್ಲಿ ದಾಖಲೆಗಳನ್ನು ಸಂಗ್ರಹಿಸಲು ಬೆಂಗಳೂರಿನಿಂದ ತಜ್ಞ ವಿಧಿ ವಿಜ್ಞಾನ ಪ್ರಯೋಗಾಲಯದ ಅಧಿಕಾರಿಗಳು ಬಂದಿದ್ದು ಪರಿಶೀಲನೆ ನಡೆಸುತ್ತಿದ್ದಾರೆ.

ಘಟನಾಸ್ಥಳವಾದ ಪೀತಬೈಲಿನಲ್ಲಿ ಎಲ್ಲಾ ಮಹತ್ವದಾಖಲೆಗಳನ್ನು ಎಫ್ ಎಸ್‌ಎಲ್ ತಂಡ ಪರಿಶೀಲಿಸುತ್ತಿದೆ. ವಿಕ್ರಮ್‌ಗೌಡ ಎನ್ಕೌಂಟರ್ ಪ್ರಕರಣದಲ್ಲಿ ಖಚಿತ ದಾಖಲೆ ಸಂಗ್ರಹ ಮತ್ತು ಸಾಕ್ಷ್ಯಾಧಾರ ಹೋಲಿಕೆಗಾಗಿ ಎಫ್‌ಎಸ್‌ಎಲ್ ತಂಡ ಹಲವು ಮಾಹಿತಿಗಳನ್ನು ಸಂಗ್ರಹಿಸುವ ಕಾರ್ಯದಲ್ಲಿ ನಿರತವಾಗಿದೆ.

ಅಂಕ ಗಳಿಕೆಯೇ ಮಕ್ಕಳ ಸಾಧನೆಯಲ್ಲ : ಕಂಚ್ಯಾಣಿ

• ಉದಯವಾಹಿನಿ, ಮುದ್ದೇಬಿಹಾಳ

ಮಕ್ಕಳು ನಮ್ಮ ಮಕ್ಕಳಲ್ಲ, ಅವರು ನಾಡಿನ ದೇಶದ ಆಸ್ತಿ ಅವರು ನಮ್ಮ ಮುಖಾಂತರ ಬಂದಿದ್ದಾರೆ ಅಷ್ಟೆ, ಅವರಿಗೆ ನಮ್ಮ ಆಶೆ, ಆಕಾಂಕ್ಷೆಗಳನ್ನು ಒತ್ತಾಯದಿಂದ ಹೆರದೇ ಅವರು ತಮ್ಮ ಸ್ವಂತ ಶಕ್ತಿ, ಪ್ರತಿಭೆಯ ಮೂಲಕ ಬೆಳೆಯುವಂತೆ ನೋಡಿಕೊಳ್ಳುವ ಕೆಲಸ ನಾವು ಮಾಡಬೇಕು ಎಂದು ಮಕ್ಕಳ ಸಾಹಿತಿ ಜಂಬುನಾಥ ಕಂಚ್ಯಾಣಿ ಹೇಳಿದರು. ಅವರು ಪಟ್ಟಣದ ಬಸವ ವಿದ್ಯಾಪ್ರಸಾರಕ ಸಂಸ್ಥೆಯ ಪ್ರರಥನಾ ವಿದ್ಯಾ ಮಂದಿರದಲ್ಲಿ ನಡೆದ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳನ್ನು ಭಿಕ್ಷಾಟನೆಗೆ, ಬಾಲ ಕಾರ್ಮಿಕತನಕ್ಕೆ ಬಳಸದೇ ಅವರಿಗೆ ಉತ್ತಮ, ಮೌಲ್ಯಯುತ ಶಿಕ್ಷಣ ನೀಡಬೇಕು. ಮಕ್ಕಳ ಭಾವನೆ ಗುರುತಿಸಿ, ಗೌರವಿಸುವ, ಪೋಷಿಸುವ ಕೆಲಸವಾಗಬೇಕು. ಮಕ್ಕಳಿಗೆ ಶಿಕ್ಷಿಸದೇ, ಪ್ರೀತಿಯಿಂದ ನೈತಿಕ, ಮಾನವೀಯ ಮೌಲ್ಯಗಳನ್ನು ಕಲಿಸಬೇಕು. ಅಂಕ ಗಳಿಕೆಯೊಂದೇ ಮಕ್ಕಳ ಸಾಧನೆ ಅಳೆಯುವ ಮಾನದಂಡವಾಗಬಾರದು ಎಂದವರು ಹೇಳಿದರು.

ಅಧ್ಯಕ್ಷತೆ ವಹಿಸಿ ಬಸವ ವಿದ್ಯಾಪ್ರಸಾರಕ ಸಂಸ್ಥೆಯ ಅಧ್ಯಕ್ಷ ಮುರುಗೇಶ ಮೋಟಗಿ ಮಾತನಾಡಿದರು. ವೇದಿಕೆಯಲ್ಲಿ ಸಂಸ್ಥೆಯ ಕಾರ್ಯಕಾರಿ ಜಗದೀಶ ಕಂಚ್ಯಾಣಿ, ಸಲಹಾ

ಪ್ರಧಾನಿ ನರೇಂದ್ರ ಮೋದಿಗೆ ಗಯಾನಾದ ಅತ್ಯುನ್ನತ ಪ್ರಶಸ್ತಿ ಗೌರವ

● ಗಯಾನಾದಲ್ಲಿ ನಡೆಯುತ್ತಿರುವ ಭಾರತ-ಕೆರಿಕಮ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

ಗಯಾನ: ಜಾಗತಿಕ ಸಮುದಾಯಕ್ಕೆ ಅನನ್ಯ ಸೇವೆ, ದಕ್ಷ ನಾಯಕತ್ವ ಹಾಗೂ ಉಭಯ ದೇಶಗಳ ನಡುವಿನ ಭಾಂಧವ್ಯ ವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಕ್ಕಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಗಯಾನಾದ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿ 'ದಿ ಆರ್ಡರ್ ಆಫ್ ಎಕ್ಸಲೆನ್ಸ್'ಗೆ ಭಾಜನರಾಗಿದ್ದಾರೆ.

ಗಯಾನಾ ಅಧ್ಯಕ್ಷ ಡಾ.ಇರ್ಫಾನ್ ಅಲಿ ಜಾರ್ಜ್ ಟೌನ್‌ಲ್ಲಿ ಪ್ರಧಾನಿ ನರೇಂದ್ರ ಮೋದಿಗೆ ದೇಶದ ಅತ್ಯುನ್ನತ ನಾಗರೀಕ ಪ್ರಶಸ್ತಿ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಪ್ರಧಾನಿ ಮೋದಿ ಮಾತನಾಡಿ, ಗಯಾನಾದ ಅತ್ಯುನ್ನತ ಪ್ರಶಸ್ತಿ ನೀಡಿ ಗೌರವಿಸಿದ್ದಕ್ಕಾಗಿ ನನ್ನ ಸ್ನೇಹಿತ ಅಧ್ಯಕ್ಷ ಇರ್ಫಾನ್ ಅಲಿ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಇದು 140 ಕೋಟಿ ಭಾರತೀಯರಿಗೆ ಸಂದ ಗೌರವ.

ಇದು ನಮ್ಮ ಸಂಬಂಧಕ್ಕೆ, ನಿಮ್ಮ ಬದ್ಧತೆಗೆ ಜೀವಂತ ಸಾಕ್ಷಿಯಾಗಿದೆ. ಈ ಗೌರವ ಪ್ರತಿಯೊಂದು ಕ್ಷೇತ್ರದಲ್ಲೂ ಮುಂದುವರಿಯಲು ಇನ್ನಷ್ಟು ಸ್ಫೂರ್ತಿ ನೀಡುತ್ತದೆ'' ಎಂದು ಹೇಳಿದರು.

ಮೋದಿ ಆಡಳಿತ ಶೈಲಿಗೆ ಶ್ಲಾಘನೆ

ಜಾರ್ಜ್‌ಟೌನ್‌ನಲ್ಲಿ ನಡೆದ ಸಭೆಯಲ್ಲಿ ಗಯಾನಾ ಅಧ್ಯಕ್ಷ ಮೊಹಮ್ಮದ್ ಇರ್ಫಾನ್ ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತವನ್ನು ಶ್ಲಾಘಿಸಿದ್ದಾರೆ. ಗಯಾನಾಕ್ಕೆ ನರೇಂದ್ರ ಮೋದಿ ಬಂದಿರುವುದು ನಮ್ಮ ದೊಡ್ಡ ಗೌರವ. ಭಾರತವನ್ನು ನಂಬಲಾಗದಷ್ಟು ಮುನ್ನಡೆಸಿರುವು ನೀವು ನಾಯಕರಲ್ಲಿ ಚಾಂಪಿಯನ್ ಆಗಿದ್ದೀರಿ. ಈ ಮೂಲಕ ಅಭಿವೃದ್ಧಿಶೀಲ ಜಗತ್ತಿಗೆ ಬೆಳಕು ತೋರಿಸಿದ್ದೀರಿ. ನಿಮ್ಮನ್ನು ನೋಡಿ ಅನೇಕರು ತಮ್ಮ ದೇಶದಲ್ಲಿ ಅಭಿವೃದ್ಧಿ ಮಾಪನಗಳು ಮತ್ತು ಚೌಕಟ್ಟನ್ನು ಅಳವಡಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದ್ದಾರೆ.



- ಗಯಾನಾದಲ್ಲಿ ನಡೆಯುತ್ತಿರುವ ಭಾರತ-ಕೆರಿಕಮ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ
- ಪ್ರಧಾನಿ ನರೇಂದ್ರ ಮೋದಿಗೆ ಗಯಾನಾದ ಅತ್ಯುನ್ನತ ಪ್ರಶಸ್ತಿ
- ಡೊಮಿನಿಕಾದಿಂದಲೂ 'ಡೊಮಿನಿಕಾ ಅವಾರ್ಡ್ ಆಫ್ ಹಾನರ್' ಗೌರವ

ಕೋವಿಡ್-19 ಸಾಂಕ್ರಾಮಿಕ ಸಮಯದಲ್ಲಿ ತಮ್ಮ ದೇಶಕ್ಕೆ ಸಹಾಯ ಮಾಡಿದ್ದಕ್ಕಾಗಿ ಮತ್ತು ಉಭಯ ದೇಶಗಳ ನಡುವಿನ ಸಂಬಂಧವನ್ನು ಬಲಪಡಿಸಲು ಡೊಮಿನಿಕಾವು ಪ್ರಧಾನಿ ನರೇಂದ್ರ ಮೋದಿಗೆ ತನ್ನ ದೇಶದ ಅತ್ಯುನ್ನತತ ರಾಷ್ಟ್ರೀಯ ಪ್ರಶಸ್ತಿಯಾದ 'ಡೊಮಿನಿಕಾ ಅವಾರ್ಡ್ ಆಫ್ ಹಾನರ್' ನೀಡಿ ಗೌರವಿಸಿದೆ.

ಡೊಮಿನಿಕಾ ಅವಾರ್ಡ್ ಆಫ್ ಹಾನರ್

ಗಯಾನಾದ ಜಾರ್ಜ್‌ಟೌನ್‌ನಲ್ಲಿ ನಡೆಯುತ್ತಿರುವ ಭಾರತ-ಕೆರಿಕಮ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಡೊಮಿನಿಕಾ ದ್ವೀಪರಾಷ್ಟ್ರದ ಅಧ್ಯಕ್ಷೆ ಸಿಲ್ವೆನಿ ಬರ್ಟನ್ ಪ್ರಶಸ್ತಿ ಪ್ರದಾನ ಮಾಡಿದ್ದಾರೆ.

2021ರಲ್ಲಿ ಪ್ರಧಾನಿ ಮೋದಿ ಡೊಮಿನಿಕಾಗೆ 70 ಸಾವಿರ ಡೋಸ್ ಕೋವಿಡ್ ಲಸಿಕೆ ಅಸ್ಟ್ರಾಜೆನೆಕಾವನ್ನು ಪೂರೈಸುವ ಮೂಲಕ ನೆರವಾಗಿದ್ದರು. ಪ್ರಧಾನಿ ಮೋದಿಯ ಅವರ ಈ ಉದಾರತೆಯನ್ನು ಗುರುತಿಸಿ, ಡೊಮಿನಿಕಾ ಸರ್ಕಾರ ತನ್ನ ಅತ್ಯುನ್ನತ ನಾಗರಿಕ ಗೌರವ ನೀಡಿದೆ.

ಗಯಾನಾದಲ್ಲಿ 3.20 ಲಕ್ಷ ಭಾರತೀಯ ಮೂಲದವರು ವಾಸ

ಗಯಾನಾದಲ್ಲಿ ಸುಮಾರು 3.20 ಲಕ್ಷ ಭಾರತೀಯ ಮೂಲದವರು ವಾಸವಾಗಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. 185 ವರ್ಷಗಳ ಹಿಂದೆ ವಲಸೆ ಬಂದ ಅತ್ಯಂತ ಹಳೆಯ ಅನಿವಾಸಿ ಭಾರತೀಯರಲ್ಲಿ ಇವರೂ ಒಂದು ಎಂದು ತಿಳಿಸಲಾಗಿದೆ. ಭಾರತೀಯ ಮೂಲದ ಜನರನ್ನು ಹೊರತುಪಡಿಸಿ, ಸುಮಾರು 2,000 ಭಾರತೀಯ ಪ್ರಜೆಗಳು ವಾಸಿಸುತ್ತಿದ್ದಾರೆ. ಅವರು ಇಂಡಿಯನ್ ಮಿಷನ್, ಇಂಡಿಯನ್ ಮಿಷನ್‌ನ ಭಾರತೀಯ ಸಾಂಸ್ಕೃತಿಕ ಕೇಂದ್ರ, ಬ್ಯಾಂಕ್ ಆಫ್ ಬರೋಡಾದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇನ್ನು ಕೆಲವರು ವಿವಿಧ ಏಜೆನ್ಸಿ, ವೈದ್ಯಕೀಯ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ.

ಟ್ರಂಪ್ ಜತೆ ಶಾಂತಿ ಮಾತುಕತೆಗೆ ಪುಟಿನ್ ಸಿದ್ಧ: ಆದರೆ ಷರತ್ತು ಒಪ್ಪಲೇಬೇಕು

ಮಾಸ್ಕೋ: ಉಕ್ರೇನ್ ಮೇಲಿನ ಯುದ್ಧ ಆರಂಭವಾದ ಸಂದರ್ಭದಿಂದಲೂ ಅಣ್ವಸ್ತ್ರ ಬಳಕೆ ಕುರಿತು ಬೆದರಿಕೆ ಒಡ್ಡುತ್ತಲೇ ಬಂದಿರುವ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ತಮ್ಮ ಅಣ್ವಸ್ತ್ರ ನೀತಿಯಲ್ಲಿ ಬದಲಾವಣೆ ಮಾಡುವ ಮೂಲಕ ಜಾಗತಿಕ ಮಟ್ಟದಲ್ಲಿ ಮತ್ತೊಮ್ಮೆ ತಲ್ಲಣ ಮೂಡಿಸಿದ್ದಾರೆ. ಈ ನಡುವೆ ಕದನ ವಿರಾಮ ಒಪ್ಪಂದಕ್ಕಾಗಿ ಅಮೆರಿಕದ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜತೆ ಷರತ್ತುಬದ್ಧ ಮಾತುಕತೆಗೆ ಸಿದ್ಧರಿರುವುದಾಗಿ ಪುಟಿನ್ ತಿಳಿಸಿದ್ದಾರೆ.

ಪರಮಾಣು ನಿರೋಧಕ ಸರ್ಕಾರಿ ನೀತಿಯ ಮೂಲ ತತ್ವಗಳು ಎಂಬ ಹೆಸರಿನ ಅಣ್ವಸ್ತ್ರ ಸಿದ್ಧಾಂತದಲ್ಲಿ ಪ್ರಸ್ತಾಪಿಸಲಾಗಿದ್ದ ಬದಲಾವಣೆಗಳಿಗೆ ಪುಟಿನ್ ಅನುಮೋದನೆ ನೀಡಿದ್ದಾರೆ. ಇದರೊಂದಿಗೆ ರಷ್ಯಾ ತನ್ನ ಆಟೋಮಿಕ್ ವೆಪನ್‌ಗಳ ಬಳಕೆಗೆ ಇದ್ದ ನಿರ್ಬಂಧದ ನಿಯಮಗಳನ್ನು ಸಡಿಲಿಸಿಕೊಂಡಿದೆ. ರಷ್ಯಾದ ಪರಮಾಣು ನೀತಿಯಲ್ಲಿನ ಬಹು ದೊಡ್ಡ ಬದಲಾವಣೆ ಎಂದರೆ, ಯಾವುದೇ ಅಣ್ವಸ್ತ್ರ ಹೊಂದಿರುವ ದೇಶದ ಬೆಂಬಲದೊಂದಿಗೆ ಅಣ್ವಸ್ತ್ರರಹಿತ ದೇಶವು ನಡೆಸುವ ದಾಳಿಯನ್ನು ತನ್ನ ಮೇಲಿನ ಜಂಟಿ ದಾಳಿ ಎಂದೇ ರಷ್ಯಾ ಪರಿಗಣಿಸಲಿದೆ ಎನ್ನುವುದು. ಸೆಪ್ಟೆಂಬರ್ ತಿಂಗಳಿನಲ್ಲಿಯೇ ಈ ಬದಲಾವಣೆಗಳನ್ನು ಪ್ರಸ್ತಾಪಿಸಲಾಗಿತ್ತು. ಆದರೆ ಅದಕ್ಕೆ ಮಂಗಳವಾರ ಒಪ್ಪಿಗೆ ದೊರಕಿದೆ. ರಷ್ಯಾ-ಉಕ್ರೇನ್ ಯುದ್ಧ 1000ನೇ ದಿನಕ್ಕೆ ಕಾಲಿಟ್ಟ ಸಂದರ್ಭದಲ್ಲಿಯೇ ರಷ್ಯಾ ಈ ನಡೆ ಅನುಸರಿಸಿದೆ.

- ತನ್ನ ಅಣ್ವಸ್ತ್ರ ನೀತಿಯಲ್ಲಿ ಮಹತ್ವದ ಬದಲಾವಣೆಗಳನ್ನು ಅಂಗೀಕರಿಸಿದ ರಷ್ಯಾ
- ಅಣ್ವಸ್ತ್ರರಹಿತ ದೇಶಕ್ಕೆ ನೀಡುವ ಬೆಂಬಲವನ್ನೂ ಜಂಟಿ ದಾಳಿ ಎಂದು ಪರಿಗಣನೆ
- ಕ್ಷಿಪಣಿ, ಡ್ರೋನ್ ಅಥವಾ ಯುದ್ಧ ವಿಮಾನ ದಾಳಿಗೆ ಅಣ್ವಸ್ತ್ರದ ಮೂಲಕ ಪ್ರತಿಕ್ರಿಯೆ

ದಾಳಿಗೆ ಅಣ್ವಸ್ತ್ರದ ಮೂಲಕ ಪ್ರತಿಕ್ರಿಯೆ



ರಷ್ಯಾದ ಅಣ್ವಸ್ತ್ರ ನೀತಿಯಲ್ಲಿ ಮಹತ್ವದ ಬದಲಾವಣೆ ಮಾಡಿದ ಬಳಿಕ ರಷ್ಯಾ ಈ ಹೆಜ್ಜೆ ಅನುಸರಿಸಿದೆ.

ನ್ಯೂಕ್ಲಿಯರ್ ನೀತಿಯಲ್ಲಿನ ಬದಲಾವಣೆಯೊಂದಿಗೆ ರಷ್ಯಾ, ತನ್ನ ಮೇಲಿನ ಕ್ಷಿಪಣಿಗಳು, ಡ್ರೋನ್ ಅಥವಾ ಯುದ್ಧ ವಿಮಾನಗಳ ದೊಡ್ಡ ಮಟ್ಟದ ದಾಳಿಗೆ ಅಣ್ವಸ್ತ್ರದ ಮೂಲಕ ಪ್ರತಿಕ್ರಿಯೆ ನೀಡಬಹುದಾಗಿದೆ.

ಈ ಅಣ್ವಸ್ತ್ರ ತತ್ವವು ರಷ್ಯಾದ ನಿಕಟವರ್ತಿ ಬೆಲಾರಸ್‌ಗೆ ಕೂಡ ಅನ್ವಯವಾಗಲಿದೆ.

ಕೇಜ್ರಿ ನಿವಾಸದ ಬಳಿ ಆಪ್ ಪ್ರತಿಭಟನೆ

ನವದೆಹಲಿ: ವಿವಾದಿತವಾಗಿರುವ 'ಶೀಶ್ ಮಹಲ್' ಬಂಗಲೆಯಲ್ಲಿ ದುಂದುವೆಚ್ಚ ಮಾಡಿರುವ ಆರೋಪದ ಬಗ್ಗೆ ಉತ್ತರ ನೀಡಬೇಕು ಎಂದು ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಎಎಪಿ ಮುಖ್ಯಸ್ಥ ಅರವಿಂದ ಕೇಜ್ರಿವಾಲ್ ಅವರ ನಿವಾಸದ ಮುಂದೆ ಪ್ರತಿಭಟನೆ ನಡೆಸಿದ್ದಾರೆ.

ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಅರವಿಂದ ಕೇಜ್ರಿವಾಲ್ ಮುಖ್ಯಮಂತ್ರಿ ಬಂಗಲೆಯನ್ನು ನವೀಕರಣ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಜನತಾ ಪಕ್ಷದ ಸದಸ್ಯರು ಮತ್ತು ಕಾರ್ಯಕರ್ತರು ಅದರ ಅಧ್ಯಕ್ಷ ವೀರೇಂದ್ರ ಸಚ್‌ದೇವ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು. ಚಿನ್ನದ ಲೇಪಿತ ಫಿಕ್ಚರ್‌ಗಳು, ಉನ್ನತ-ಮಟ್ಟದ ಪೀಠೋಪಕರಣಗಳು ಮತ್ತು ದುಬಾರಿ ಅಲಂಕಾರಗಳು ಸೇರಿದಂತೆ ಅದ್ಧೂರಿ ಪೀಠೋಪಕರಣಗಳನ್ನು ಬಹಿರಂಗಪಡಿಸುವ ದಾಸ್ತಾನು ಪಟ್ಟಿಯನ್ನು ಬಿಡುಗಡೆ ಮಾಡಿ ಆರೋಪಿಸಿದೆ. ಕೋಟ್ಯಂತರ ರೂಪಾಯಿ ಮೌಲ್ಯದ ವಸ್ತುಗಳನ್ನು ನೀಡಿಲ್ಲ ಎಂದು ಪಿಡಬ್ಲ್ಯುಡಿ ದಾಖಲೆಗಳು ತೋರಿಸುತ್ತವೆ ಎಂದು ವೀರೇಂದ್ರ ಸಚ್‌ದೇವ ಆಗ್ರಹಿಸಿದ್ದಾರೆ. 'ಶೀಷ್ಮಹಲ್‌ನಲ್ಲಿ ಇಷ್ಟೆಲ್ಲಾ ದುಂದುವೆಚ್ಚದ ವಸ್ತುಗಳು ನಿಮಗೆ ಹೇಗೆ ಸಿಕ್ಕಿವೆ ಇದು ಪಂಜಾಬ್ ಸರ್ಕಾರದಿಂದ ಬಂದಿದೆಯೇ, ಮದ್ಯದ ಹಗರಣದಿಂದ ಅಥವಾ ದೆಹಲಿ ಜಲ ಮಂಡಳಿಯಿಂದ ಬಂದಿದೆಯೇ ಎನ್ನುವುದನ್ನು ತಿಳಿಸಿದ್ದಾರೆ.

ಪ್ರಾಮಾಣಿಕ'' ಅರವಿಂದ್ ಕೇಜ್ರಿವಾಲ್‌ರನ್ನು ಕೆಣಕಲು ಬಿಜೆಪಿ ಇಂತಹ ತಂತ್ರಗಳನ್ನು ಅನುಸರಿಸುತ್ತಿದೆ ಎಂದು ಆಮ್ ಆದ್ಮಿ ಪಕ್ಷ ತಿರುಗೇಟು ನೀಡಿದೆ, ದೆಹಲಿಯ ಜನರು ತಮ್ಮ ''ಸುಳ್ಳು ಆರೋಪಗಳ ಮೂಲಕ ನೋಡಿದ್ದಾರೆ, ಅದಕ್ಕಾಗಿಯೇ 'ಕೇಜ್ರಿವಾಲ್ ಉತ್ತರಿಸಲಿದ್ದಾರೆ ಎಂದಿದ್ದಾರೆ.

ನಾಚಿಕೆಗೇಡಿನ ದೃಶ್ಯ: ಉಗ್ರ ದಾಳಿಯಲ್ಲಿ ಮೃತಪಟ್ಟ ಸೈನಿಕರ ಮೃತದೇಹಗಳನ್ನು ಕತ್ತೆ ಮೇಲೆ ಹೊತ್ತೊಯ್ದ ಪಾಕ್

ಇಸ್ಲಾಮಾಬಾದ್: ದೇಶ ರಕ್ಷಣೆಗಾಗಿ ಪ್ರಾಣ ತ್ಯಾಗ ಮಾಡಿದ ಯೋಧರಿಗೆ ದೇಶ ಗೌರವಪೂರ್ವಕವಾಗಿ ಅಂತಿಮ ವಿದಾಯ ಹೇಳುತ್ತದೆ. ಆದರೆ ಈ ವಿಷಯದಲ್ಲೂ ಪಾಕಿಸ್ತಾನ ಎಂತಹ ಅಸಹ್ಯಕರ ಕೃತ್ಯ ಎಸದೆ ಎಂದರೆ ಅದರ ವಿಡಿಯೋ ನೋಡಿದ ಜನರು ಪಾಕಿಸ್ತಾನವನ್ನು ತೀವ್ರವಾಗಿ ಟೀಕಿಸುತ್ತಿದ್ದಾರೆ.

ಭಯೋತ್ಪಾದಕರ ವಿರುದ್ಧದ ಹೋರಾಟದಲ್ಲಿ ಮೃತಪಟ್ಟ ಯೋಧರಿಗೆ ಗೌರವಯುತ ಬೀಳ್ಕೊಡುಗೆ ನೀಡುವುದನ್ನು ಮರೆತು, ಅವರ ಮೃತದೇಹಗಳನ್ನು ಸರಿಯಾಗಿ ತೆಗೆದುಕೊಂಡು ಹೋಗಲು ಪಾಕಿಸ್ತಾನಕ್ಕೆ ಸಾಧ್ಯವಾಗುತ್ತಿಲ್ಲ. ಪಾಕಿಸ್ತಾನದ ಆಡಳಿತವು ಖೈಬರ್ ಪಖ್ತುಂಖ್ವಾದಲ್ಲಿ ಸೈನಿಕರ ದೇಹಗಳನ್ನು ಕತ್ತೆಗಳ ಮೇಲೆ ಸಾಗಿಸಿದ್ದು ಈ ವಿಡಿಯೋ ವೈರಲ್ ಆಗಿದೆ.

ಪಾಕಿಸ್ತಾನದ ಬಲೂಚಿಸ್ತಾನ ಮತ್ತು ಖೈಬರ್ ಪಖ್ತುಂಖ್ವಾ ಪ್ರದೇಶಗಳಲ್ಲಿ ಕಳೆದ ಒಂದು ತಿಂಗಳಲ್ಲಿ ಪಾಕಿಸ್ತಾನ ಸೇನೆಯ 100ಕ್ಕೂ ಹೆಚ್ಚು ಸೈನಿಕರು ಹತರಾಗಿದ್ದಾರೆ. ಭಯೋತ್ಪಾದಕರ ವಿರುದ್ಧ ಹೋರಾಡುವಾಗ ಈ ಸೈನಿಕರು ಸಾವನ್ನಪ್ಪಿದ್ದು ಪಾಕಿಸ್ತಾನಿ ಸೇನೆಯು ಈ ಎಲ್ಲಾ ಅಂಕಿಅಂಶಗಳನ್ನು ಮರೆಮಾಡಲು ಪ್ರಯತ್ನಿಸುತ್ತಿದೆ. ಈ ಬಾರಿಯೂ ಪಾಕಿಸ್ತಾನಿ ಸೇನೆ ಅದನ್ನೆ ಮಾಡಲು ಮುಂದಾಗಿತ್ತು. ಆದರೆ ವಿಡಿಯೋ ವೈರಲ್ ನಿಂದಾಗಿ ವಿಷಯ ಬಹಿರಂಗಗೊಂಡಿದೆ. ಇತ್ತೀಚಿನ ಘಟನೆಯೊಂದರಲ್ಲಿ ಭಯೋತ್ಪಾದಕರು ಪಾಕಿಸ್ತಾನ ಸೇನೆಯ 2 ಡಜನ್‌ಗಿಂತಲೂ ಹೆಚ್ಚು ಸೈನಿಕರನ್ನು ಹತ್ಯೆ ಮಾಡಿದ್ದರು. ಪೊಲೀಸ್ ಠಾಣೆಗೆ ನುಗ್ಗಿ 7 ಪೊಲೀಸರನ್ನು ಅಪಹರಿಸಿದ್ದರು. ಈ ದಾಳಿಯಲ್ಲಿ ಸೈನಿಕರ ಸಾವನ್ನು ಮರೆಮಾಡಲು, ಪಾಕಿಸ್ತಾನಿ ಆಡಳಿತವು ಮೃತ ಸೈನಿಕರ ಶವಗಳನ್ನು ಘಟನೆಯ ಸ್ಥಳದಿಂದ ಆದಷ್ಟು ಬೇಗ ತೆರವುಗೊಳಿಸಲು ಪ್ರಯತ್ನಿಸಿತು. ತರಾತುರಿಯಲ್ಲಿ, ಆಡಳಿತವು ಸೈನಿಕರ ಮೃತ ದೇಹಗಳನ್ನು ಕತ್ತೆಗಳ ಮೇಲೆ ಹೇರಿ ಕಾಡಿನ ಮೂಲಕ ಸಾಗಿಸಲು ಪ್ರಾರಂಭಿಸಿತು. ಆದರೆ ಪಾಕ್ ಆಡಳಿತದ ಈ ಕೃತ್ಯ ಮತ್ತೊಂದು ಸೇನಾ ತುಕಡಿಯ ಕೈಗೆ ಸಿಕ್ಕಿಬಿದ್ದಿದ್ದು, ಸೈನಿಕರು ಇದನ್ನು ವಿಡಿಯೋ ಕೂಡ ಮಾಡಿದ್ದಾರೆ.

ಮಹಾಕುಂಭ ನಡೆಯುವ ಪ್ರಯಾಗ್‌ರಾಜ್‌ನಲ್ಲಿ ಟೆಂಟ್ ಸಿಟಿ ನಿರ್ಮಾಣ

ನವದೆಹಲಿ: ಮುಂದಿನ ವರ್ಷದ ಮಹಾಕುಂಭ ಮೇಳದ ಸಂದರ್ಭದಲ್ಲಿ ಪ್ರಯಾಗರಾಜ್ನಲ್ಲಿ ಟೆಂಟ್ ಸಿಟಿಯನ್ನು ಅಭಿವದ್ಧಿಪಡಿಸಲು ಭಾರತೀಯ ರೈಲ್ವೆ ಕ್ಯಾಟರಿಂಗ್ ಮತ್ತು ಟೂರಿಸಂ ಕಾರ್ಪೊರೇಷನ್ ಲಿಮಿಟೆಡ್ ತೀರ್ಮಾನಿಸಿದೆ.

ಐಆರ್‌ಸಿಟಿಸಿಯ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಸಂಜಯ್ ಕುಮಾರ್ ಜೈನ್ ಅವರು ಮಹಾ ಕುಂಭ ಗ್ರಾಮ ಭಾರತದ ಆಧ್ಯಾತಿಕ ವೈವಿಧ್ಯತೆಯನ್ನು ಆಚರಿಸುವ ರೀತಿಯಲ್ಲಿ ಐಷಾರಾಮಿ ವಸತಿ ಮತ್ತು ಸಾಂಸ್ಕೃತಿಕ ತಲ್ಲೀನಗೊಳಿಸುವ ಅನುಭವವನ್ನು ಸಂಯೋಜಿಸುವ ತೀರ್ಥಯಾತ್ರೆ ಮತ್ತು ಪ್ರವಾಸೋದ್ಯಮ ಭೂದೃಶ್ಯಕ್ಕೆ ಪರಿವರ್ತನೆಯ ಸೇರ್ಪಡೆಯಾಗಿದೆ ಎಂದು ಹೇಳಿದರು.

ಎಲ್ಲಾ ಸಂದರ್ಶಕರಿಗೆ ಪ್ರವೇಶಿಸಬಹುದಾದ, ಆರಾಮದಾಯಕ ಮತ್ತು ಶ್ರೀಮಂತ ಅನುಭವವನ್ನು ಒದಗಿಸುವುದು ನಮ ಉದ್ದೇಶವಾಗಿದೆ ಎಂದು ಜೈನ್ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಐಆರ್‌ಸಿಟಿಸಿಯು ಕುಂಭ ಗ್ರಾಮವನ್ನು ಅಪ್ರತಿಮ ಆಧ್ಯಾತಿಕ ಮತ್ತು ಸಾಂಸ್ಕೃತಿಕ ತಾಣವನ್ನಾಗಿ ಮಾಡಲು ಅನನ್ಯ ಸ್ಥಾನದಲ್ಲಿದೆ ಎಂದು ಕಂಪನಿ ಹೇಳಿದೆ.

ಪ್ರವಾಸ ಮತ್ತು ವ್ಯಾಪಕವಾದ ಆತಿಥ್ಯ

ಮಹಾಕುಂಭ್ ಗ್ರಾಮ್ ಟೆಂಟ್ ಸಿಟಿಯನ್ನು ನೇರ ಬುಕಿಂಗ್ ಮೂಲಕ ಮತ್ತು ಐಆರ್‌ಸಿಟಿಸಿ ಪ್ರವಾಸಿಗರು ರೈಲ್ ಟೂರ್ ಪ್ಯಾಕೇಜ್‌ಗಳು, ಭಾರತ್ ಗೌರವ್ ರೈಲುಗಳು ಇತ್ಯಾದಿಗಳನ್ನು ಪಡೆದುಕೊಳ್ಳುವ ಮೂಲಕ ಪ್ರೋತ್ಸಾಹಿಸಲಾಗುತ್ತದೆ.

ಪ್ರಯಾಗರಾಜ್ನಲ್ಲಿರುವ ಮಹಾ ಕುಂಭ್ ಗ್ರಾಮ್ ಟೆಂಟ್ ಸಿಟಿಯು ಅತಿಥಿಗಳಿಗೆ ಉನ್ನತ ಮಟ್ಟದ ಸೌಕರ್ಯವನ್ನು ಖಚಿತಪಡಿಸಿಕೊಳ್ಳಲು ಆಧುನಿಕ ಸೌಕರ್ಯಗಳೊಂದಿಗೆ ಡೀಲಕ್ಸ್ ಮತ್ತು ಪ್ರೀಮಿಯಂ ಶಿಬಿರಗಳನ್ನು ಒದಗಿಸುತ್ತದೆ ಮತ್ತು ಆಧ್ಯಾತಿಕ ವಾತಾವರಣದ ನಡುವೆ ಪ್ರೀಮಿಯಂ ಅನುಭವವನ್ನು ನೀಡಲಿದೆ.

> ಕಂಪನಿಯು, ರೈಲ್ವೆ ಸಚಿವಾಲಯದ ಸಾರ್ವಜನಿಕ ವಲಯದ ಉದ್ಯಮವಾಗಿದ್ದು, ಆಸ್ತಾ ಮತ್ತು ಭಾರತ್ ಗೌರವ್ ರೈಲುಗಳಲ್ಲಿ ಇಲ್ಲಿಯವರೆಗೆ 6.5 ಲಕ್ಷ ಪ್ಲಸ್ ಗ್ರಾಹಕರನ್ನು ಯಶಸ್ವಿಯಾಗಿ ನಿರ್ವಹಿಸಿದ ಡೊಮೇನ್ ಅನುಭವದೊಂದಿಗೆ ರಾಷ್ಟ್ರವ್ಯಾಪಿ ರೈಲು ಜಾಲದಲ್ಲಿ ಸಾಮೂಹಿಕ-ಪ್ರಮಾಣದ ತೀರ್ಥಯಾತ್ರೆ ಪ್ರವಾಸ ಮತ್ತು ವ್ಯಾಪಕವಾದ ಆತಿಥ್ಯ ಸೇವೆಗಳಲ್ಲಿ ಪರಿಣತಿಯನ್ನು ಹೊಂದಿದೆ ಎಂದು ಹೇಳಿದೆ.

ಇವಿಎಂ ಸಾಗಿಸುತ್ತಿದ್ದ ಕಾರಿನ ಮೇಲೆ ದಾಳಿ

ನಾಗ್ಪುರ: ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ಮತದಾನ ಮುಗಿದ ನಂತರ ನಾಗ್ಪುರದ ಸ್ಟ್ರಾಂಗ್ ರೂಮ್ಗೆ ಎಲೆಕ್ಟ್ರಾನಿಕ್ ಮತಯಂತ್ರ (ಇವಿಎಂ) ಸಾಗಿಸುತ್ತಿದ್ದ ಕಾರನ್ನು ಕಾಂಗ್ರೇಸ್ ಕಾರ್ಯಕರ್ತರು ಧ್ವಂಸಗೊಳಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ದಾಳಿಯಲ್ಲಿ ಹಾನಿಯಾಗಿರುವ ಇವಿಎಂ ಅನ್ನು ಮತದಾನದಲ್ಲಿ ಬಳಸಲಾಗಿಲ್ಲ ಮತ್ತು ಅದನ್ನು ಸ್ಟ್ರಾಂಡ್ಬೈನಲ್ಲಿ ಇರಿಸಲಾಗಿದೆ ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಕೇಂದ್ರ ನಾಗ್ಪುರ ಕ್ಷೇತ್ರದ ಕಿಲ್ಲಾ ಪ್ರದೇಶದಲ್ಲಿ ಬುಧವಾರ ಮತಗಟ್ಟೆ ಅಧಿಕಾರಿಗಳು ಇವಿಎಂ ಅನ್ನು ಮತಗಟ್ಟೆ ಸಂಖ್ಯೆ 268 ರಿಂದ ನಿಗದಿತ ಸ್ಟ್ರಾಂಗ್ ರೂಮ್ಗೆ ಕಾರಿನಲ್ಲಿ ಸಾಗಿಸುತ್ತಿದ್ದಾಗ ಈ ಘಟನೆ ನಡೆದಿದೆ.

ಪ್ರತಿಪಕ್ಷ ಕಾಂಗ್ರೇಸ್‌ನ ಕಾರ್ಯಕರ್ತರು ದಾಖಲೆಯನ್ನು ಮುದ್ರಿಸಲು ಇವಿಎಂ ಅನ್ನು ಫೋಟೋಕಾಪಿ ಅಂಗಡಿಗೆ ಕೊಂಡೊಯ್ಯಲಾಗುತ್ತಿದೆ ಎಂದು ಆರೋಪಿಸಿದರು ಮತ್ತು ಅವರು ಯಂತ್ರಗಳನ

ಪುತ್ರಿ ಆರಾಧ್ಯ ಹುಟ್ಟುಹಬ್ಬದಲ್ಲಿ ಅಭಿಷೇಕ್ ಗೈರು

ಬಾಲಿವುಡ್ ನಟಿ ಐಶ್ವರ್ಯಾ ರೈ ಪುತ್ರಿ ಆರಾಧ್ಯ ಹುಟ್ಟುಹಬ್ಬದ ಸಂಭ್ರಮದಲ್ಲಿದ್ದಾರೆ. ಮಗಳ ಬರ್ತ್‌ಡೇಯನ್ನು ವಿಶೇಷವಾಗಿ ನಟಿ ಆಚರಿಸಿದ್ದಾರೆ. ಮಗಳು ಆರಾಧ್ಯ ಬರ್ತ್‌ಡೇ ಸಂಭ್ರಮದಲ್ಲಿ ಅಭಿಷೇಕ್ ಭಾಗಿಯಾಗದೇ ಇರೋದು ನೆಟ್ಟಿಗರ ಚರ್ಚೆಗೆ ಗ್ರಾಸವಾಗಿದೆ. ಅಭಿಷೇಕ್ ಮತ್ತು ಐಶ್ವರ್ಯಾಗೆ ಡಿವೋರ್ಸ್ ಆಗಿದ್ಯಾ ಎಂಬ ಅನುಮಾನ ಅಭಿಮಾನಿಗಳಲ್ಲಿ ಮೂಡಿದೆ.

ನಟಿ ಐಶ್ವರ್ಯಾ ಹಂಚಿಕೊಂಡ ಪೋಸ್ಟ್‌ನಲ್ಲಿ, ಅಜ್ಜ ದಿವಂಗತ ಕೃಷ್ಣರಾಜ್ ರೈ ಫೋಟೋಗೆ ಮುಂದೆ ಗೌರವದಿಂದ ಆರಾಧ್ಯ ನಮಸ್ಕರಿಸಿದ್ದಾರೆ. ಇನ್ನೊಂದು ಫೋಟೋದಲ್ಲಿ ಬೃಂದ್ಯಾ ರೈ ಜೊತೆ ನಟಿ, ಆರಾಧ್ಯ ಪೋಸ್ ಕೊಟ್ಟಿದ್ದಾರೆ. ಆರಾಧ್ಯರ ಬಾಲ್ಯದ ಫೋಟೋ, ಬರ್ತ್‌ಡೇ ಆಚರಣೆಯ ಫೋಟೋವನ್ನು ಹಂಚಿಕೊಂಡಿದ್ದಾರೆ.

ನನ್ನ ಮಗಳಿಗೆ ಹುಟ್ಟುಹಬ್ಬದ ಶುಭಾಶಯಗಳು. ಇಬ್ಬರೂ ನನ್ನ ಜೀವನದ ಶಾಶ್ವತ ಪ್ರೀತಿ, ಅಪ್ಪ- ಅಜ್ಜ ಮತ್ತು ನನ್ನ ಪ್ರೀತಿಯ ಆರಾಧ್ಯ. ನನ್ನ ಹೃದಯ ನೀನು ಎಂದು ಬರೆದುಕೊಂಡಿದ್ದಾರೆ. ಐಶ್ವರ್ಯಾ ಹಂಚಿಕೊಂಡಿರುವ ಪೋಸ್ಟ್‌ನಲ್ಲಿ ಅಭಿಷೇಕ್ ಮತ್ತು ಬಚ್ಚನ್ ಪರಿವಾರದವರು ಇಲ್ಲದೇ ಇರೋದು ಸಾಕಷ್ಟು ಚರ್ಚೆ ಹುಟ್ಟು ಹಾಕಿದೆ. ಇಲ್ಲಿ ಏನೋ ಸರಿಯಿಲ್ಲ. ಐಶ್ವರ್ಯಾ ಮತ್ತು ಅಭಿಷೇಕ್ ಜೊತೆಯಾಗಿಲ್ಲ ಎಂದೆಲ್ಲಾ ನೆಟ್ಟಿಗರು ಕಾಮೆಂಟ್ ಮಾಡಿದ್ದಾರೆ.

ಜೀಬ್ರಾಗೆ ಭೀಮ ಬೆಂಬಲ

ಕನ್ನಡದ ಡಾಲಿ ಧನಂಜಯ ಹಾಗೂ ತೆಲುಗಿನ ಸತ್ಯದೇವ್ ನಟನೆಯ 'ಜೀಬ್ರಾ' ಬಿಡುಗಡೆಗೆ ದಿನಗಣನೆ ಶುರುವಾಗಿದೆ. ಹೀಗಾಗಿ ಡಾಲಿ ಹಾಗೂ ಸತ್ಯದೇವ್ ಅಂತಿಮ ಪ್ರಚಾರದಲ್ಲಿ ಬ್ಯುಸಿಯಾಗಿದ್ದಾರೆ. ಬೆಂಗಳೂರಿನ ಮಾಲ್‌ವೊಂದರಲ್ಲಿ ನಿನ್ನೆ (ನ.19) ಪ್ರೀ-ರಿಲೀಸ್ ಕಾರ್ಯಕ್ರಮ ನಡೆಯಿತು. ಈ ಇವೆಂಟ್‌ಗೆ ಮುಖ್ಯ ಅತಿಥಿಗಳಾಗಿ ದುನಿಯಾ ವಿಜಯ್ ಕುಮಾರ್, ಸತೀಶ್ ನೀನಾಸಂ, ಸಪ್ತಮಿ ಗೌಡ, ನಾಗಭೂಷಣ್, ನವೀನ್ ಶಂಕರ್ ಭಾಗವಹಿಸಿದ್ದರು.

ದುನಿಯಾ ವಿಜಯ್ ಮಾತನಾಡಿ, ಧನಂಜಯ ಬಗ್ಗೆ ಅಪಾರವಾದ ಗೌರವಿದೆ. ತಾನು ಬೆಳೆದು ತನ್ನವವರನ್ನು ಬೆಳೆಯುಸುತ್ತಾರೆ. ಧನಂಜಯ ಬಂದ ರೂಟ್, ಸ್ಟಗಲ್, ಅವರು ಮನಸ್ಸು ನನಗೆ ಇಷ್ಟ. 'ಸಲಗ' ಸಿನಿಮಾದಲ್ಲಿ ಮುಖ್ಯ ಪಾತ್ರ ಮಾಡಿ ನನಗೆ ಗೆಲುವು ತಂದು ಕೊಟ್ಟಿದ್ದಾರೆ. ಸತ್ಯದೇವ್ ಕಷ್ಟುಪಟ್ಟು ದೊಡ್ಡ ಸ್ಥಾನಕ್ಕೆ ಬಂದು ನಿಂತಿದ್ದಾರೆ. ಸಿನಿಮಾಗೆ ಭಾಷೆ ಇಲ್ಲ. ಎಷ್ಟು ಖುಷಿ, ನೋವು ಹಂಚಿಕೊಳ್ಳುತ್ತೇವೆ. 'ಜೀಬ್ರಾ' ನಮ್ಮ ಕನ್ನಡದ ಸಿನಿಮಾ ಆಗಿದೆ. ಚಿತ್ರಕ್ಕೆ ಒಳ್ಳೆಯದಾಗಲಿ ಎಂದಿದ್ದಾರೆ.

ಡಾಲಿ ಮಾತನಾಡಿ, ಕನ್ನಡ ವರ್ಷನ್ ಸಿನಿಮಾಗಳನ್ನು ನೀವು ಹೆಚ್ಚಾಗಿ ನೋಡುವುದರಿಂದ ಡಿಮ್ಯಾಂಡ್ ಕ್ರಿಯೇಟ್ ಆಗುತ್ತದೆ. ಬೈಕೊಂಡು ಕುರುವುದರಿಂದ ಯಾವುದು ಆಗುವುದಿಲ್ಲ. ಪಕ್ಕ ಕನ್ನಡ ಸಿನಿಮಾ ಎನಿಸಲು ಶಶಾಂಕ್ ಅಂಡ್ ಟೀಂ ತುಂಬಾ ಚೆನ್ನಾಗಿ ಡಬ್ ಮಾಡಿದ್ದಾರೆ. 'ಜೀಬ್ರಾ' ಇದೇ ನವೆಂಬರ್ 22ಕ್ಕೆ ಕನ್ನಡದಲ್ಲಿಯೂ ಬಿಡುಗಡೆಯಾಗುತ್ತಿದೆ ನೋಡಿ ಬೆಂಬಲಿಸಿ ಎಂದರು. ಸತ್ಯದೇವ್ ಅವರು ಬೆಂಗಳೂರಿನಲ್ಲಿ ಕೆಲಸ ಮಾಡ್ತಿದ್ದ ದಿನಗಳನ್ನು ನೆನಪಿಸಿಕೊಂಡು ಮೆಲುಕು ಹಾಕಿದರು. 'ಜೀಬ್ರಾ' ಸಿನಿಮಾ ರಿಲೀಸ್‌ಗೆ ರೆಡಿಯಿದೆ. ನಿಮ್ಮ ಬೆಂಬಲ ಸಿನಿಮಾ ಮೇಲೆ ಇರಲಿದೆ ಎಂದರು.

ಸಿನಿ ವಾಹಿನಿ

ರಿಲೇಷನ್‌ಶಿಪ್‌ನಲ್ಲಿರೋದಾಗಿ ಒಪ್ಪಿಕೊಂಡ ವಿಜಯ್ ದೇವರಕೊಂಡ

ತೆಲುಗು ನಟ ವಿಜಯ್ ದೇವರಕೊಂಡ ಇದೀಗ ಸಿನಿಮಾಗಿಂತ ಅವರ ವೈಯಕ್ತಿಕ ವಿಚಾರವಾಗಿ ಸದ್ದು ಮಾಡುತ್ತಿದ್ದಾರೆ. ಇತ್ತೀಚಿನ ಸಂದರ್ಶನವೊಂದರಲ್ಲಿ ರಿಲೇಷನ್‌ಶಿಪ್‌ನಲ್ಲಿರೋದಾಗಿ ವಿಜಯ್ ಒಪ್ಪಿಕೊಂಡಿದ್ದಾರೆ.

ಸಂದರ್ಶನವೊಂದರಲ್ಲಿ ಪ್ರೀತಿ, ಮದುವೆ ಬಗ್ಗೆ ಓಪನ್ ಆಗಿ ವಿಜಯ್ ಮಾತನಾಡಿದ್ದಾರೆ. ಯಾರಾದರೂ ಪ್ರೀತಿ ಮಾಡಿದ್ರೆ ಆ ಅನುಭವ ಹೇಗಿರುತ್ತದೆ ಎಂಬುದು ತಿಳಿದಿದೆ. ಪ್ರೀತಿ ನಿರೀಕ್ಷೆಯಿಂದ ಬರುತ್ತದೆ ಎಂದಿದ್ದಾರೆ. ಬೇಷರತ್ತಾದ ಪ್ರೀತಿಯನ್ನು ನಿರೀಕ್ಷಿಸುವುದು ಸರಿಯೇ ಎಂಬುದು ನನಗೆ ತಿಳಿದಿಲ್ಲ ಎಂದಿದ್ದಾರೆ. ಯಾರನ್ನಾದರೂ ಸರಿಯಾಗಿ ತಿಳಿದುಕೊಂಡು ಸ್ನೇಹ ಬೆಳೆಸಿದ ನಂತರವೇ ಅವರಿಗೆ ನಾನು ಹತ್ತಿರವಾಗುತ್ತೇನೆ. ನಾನು ಡೇಟ್‌ಗೆ ಹೋಗುವುದಿಲ್ಲ ಎಂದಿದ್ದಾರೆ. ಆಗ ನಿರೂಪಕಿಗೆ ನನಗೆ 35 ವರ್ಷವಾಗಿದೆ. ನಾನು ಒಬ್ಬಂಟಿಯಾಗಿರುತ್ತೇನೆ ಎಂದು ನೀವು ಭಾವಿಸುತ್ತೀರಾ ಎಂದು ವಿಜಯ್ ಕೇಳಿದ್ದಾರೆ.

ಆ ನಂತರ ಮದುವೆ ಬಗ್ಗೆ ಮಾತನಾಡಿ, ಮದುವೆ ಮಹಿಳೆಯರಿಗೆ ಸಾಕಷ್ಟು ಸವಾಲಿನ ಸಂಗತಿಯಾಗಿದೆ. ಮದುವೆ ಯಾರ ವೃತ್ತಿಗೂ ಅಡ್ಡಿಯಾಗಬಾರದು. ಮಹಿಳೆಯರಿಗೆ ಮದುವೆ ಕಷ್ಟ, ಇದು ನೀವು ಮಾಡುತ್ತಿರುವ ವೃತ್ತಿಯ ಮೇಲೆ ಅವಲಂಬಿತವಾಗಿರುತ್ತದೆ ಎಂದರು.



ಬಘೀರ ಒಟಿಟಿ ರಿಲೀಸ್ ಫಿಕ್ಸ್

ಪ್ರಶಾಂತ್ ನೀಲ್ ಬಘೀರ ಸಿನಿಮಾಗೆ ಕಥೆ ಬರೆದಿದ್ದು, ಡಾ. ಸೂರಿ ನಿರ್ದೇಶನ ಮಾಡಿದ್ದಾರೆ. ಹೊಂಬಾಳೆ ಫಿಲ್ಮ್ಸ್ ಬಘೀರ ಸಿನಿಮಾವನ್ನು ನಿರ್ಮಾಣ ಮಾಡಿದೆ.

ಶ್ರೀಮುರುಳಿ, ರುಕ್ಮಿಣಿ ವಸಂತ್ ನಟನೆಯ ಕನ್ನಡ ಸಿನಿಮಾ ಬಘೀರ ಚಿತ್ರ ಒಟಿಟಿ ರಿಲೀಸ್ ಫಿಕ್ಸ್ ಆಗಿದೆ. ನವೆಂಬರ್ 21ರಂದು ಚಿತ್ರ ಓಟಿಟಿ ವೇದಿಕೆಗಳಲ್ಲಿ ರಿಲೀಸ್ ಆಗಲಿದೆ ಎಂದು ಹೇಳಲಾಗಿದೆ. ಪ್ರಶಾಂತ್ ನೀಲ್ ಬಘೀರ ಸಿನಿಮಾಗೆ ಕಥೆ ಬರೆದಿದ್ದು, ಡಾ. ಸೂರಿ ನಿರ್ದೇಶನ ಮಾಡಿದ್ದಾರೆ. ಹೊಂಬಾಳೆ ಫಿಲ್ಮ್ಸ್ ಬಘೀರ ಸಿನಿಮಾವನ್ನು ನಿರ್ಮಾಣ ಮಾಡಿದೆ. ಥಿಯೇಟರ್ ಗಳಲ್ಲಿ ಬಘೀರಾ ಸಿನಿಮಾ ಅ.31 ರಂದು ಬಿಡುಗಡೆಯಾಗಿತ್ತು. ಒಟಿಟಿ ವೇದಿಕೆಗಳಲ್ಲಿ ಬಘೀರ ಕನ್ನಡ, ತಮಿಳು, ತೆಲುಗು, ಮಲಯಾಳಂ, ತುಳು ಭಾಷೆಯಗಳಲ್ಲಿ ಲಭ್ಯವಿರಲಿದ್ದು, ಇಂಗ್ಲೀಷ್ ಸಬ್ ಟೈಟಲ್ ಗಳಿರಲಿವೆ.

ಎಜೆ ಶೆಟ್ಟಿ ಸಿನಿಮೆಟಾಗ್ರಫಿ ಬಘೀರಾ ಸಿನಿಮಾಗೆ ಇದ್ದು, ಅಂಜನೀಶ್ ಬಿ ಲೋಕನಾಥ್ ಸಂಗೀತ ನೀಡಿದ್ದಾರೆ. ಬಘೀರ ಸಿನಿಮಾ ಜಾಗತಿಕ ಡಿಜಿಟಲ್ ವೇದಿಕೆಗಳಲ್ಲಿ ಸ್ಟ್ರೀಮಿಂಗ್ ಹಕ್ಕುಗಳನ್ನು ಪಡೆದ ಮೊದಲ ಕನ್ನಡ ಸಿನಿಮಾ ಆಗಿದ್ದು, ಕನ್ನಡದ ಡಿಜಿಟಲ್ ಸ್ಪೇಸ್ ನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ದಿರುವ ಸಿನಿಮಾ ಆಗಿದೆ.

ಅಕ್ಕಿನೇನಿ ಸೋದರಳಿಯನ ಜೊತೆ ಮೀನಾಕ್ಷಿ ಚೌಧರಿ ಮದುವೆ

ಟಾಲಿವುಡ್ ನಟ ನಾಗಾರ್ಜುನ ಅಕ್ಕಿನೇನಿ ಪುತ್ರ ನಾಗಚೈತನ್ಯ ಮತ್ತು ಶೋಭಿತಾ ಮದುವೆಗೆ ಭರ್ಜರಿ ಸಿದ್ಧತೆ ನಡೆಯುತ್ತಿದೆ. ಈ ಬೆನ್ನಲ್ಲೇ ನಾಗಾರ್ಜುನ ಸಹೋದರಿ ಪುತ್ರ ಸುಶಾಂತ್ ಮದುವೆಯ ಬಗ್ಗೆ ಹರಿದಾಡುತ್ತಿದೆ. 'ಗುಂಟೂರು ಖಾರಂ' ನಟಿ ಮೀನಾಕ್ಷಿ ಚೌಧರಿ ಜೊತೆ ಸುಶಾಂತ್ ಮದುವೆ ಆಗಲಿದ್ದಾರೆ ಎನ್ನಲಾದ ಸುದ್ದಿಗೆ ಸ್ವತಃ ನಟಿ ಸ್ಪಷ್ಟನೆ ನೀಡಿದ್ದಾರೆ.

ಸುಶಾಂತ್ ಜೊತೆಗಿನ ಮದುವೆ ವಿಚಾರ ಅದು ವದಂತಿಯಷ್ಟೇ ಎಂದಿದ್ದಾರೆ. ನಾನು ಅವರೊಂದಿಗೆ ಮದುವೆಯಾಗುತ್ತಿಲ್ಲ. ಈ ವದಂತಿಗಳು ಹೇಗೆ ಬರುತ್ತದೆ ಎಂಬುದು ತಿಳಿಯುತ್ತಿಲ್ಲ ಎಂದರು. ನಾನು ಸಿಂಗಲ್ ಆಗಿದ್ದೇನೆ, ಎಂಗೇಜ್ ಆಗೋದ್ದಕ್ಕೆ ರೆಡಿಯಿಲ್ಲ ಎಂದು ನಟಿ ಸ್ಪಷ್ಟನೆ ನೀಡಿದ್ದಾರೆ. 2021ರಲ್ಲಿ ಸುಶಾಂತ್‌ಗೆ ನಾಯಕಿಯಾಗಿ ಮೀನಾಕ್ಷಿ ತೆಲುಗು ಸಿನಿಮಾವೊಂದರಲ್ಲಿ ನಟಿಸಿದರು. ಅಲ್ಲಿಂದ ಇವರಿಬ್ಬರ ನಡುವೆ ಸಮ್‌ಥಿಂಗ್ ಸಮ್‌ಥಿಂಗ್ ಇದೆ ಎಂದು ವದಂತಿ ಹಬ್ಬಿತ್ತು. ಅದಕ್ಕೀಗ ನಟಿಯ ಕಡೆಯಿಂದ ಉತ್ತರ ಸಿಕ್ಕಿದೆ. ಇನ್ನೂ 'ಗುಂಟೂರು ಖಾರಂ' ಚಿತ್ರದಲ್ಲಿ ಮಹೇಶ್ ಬಾಬುಗೆ ಜೊತೆ ಮೀನಾಕ್ಷಿ ನಟಿಸಿದ್ದರು. ವಿಜಯ್ ದಳಪತಿ ನಟನೆಯ ಗೋಟ್ ಚಿತ್ರದಲ್ಲಿ ಹೀರೋಯಿನ್ ಆಗಿ ನಟಿಸಿದರು. ಇದೀಗ ವರುಣ್ ತೇಜ್ ನಟನೆಯ ಮಟ್ಕಾ, ವಿಶ್ವಕ್ ಸೇನ್ ಹೊಸ ಚಿತ್ರಕ್ಕೆ ಮೀನಾಕ್ಷಿ ನಾಯಕಿಯಾಗಿ ನಟಿಸಿದ್ದಾರೆ. ಈ ಸಿನಿಮಾ ರಿಲೀಸ್‌ಗೆ ರೆಡಿಯಿದೆ.

ಪರ್ತ್ ಟೆಸ್ಟ್ ಮುಗಿಯುವ ಮುನ್ನವೇ ತಂಡ ಸೇರಿಕೊಳ್ಳಲಿದ್ದಾರೆ ರೋಹಿತ್

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್ ಗವಾಸ್ಕರ್ ಟ್ರೋಫಿಯ ಮೊದಲ ಪಂದ್ಯ ನಾಳೆಯಿಂದ ಪರ್ತ್‌ನ ಆಪ್ಟಸ್ ಕ್ರೀಡಾಂಗಣದಲ್ಲಿ ಆರಂಭವಾಗಲಿದೆ. ಈ ಸರಣಿಯ ಮೊದಲ ಪಂದ್ಯದಲ್ಲಿ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಆಡುತ್ತಿಲ್ಲ. ಎರಡನೇ ಮಗುವಿನ ಜನನದ ಕಾರಣದಿಂದ ಅವರು ಭಾರತ ತಂಡದೊಂದಿಗೆ ಆಸ್ಟ್ರೇಲಿಯಾಕ್ಕೆ ಹೋಗಲಿಲ್ಲ. ಇದೀಗ ಕುಟುಂಬದೊಂದಿಗೆ ಕಾಲ ಕಳೆದಿರುವ ರೋಹಿತ್ ಆಸ್ಟ್ರೇಲಿಯಾಕ್ಕೆ ಹಾರಲು ಸಜ್ಜಾಗಿದ್ದಾರೆ.

ಬಜ್‌ನ ವರದಿಯ ಪ್ರಕಾರ, ರೋಹಿತ್ ನವೆಂಬರ್ 24 ರಂದು ಆಸ್ಟ್ರೇಲಿಯಾಕ್ಕೆ ತಲುಪುವ ಸಾಧ್ಯತೆಗಳಿವೆ. ಅಂದರೆ ಪರ್ತ್‌ನಲ್ಲಿ ನಡೆಯಲ್ಲಿರುವ ಮೊದಲ ಟೆಸ್ಟ್‌ನ ಮೂರನೇ ದಿನದಂದು ರೋಹಿತ್ ಭಾರತ ತಂಡವನ್ನು ಸೇರಿಕೊಳ್ಳಬಹುದು. ಈ ಮೊದಲು, ಸರಣಿಯ ಆರಂಭಿಕ ಪಂದ್ಯಕ್ಕೂ ಮುಂಚೆಯೇ ರೋಹಿತ್ ತಂಡವನ್ನು ಸೇರಿಕೊಳ್ಳಬಹುದು ಎಂದು ವರದಿಯಾಗಿತ್ತು.

ಆದರೆ ಎರಡನೇ ಮಗುವಿನ ಜನನದ ನಂತರ ಮಡದಿ ಹಾಗೂ ಕುಟುಂಬದೊಂದಿಗೆ ಇನ್ನಷ್ಟು ಸಮಯ ಇರಬೇಕೆಂದು ರೋಹಿತ್ ಬಯಸಿದ್ದರು. ಹೀಗಾಗಿ ರೋಹಿತ್ ಅವರನ್ನು ಮೊದಲ ಟೆಸ್ಟ್‌ನಿಂದ ಹೊರಗಿಡಲಾಗಿತ್ತು. ಇದೀಗ ರೋಹಿತ್ ನವೆಂಬರ್ 22 ರ ಬೆಳಿಗ್ಗೆ ಆಸ್ಟ್ರೇಲಿಯಾವನ್ನು ತಲುಪುವ ಸಾಧ್ಯತೆಗಳಿದ್ದು, ಎರಡನೇ ಟೆಸ್ಟ್‌ನಲ್ಲಿ ಆಡುವುದನ್ನು ಕಾಣಬಹುದಾಗಿದೆ.

ಕ್ರಿಕ್‌ಬಜ್ ವರದಿಯ ಪ್ರಕಾರ, ರೋಹಿತ್ ಅವರು ಭಾನುವಾರ ತಂಡವನ್ನು ಸೇರಿಕೊಳ್ಳುವುದಾಗಿ ಬಿಸಿಸಿಐಗೆ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಇದರರ್ಥ, ಡಿಸೆಂಬರ್ 6 ರಿಂದ ಅಡಿಲೇಡ್‌ನಲ್ಲಿ ನಡೆಯಲಿರುವ ಈ ಸರಣಿಯ ಎರಡನೇ ಪಂದ್ಯಕ್ಕೆ ರೋಹಿತ್ ಲಭ್ಯವಿರುತ್ತಾರೆ. ಪರ್ತ್ ಟೆಸ್ಟ್ ನಂತರ ಕ್ಯಾನ್‌ಬೆರಾದಲ್ಲಿ ಪ್ರೈಮ್ ಮಿನಿಸ್ಟರ್ 11ರ ವಿರುದ್ಧ ಟೀಂ ಇಂಡಿಯಾ ಅಭ್ಯಾಸ ಪಂದ್ಯವನ್ನು ಆಡಬೇಕಾಗಿದೆ. ಹೀಗಾಗಿ ರೋಹಿತ್ ಕೂಡ ಈ ಪಂದ್ಯದಲ್ಲಿ ಆಡುವುದನ್ನು ಕಾಣಬಹುದು. ರೋಹಿತ್ ಶರ್ಮಾ ಅವರ ಪತ್ನಿ ರಿತಿಕಾ ಸಜ್ದೆ ಅವರು ನವೆಂಬರ್ 15 ರಂದು ತಡರಾತ್ರಿ ಗಂಡು ಮಗುವಿಗೆ ಜನ್ಮ ನೀಡಿದ್ದರು. ಆ ಬಳಿಕ ಮೊದಲ ಟೆಸ್ಟ್‌ಗೂ ಮುನ್ನ ರೋಹಿತ್ ತಂಡವನ್ನು ಸೇರಿಕೊಳ್ಳಬಹುದು ಎಂದು ವರದಿಯಾಗಿತ್ತು. ಆದರೆ ಈ ಬಗ್ಗೆ ಮಾಹಿತಿ ನೀಡಿದ್ದ ಕೋಚ್ ಗಂಭೀರ್, ರೋಹಿತ್ ಮೊದಲ ಟೆಸ್ಟ್‌ಗೆ ಅಲಭ್ಯರಾಗಲಿದ್ದು, ಅವರ ಸ್ಥಾನದಲ್ಲಿ ಜಸ್ಪ್ರೀತ್ ಬುಮ್ರಾ ಟೀಂ ಇಂಡಿಯಾವನ್ನು ಮುನ್ನಡೆಸಲಿದ್ದಾರೆ ಎಂದಿದ್ದರು.

ಪರ್ತ್ ಟೆಸ್ಟ್‌ಗೆ ಟೀಂ ಇಂಡಿಯಾ:
ಬುಮ್ರಾ ನಾಯಕ), ಯಶಸ್ವಿ ಜೈಸ್ವಾಲ್, ಅಭಿಮನ್ಯು ಈಶ್ವರನ್, ಪಡಿಕ್ಕಲ್, ಗಿಲ್, ಕೊಹ್ಲಿ, ಕೆಎಲ್ ರಾಹುಲ್, ಪಂತ್ , ಸರ್ಫರಾಜ್ ಖಾನ್, ಧ್ರುವ ಜುರೆಲ್ , ರವಿಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ, ಪ್ರಸಿದ್ಧ ಕೃಷ್ಣ, ಹರ್ಷಿತ್ ರಾಣಾ, ನಿತೀಶ್ ಕುಮಾರ್ ರೆಡ್ಡಿ, ವಾಷಿಂಗ್ಟನ್ ಸುಂದರ್.

ಕೊಹ್ಲಿ ಮುಂದಿದೆ 10 ದಾಖಲೆಗಳು

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯು ಶುಕ್ರವಾರದಿಂದ (ನವೆಂಬರ್ 22) ಆರಂಭವಾಗಲಿದೆ. ಈ ಸರಣಿಯ ಐದು ಪಂದ್ಯಗಳ ಮೂಲಕ ವಿರಾಟ್ ಕೊಹ್ಲಿಗೆ ಹಲವು ದಾಖಲೆಗಳನ್ನು ಬರೆಯಲು ಉತ್ತಮ ಅವಕಾಶವಿದೆ. ಈ ಎಲ್ಲಾ ದಾಖಲೆಗಳ ಪಟ್ಟಿ ಈ ಕೆಳಗಿನಂತಿದೆ...

ಅತ್ಯಧಿಕ ರನ್: ಆಸ್ಟ್ರೇಲಿಯಾದಲ್ಲಿ ಟೆಸ್ಟ್‌ನಲ್ಲಿ ಭಾರತದ ಪರ ಅತಿ ಹೆಚ್ಚು ರನ್ ಗಳಿಸಿದ ಸಚಿನ್ ತೆಂಡೂಲ್ಕರ್ (1,809) ಅವರನ್ನು ಹಿಂದಿಕ್ಕಲು ವಿರಾಟ್ ಕೊಹ್ಲಿ (1352) ಗೆ ಇನ್ನು ಕೇವಲ 458 ರನ್‌ಗಳ ಅಗತ್ಯವಿದೆ.

ಅತ್ಯಧಿಕ ಶತಕ: 2. ವಿರಾಟ್ ಕೊಹ್ಲಿ ಆಸ್ಟ್ರೇಲಿಯಾ ನೆಲದಲ್ಲಿ 6 ಟೆಸ್ಟ್ ಶತಕಗಳನ್ನು ಬಾರಿಸಿದ್ದಾರೆ. ಈ ಸರಣಿಯಲ್ಲಿ 4 ಸೆಂಚುರಿ ಸಿಡಿಸಿದರೆ, ಇಂಗ್ಲೆಂಡ್‌ನ ಜಾಕ್ ಹಾಬ್ಸ್ (9) ಹೆಸರಿನಲ್ಲಿರುವ ಸಾರ್ವಕಾಲಿಕ ದಾಖಲೆ ಮುರಿಯಬಹುದು.

ಅತಿ ಹೆಚ್ಚು ಟೆಸ್ಟ್ ರನ್: ಅಡಿಲೇಡ್ ಸ್ಟೇಡಿಯಂನೊಂದಿಗೆ ವಿಶೇಷ ಬಾಂಧವ್ಯ ಹೊಂದಿರುವ ವಿರಾಟ್ ಕೊಹ್ಲಿ 2ನೇ ಟೆಸ್ಟ್‌ನಲ್ಲಿ 93 ರನ್‌ಗಳಿಸಿದರೆ, ಅಡಿಲೇಡ್‌ನಲ್ಲಿ ಅತ್ಯಧಿಕ ರನ್‌ಗಳಿಸಿದ ವಿದೇಶಿ ಬ್ಯಾಟರ್ ಎನಿಸಿಕೊಳ್ಳಲಿದ್ದಾರೆ.

ರನ್ ಸರದಾರ: ಆಸ್ಟ್ರೇಲಿಯಾದಲ್ಲಿ ಅತಿ ಹೆಚ್ಚು ಅಂತಾರಾಷ್ಟ್ರೀಯ ರನ್‌ಗಳ ದಾಖಲೆ ಹೊಂದಿರುವ ವಿರಾಟ್ ಕೊಹ್ಲಿ 74 ರನ್‌ಗಳಿಸಿದರೆ 3500 ರನ್ ಗಡಿಯನ್ನು ಮುಟ್ಟಬಹುದು.

ಸೆಂಚುರಿ ಸ್ಟಾರ್: ಆಸ್ಟ್ರೇಲಿಯಾದ ಒಂದೇ ಮೈದಾನದಲ್ಲಿ ಅತ್ಯಧಿಕ ಶತಕ ಸಿಡಿಸಿದ ವಿದೇಶಿ ಬ್ಯಾಟರ್ ಎನಿಸಿಕೊಳ್ಳಲು ವಿರಾಟ್ ಕೊಹ್ಲಿಗೆ ಒಂದು ಶತಕದ ಅಗತ್ಯವಿದೆ. ಅದರಂತೆ ಅಡಿಲೇಡ್‌ನಲ್ಲಿ ಒಂದು ಸೆಂಚುರಿ ಸಿಡಿಸಿದರೆ ಈ ದಾಖಲೆ ಕಿಂಗ್ ಕೊಹ್ಲಿ ಪಾಲಾಗಲಿದೆ.

ಅತ್ಯಧಿಕ ಬೌಂಡರಿ: ಆಸ್ಟ್ರೇಲಿಯಾದಲ್ಲಿ ಟೆಸ್ಟ್‌ನಲ್ಲಿ ಅತಿ ಹೆಚ್ಚು ಬೌಂಡರಿಗಳನ್ನು ಬಾರಿಸಿದ ದಾಖಲೆ ಸಚಿನ್ ತೆಂಡೂಲ್ಕರ್ (209) ಹೆಸರಿನಲ್ಲಿದೆ. ಇನ್ನು 59 ಬೌಂಡರಿಸಿದರೆ ಈ ದಾಖಲೆಯನ್ನು ವಿರಾಟ್ ಕೊಹ್ಲಿ ತಮ್ಮದಾಗಿಸಿಕೊಳ್ಳಬಹುದು.

ಅತ್ಯಧಿಕ ಪಂದ್ಯಗಳ ದಾಖಲೆ: ಒಂದು ರಾಷ್ಟ್ರದ ವಿರುದ್ಧ 100 ಅಂತರಾಷ್ಟ್ರೀಯ ಪಂದ್ಯಗಳನ್ನು ಆಡಿದ ಸಚಿನ್ ತೆಂಡೂಲ್ಕರ್ ದಾಖಲೆಯನ್ನು ಸರಿಗಟ್ಟಲು ವಿರಾಟ್ ಕೊಹ್ಲಿ ಆಸ್ಟ್ರೇಲಿಯಾ ವಿರುದ್ಧ 3 ಪಂದ್ಯಗಳನ್ನಾಡಿದರೆ ಸಾಕು.

ಸೆಂಚುರಿ ವೀರ: ಆಸ್ಟ್ರೇಲಿಯಾ ವಿರುದ್ಧ ಅತೀ ಹೆಚ್ಚು ಶತಕ ಸಿಡಿಸಿದ ಸಚಿನ್ ತೆಂಡೂಲ್ಕರ್ (20 ಶತಕ) ಸಾರ್ವಕಾಲಿಕ ದಾಖಲೆಯನ್ನು ಮೀರಿಸಲು ವಿರಾಟ್ ಕೊಹ್ಲಿಗೆ (16 ಶತಕ) 5 ಶತಕಗಳ ಅವಶ್ಯಕತೆಯಿದೆ.

ಅತಿ ಹೆಚ್ಚು ಕ್ಯಾಚ್‌ಗಳು: ಆಸ್ಟ್ರೇಲಿಯಾ ವಿರುದ್ಧ ಅತ್ಯಧಿಕ ಕ್ಯಾಚ್ ಹಿಡಿದ ಫೀಲ್ಡರ್‌ಗಳ ಪಟ್ಟಿಯಲ್ಲಿ ವಿರಾಟ್ ಕೊಹ್ಲಿ (66) ಅಗ್ರಸ್ಥಾನದಲ್ಲಿದ್ದಾರೆ. ಈ ಪಟ್ಟಿಯಲ್ಲಿ 70 ಸಂಖ್ಯೆಯ ಮಾರ್ಕ್ ಮುಟ್ಟಲು 4 ಕ್ಯಾಚ್‌ಗಳನ್ನು ಹಿಡಿದರೆ ಸಾಕು.

ಬೌಂಡರಿ ಬ್ಯಾಟರ್: ಆಸ್ಟ್ರೇಲಿಯಾ ವಿರುದ್ಧ ವಿರಾಟ್ ಕೊಹ್ಲಿ ಈವರೆಗೆ 496 ಬೌಂಡರಿಗಳನ್ನು ಬಾರಿಸಿದ್ದಾರೆ. ಇದೀಗ 4 ಬೌಂಡರಿಗಳನ್ನು ಸಿಡಿಸಿದರೆ 500ರ ಗಡಿ ತಲುಪಬಹುದು. ಇದರೊಂದಿಗೆ ಸಚಿನ್ ತೆಂಡೂಲ್ಕರ್ (764) ಮತ್ತು ಬ್ರಿಯಾನ್ ಲಾರಾ (550) ನಂತರ ಈ ಸ